ಸಂಪುಟ: ೦೬/ ಸಂಚಿಕೆ: ೨೮೫/ಶನಿವಾರ ದಿನಾಂಕ : ೧೧-೦೧-೨೦೨೫/ ಪುಟ: ೬/ ಬೆಲೆ ೨-೦೦

ಸತ್ಯಕ್ಕೆ ಕಿರಣ ಸುಳ್ಳಿಗೆ ಕಿಡಿ

ಕಛೇರಿ ದೂರವಾಣಿ ಸಂಖ್ಯೆ 0831-3564491

# ಬೆಳಗಿನ ಸೂರ್ಯೋದಯ

ಕನ್ನಡ ಪ್ರಾದೇಶಿಕ ದಿನಪತ್ರಿಕೆ

■ಬೆಳಗಾವಿ ■ಧಾರವಾಡ ■ಬಾಗಲಕೋಟ ■ವಿಜಯಪುರ■ಗದಗ■ಕೊಪ್ಪಳ■ಹಾವೇರಿ■ಕಾರವಾರ

ಸಂಪಾದಕರು : ಗುರುರಾಜ ಈರಪ್ಪಾ. ಕದಮ, Editor : GURURAJ IRAPPA. KADAM Cell : 9620099959

Volume : 06/ ISSUE : 285/ SATURDAY Date : 11-01-2025/ RNI No. KARKAN/2019/77640/ Postal Reg No. PMG/KA/NK/BM/135/21-24 / POST AT Vantamury Colony Post Office / email : belaginasuryodaya@gmail.com / Page : 6 / Rs. 2.00

## ಪತ್ರಕರ್ತ ಶಾಹೀದಧಾರವಾಡಕರ ನಿಧನ

ಬೆಳಗಾವಿ; ಹಿರಿಯ ಪತ್ರಕರ್ತ ಶಾಹೀದಧಾರವಾಡಕರಅವರು ಶುಕ್ರವಾರ ಬೆಳಿಗ್ಗೆ ಗೋಕಾಕದ ಬಣಗಾರಓಣಿಯತಮ್ಮ ಸ್ವಗೃಹದಲ್ಲಿ



ನಿಧನರಾದರು. ಅವರಿಗೆ 72 ವರ್ಷ ವಯಸ್ಸಾಗಿತ್ತು. ಅವರುತಮ್ಮ ಹಿಂದೆ ಪತ್ನಿ ,ಇಬ್ಬರು ಪುತ್ರರು, ಇಬ್ಬರು ಪುತ್ರಿಯರು , ನಾಲ್ವರು ಸಹೋದರರು, ಮೂವರು ಸಹೋದರಿಯರು, ಮೊಮ್ಮಕ್ಕಳು ಹಾಗೂ ಅಪಾರ ಬಂಧು ಬಳಗವನ್ನು ಬಿಟ್ಟಾಗಲಿದ್ದಾರೆ.

ದಿವಂಗತರು ನಾಡೋಜ ದಿನಪತ್ರಿಕೆ ಮತ್ತುಜೋಹರ್ ಎ- ಗುಫ್ತಾರ್ ದಿನಪತ್ರಿಕೆಯ ಸಂಪಾದಕಎಸ್.ಬಿ. ಧಾರವಾಡಕರ , ಸಮದರ್ಶಿ ದಿನಪತ್ರಿಕೆಯ ಸಂಪಾದಕ ಎ.ಬಿ. ಧಾರವಾಡಕರ ಮತ್ತುರಾಜಕೀಯ ಮೌಲ್ಯ ದಿನಪತ್ರಿಕೆ ಸಂಪಾದಕ ಪಿ.ಬಿ .ಧಾರವಾಡಕರ ಇವರುಗಳ ಹಿರಿಯ ಸಹೋದರರಾಗಿದ್ದಾರೆ.

ಹಲವಾರು ವರ್ಷಗಳ ಕಾಲ ವಿಜಯಪುರದಲ್ಲಿ ಸೇವೆ ಸಲ್ಲಿಸಿದ್ದ ಇವರ ನಿಧನಕ್ಕೆ ಬೆಳಗಾವಿ ಜಿಲ್ಲಾ ಮತ್ತು ಪ್ರಾದೇಶಿಕ ದಿನಪತ್ರಿಕೆಗಳ ಸಂಪಾದಕರ ಸಂಘ ಮತ್ತು ಬೆಳಗಾವಿ ಜಿಲ್ಲೆಯ ಸಮಸ್ತ ಪತ್ರಿಕಾ ಬಳಗದವರು ಸಂತಾಪ ವ್ಯಕ್ತಪಡಿಸಿ ದಿವಂಗತರಆತ್ಮಕ್ಕೆಚಿರಶಾಂತಿಯನ್ನುಕೋರಿದ್ದಾರೆ.

ದಿವಂಗತರ ನಿಧನದಿಂದಅವರ ಸಮಸ್ತ ಪರಿವಾರದವರಿಗೆಆಗಿರುವದುಃಖವನ್ನು ಭರಿಸುವ ಶಕ್ತಿಯನ್ನು ಭಗವಂತನು ನೀಡಲೆಂದು ಪ್ರಾರ್ಥಿಸಿದ್ದಾರೆ.

## ಯು.ಪಿ.ಎಸ್.ಸಿ ಹುದ್ದೆಗಳಿಗೆ ತರಬೇತಿಗಾಗಿ ಅಭ್ಯರ್ಥಿಗಳ ಆಯ್ಕೆ ಪರೀಕ್ಷೆ ಪರೀಕ್ಷಾ ಕೇಂದ್ರಗಳ ಸುತ್ತ ನಿಷೇದಾಜ್ಞೆ ಜಾರಿ

ಬೆಳಗಾವಿ, : ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ವತಿಯಿಂದ ಜರುಗಲಿರುವ ಸಮಾಜ ಕಲ್ಯಾಣ ಇಲಾಖೆ, ಹಿಂದುಳಿದ ವರ್ಗಗಳ ಇಲಾಖೆಯಿಂದ ಯು.ಪಿ.ಎಸ್.ಸಿ. ಹುದ್ದೆಗಳಿಗೆ ತರಬೇತಿ ನೀಡಲು ಅಭ್ಯರ್ಥಿಗಳನ್ನು ಆಯ್ಕೆ ಮಾಡಲು 12-01-2025 ರಂದು ಅಭ್ಯರ್ಥಿಗಳನ್ನು ಆಯ್ಕೆ ಮಾಡಿಕೊಳ್ಳಲು ಪ್ರವೇಶ ಪರೀಕ್ಷೆಯನ್ನು ನಡೆಸಲಾಗುತ್ತಿದೆ.

ಪರೀಕ್ಷೆಗಳು ನಿಷ್ಪಕ್ಷಪಾತವಾಗಿ ಹಾಗೂ ಯಾವುದೇ ಅಡೆತಡೆಗಳಿಲ್ಲದೇ ನಡೆಯುವಂತೆ ನೋಡಿಕೊಳ್ಳಲು ಮತ್ತು ಪರೀಕ್ಷಾ ಕೇಂದ್ರಗಳ ಸುತ್ತಲೂ ಕಾನೂನು ಸುವ್ಯವಸ್ಥೆಯನ್ನು ಕಾಪಾಡಿಕೊಳ್ಳುವ ಸಲುವಾಗಿ ಪರೀಕ್ಷಾ ಕೇಂದ್ರಗಳ ಸುತ್ತಲೂ 200 ಮೀಟರ್ ವ್ಯಾಪ್ತಿಯಲ್ಲಿ ದಿನಾಂಕ:12-01-2025 ರಂದು ಮಧ್ಯಾಹ್ನ 1.00 ಗಂಟೆಯಿಂದ ಸಂಜೆ 5.00 ಗಂಟೆಯವರೆಗೆ ಸಾರ್ವಜನಿಕರು, ಗುಂಪು ಗುಂಪಾಗಿ ಸೇರುವುದನ್ನು ನಿಷೇಧಿಸಿ ಬೆಳಗಾವಿ ನಗರ ಪೋಲಿಸ ಆಯುಕ್ತರು ನಿಷೇದಾಜ್ಞೆಯನ್ನು ಹೊರಡಿಸಿರುತ್ತಾರೆ.

ಪರೀಕ್ಷಾ ಕೇಂದ್ರಗಳ ವಿವರ: ಸರ್ಕಾರಿ ಸರದಾರ್ಸ ಪದವಿ ಪೂರ್ವ ಕಾಲೇಜು, ಮಾರಾಠಾ ಮಂಡಳ ಪದವಿ ಪೂರ್ವ ಕಾಲೇಜು ಚವಾಟ್ ಗಲ್ಲಿ, ಜ್ಯೋತಿ ಪದವಿ ಪೂರ್ವ ಕಾಲೇಜು, ರಾಣಿ ಪಾರ್ವತಿ ದೇವಿ ಕಾಲೇಜು, ಜಿ.ಎಸ್.ಎಸ್. ಪದವಿ ಪೂರ್ವ ಕಾಲೇಜು, ಟಿಳಕವಾಡಿ, ಕೆ.ಎಲ್.ಎಸ್. ಗೋಗಟೆ ವಾಣಿಜ್ಯ ಮತ್ತು ವಿಜ್ಞಾನ ಪದವಿ ಪೂರ್ವ ಕಾಲೇಜು, ಟಿಳಕವಾಡಿ, ಸರ್ಕಾರಿ ಚಿಂತಾಮನಿರಾವ ಪದವಿ ಪೂರ್ವ ಕಾಲೇಜು, ಗೋಮಟೇಶ ಸಂಯುಕ್ತ ಪದವಿ ಪೂರ್ವ ಕಾಲೇಜು ಹಾಗೂ ಬೆನನ್‌ಸ್ಮಿತ್ ಪದವಿ ಪೂರ್ವ ಕಾಲೇಜು.

## ಜಿಲ್ಲಾ ಮಟ್ಟದ ಗ್ಯಾರೆಂಟಿ ಯೋಜನೆಗಳ ಅನುಷ್ಠಾನ ಸಭೆ

# ಸಮರ್ಪಕ ಅನುಷ್ಠಾನಕ್ಕೆ ಅಧಿಕಾರಿಗಳು ಶ್ರಮ ವಹಿಸಿ: ವಿನಯ ನಾವಲಗಟ್ಟಿ



ಬೆಳಗಾವಿ, ರಾಜ್ಯ ಸರ್ಕಾರ ಅನುಷ್ಠಾನಗೊಳಿಸಿರುವ ಪಂಚ ಗ್ಯಾರಂಟಿ ಯೋಜನೆಗಳು ಜಿಲ್ಲೆಯಲ್ಲಿ ಶೇಕಡಾ 95% ಫಲಾನುಭವಿಗಳಿಗೆ ತಲುಪುತ್ತಿದ್ದು ಉಳಿದವರಿಗೂ ಅವುಗಳ ಅನುಕೂಲ ಕಲ್ಪಿಸಿಕೊಡಲು ಸಂಬಂಧಿಸಿದ ಅಧಿಕಾರಿಗಳು ಶ್ರಮ ವಹಿಸಬೇಕು ಎಂದು ಪಂಚ ಗ್ಯಾರಂಟಿ ಯೋಜನೆಯ ಅನುಷ್ಠಾನ ಸಮಿತಿ ಜಿಲ್ಲಾ ಅಧ್ಯಕ್ಷ ವಿನಯ ನಾವಲಗಟ್ಟಿ ಅವರು ತಿಳಿಸಿದರು.

ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಶುಕ್ರವಾರ (ಜ.10) ನಡೆದ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ನ್ಯಾಯ ಬೆಲೆ ಅಂಗಡಿಗಳಲ್ಲಿ ನಿಯಮಾನುಸಾರ ಪಡಿತರ ವಿತರಣೆ ಮಾಡುತ್ತಿಲ್ಲ ಎಂದು ವ್ಯಾಪಕ ದೂರುಗಳು ಕೇಳಿಬರುತ್ತಿವೆ ಸಂಬಂಧಿಸಿದ ಅಧಿಕಾರಿಗಳು ಭೇಟಿ ನೀಡಿ ಪರಿಶೀಲನೆ ನಡೆಸಬೇಕು ಎಂದು ಹೇಳಿದರು. ಗೃಹಲಕ್ಷ್ಮೀ ಯೋಜನೆಯಡಿ ನೀಡಲಾಗುತ್ತಿರುವ 2 ಸಾವಿರ ಹಣ ತಲುಪದಿದ್ದವರನ್ನು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯವರು ಗುರುತಿಸಿ ದಾಖಲೆ ಪರಿಶೀಲಿಸಿ ತಾಂತ್ರಿಕ ದೋಷ ಸರಿಪಡಿಸಿಕೊಡಬೇಕು ಈ ಸಂಬಂಧ ಯಾವುದೇ ಸಮಸ್ಯೆಗಳಿದ್ದರೂ ನಮ್ಮ ಗಮನಕ್ಕೆ ತರುವಂತೆ ವಿನಯ ನಾವಲಗಟ್ಟಿ ತಿಳಿಸಿದರು.

ಎಲ್.ಪಿ.ಜಿ ಗ್ಯಾಸ್ ಸಿಲಿಂಡರ್ ನೀಡಲು ಬಂದ ಗ್ಯಾಸ್ ಏಜೆನ್ಸಿಗಳಿಂದ ಪ್ರತಿ ಸಿಲೆಂಡರ್‌ಗೆ ಬೆಲೆ ನಿಗದಿಗಿಂತ ಹೆಚ್ಚುವರಿಯಾಗಿ ಹಣ ವಸೂಲಿ ಮಾಡಲಾಗುತ್ತಿದೆ. ಆಹಾರ ಇಲಾಖೆಯಿಂದ ಗ್ಯಾಸ್ ಏಜೆನ್ಸಿಗಳಿಗೆ ಹೆಚ್ಚು ಹಣ ಪಡೆಯದಂತೆ ಕಡ್ಡಾಯವಾಗಿ ಸೂಚನೆ ನೀಡಬೇಕು ಎಂದು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಚಿಕ್ಕೋಡಿ ಸದಸ್ಯರೊಬ್ಬರು ತಿಳಿಸಿದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಮಾತನಾಡಿ ಗ್ಯಾರಂಟಿ ಯೋಜನೆಗಳ ಸಮರ್ಪಕ ಅನುಷ್ಠಾನಕ್ಕೆ ಸಂಬಂಧಿಸಿದ ಎಲ್ಲ ಅಧಿಕಾರಿಗಳು ತಮ್ಮ ವ್ಯಾಪ್ತಿಯಲ್ಲಿ ಭೇಟಿ ನೀಡಿ ನಿರಂತರ ಕ್ರಿಯಾಶೀಲರಾಗಿರಬೇಕು. ಅನರ್ಹ ಬಿಪಿಎಲ್ ಪಡಿತರ ಚೀಟಿಗಳನ್ನು ರದ್ದು ಮಾಡಲು ಈಗಾಗಲೇ ಮುಖ್ಯಮಂತ್ರಿಗಳಿಂದ ನಿರ್ದೇಶನ ನೀಡಲಾಗಿದೆ. ಅದರಂತೆ ಸದ್ಯದಲ್ಲಿ ಅಂತಹ ಪಡಿತರ ಚೀಟಿಗಳನ್ನು ಗುರುತಿಸಿ ರದ್ದುಪಡಿಸಲಾಗುವುದು ಎಂದು ತಿಳಿಸಿದರು.

ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಸದಸ್ಯರಿಗೆ ಗೌರವ ಧನ ಹೆಚ್ಚಿರುವ ಕುರಿತು ಈಗಾಗಲೇ ನಿರ್ದೇಶನ ಬಂದಿದೆ. ಯೋಜನೆಗಳ ಸದ್ಬಳಕೆಗೆ ಸದಸ್ಯರು ಕಾರ್ಯ ವ್ಯಾಪ್ತಿಯಲ್ಲಿ ನಿರಂತರ ಸಭೆಗಳನ್ನು ಆಯೋಜಿಸಬೇಕು

ಗ್ಯಾರಂಟಿ ಯೋಜನೆಗಳು ಅನುಷ್ಠಾನಕ್ಕೆ ಯಾವುದೇ ರೀತಿಯ ತೊಂದರೆ ಇಲ್ಲ. ಇತರೆ ರಾಜ್ಯಗಳಿಗೆ ಹೋಲಿಸಿದರೆ ಸರ್ಕಾರ ಯೋಜನೆಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಿದೆ ಎಂದು ಜಿ.ಪಂ ಸಿಇಒ ರಾಹುಲ್ ಶಿಂಧೆ ತಿಳಿಸಿದರು.

ಜಿಲ್ಲೆಯಲ್ಲಿ ಒಟ್ಟು 3 ವಿಭಾಗಗಳಡಿಯಲ್ಲಿ ಒಟ್ಟು 15 ಬಸ್ ಘಟಕಗಳಿಂದ 1593 ಬಸ್ ಗಳು ಪ್ರತಿದಿನ ಕಾರ್ಯಾಚರಣೆ ಮಾಡಲಾಗುತ್ತಿದೆ. ಶಕ್ತಿ ಯೋಜನೆ ಪೂರ್ವದಲ್ಲಿ ಪ್ರತಿದಿನ ಸರಾಸರಿ 5.40 ಲಕ್ಷ ಪ್ರಯಾಣಿಕರು ಪ್ರಯಾಣಿಸುತ್ತಿದ್ದಾರೆ. ಶಕ್ತಿ ಯೋಜನೆ ಪ್ರಾರಂಭದ ನಂತರ ಪ್ರತಿದಿನ ಸರಾಸರಿ ಒಟ್ಟು 7.79 ಲಕ್ಷ ಪ್ರಯಾಣಿಕರು ಪ್ರಯಾಣಿಸುತ್ತಿದ್ದಾರೆ. ಆದ್ದರಿಂದ ಒಟ್ಟು 2.39 ಲಕ್ಷ ಪ್ರಯಾಣಿಕರ ಸಂಖ್ಯೆಯಲ್ಲಿ ಪ್ರತಿದಿನ ಹೆಚ್ಚಳವಾಗಿರುತ್ತಿದೆ ಎಂದು ಸಾರಿಗೆ ಸಂಸ್ಥೆ ಅಧಿಕಾರಿ ವಿವರಿಸಿದರು.

ಯುವನಿಧಿ ಯೋಜನೆ ಪಡೆಯಲು ಪ್ರಸಕ್ತ ಸಾಲಿನಲ್ಲಿ ಉತ್ತೀರ್ಣ ಹೊಂದಿದ ಪದವೀಧರರ ನೋಂದಣಿ ಈಗಾಗಲೇ ಪ್ರಾರಂಭಿಸಲಾಗಿದೆ. ನೊಂದಣಿಯಾದ 6 ತಿಂಗಳ ನಂತರ ಪ್ರತಿ ತಿಂಗಳ ಪದವೀಧರರಿಗೆ ಹಣ ಬಿಡುಗಡೆ ಮಾಡಲಾಗುವುದು. ಪದವೀಧರರು ಪ್ರತಿ ತಿಂಗಳು ಯಾವುದೇ ಉದ್ಯೋಗ ಪಡೆದಿಲ್ಲ ಎಂದು ಕಡ್ಡಾಯವಾಗಿ ಘೋಷಣಾ ಪತ್ರ ಸಲ್ಲಿಸಬೇಕು ಎಂದು ಉದ್ಯೋಗ ವಿನಿಮಯ ಇಲಾಖೆ ಅಧಿಕಾರಿಗಳು ಮಾಹಿತಿ ನೀಡಿದರು.

ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಬಸವರಾಜ ಹೆಗ್ಗನಾಯಕ, ಆಹಾರ ಇಲಾಖೆ ಉಪ ನಿರ್ದೇಶಕ ಮಲ್ಲಿಕಾರ್ಜುನ್ ನಾಯಕ ಸೇರಿದಂತೆ ಹೆಸ್ಕಾಂ, ಜಿಲ್ಲಾ ಪಂಚಾಯತ್, ಸಾರಿಗೆ ಸಂಸ್ಥೆ, ವಿವಿಧ ಇಲಾಖೆಯ ಅಧಿಕಾರಿಗಳು, ಗ್ಯಾರಂಟಿ ಯೋಜನೆಗಳ ಜಿಲ್ಲಾ ಮಟ್ಟದ ಸಮಿತಿ ಸದಸ್ಯರು, ಸಭೆಯಲ್ಲಿ ಉಪಸ್ಥಿತರಿದ್ದರು.

# ಬೆಳಗಾವಿ ಜಿಲ್ಲಾ ಮಟ್ಟದ ಅಂಚೆ ಚೀಟಿ ಪ್ರದರ್ಶನ

## ಇತಿಹಾಸವನ್ನು ನೆನಪಿಸುವ ಕೆಲಸ ಅಂಚೆ ಇಲಾಖೆ ಮಾಡುತ್ತಿದೆ : ಪೂಜ್ಯ ಶ್ರೀ ಡಾ. ಅಲ್ಲಮಪ್ರಭು ಮಹಾಸ್ವಾಮಿಗಳು..

ಬೆಳಗಾವಿ, : ಬೆಳಗಾವಿ ಜಿಲ್ಲಾ ಮಟ್ಟದ ಅಂಚೆ ಚೀಟಿ ಪ್ರದರ್ಶನ ಇಕ್ಷು ಪೆಕ್ಸ್ 2025 ನ ಕೊನೆಯ ದಿನ ಬೆಳಗಿನ ಅಧಿವೇಶನ ಅಧಿವೇಶನದಲ್ಲಿ ಬೆಳಗಾವಿ ಯ ಇತಿಹಾಸ ಮತ್ತು ಪರಂಪರೆ ಯ ವಿಷಯ ದ ಮೇಲೆ ಆಯೋಜಿಸಲಾದ ವಿಶೇಷ ಲಕೋಟೆ ಬಿಡುಗಡೆ ಸಮಾರಂಭದ ದಿವ್ಯಾ ಸನಿದ್ಯಾ ವಹಿಸಿ ಆಶೀರ್ವಾಚನ ನೀಡಿದ ಬೆಳಗಾವಿಯ ನಾಗನೂರು ಶ್ರೀ ರುದ್ರಾಕ್ಷಿ ಮಠ ಪೂಜ್ಯ ಶ್ರೀ ಡಾ. ಅಲ್ಲಮಪ್ರಭು ಮಹಾಸ್ವಾಮಿಗಳು ಎಸ್ ಜಿ ಬಾಳೆಕುಂದ್ರಿಯವರು ಎರಡನೇ ವಿಶ್ವೇಶ್ವರಯ್ಯ ಎಂದೇ ಪ್ರಖ್ಯಾತರಾದ ಸರಳ ಸಜ್ಜನಿಕೆಯ ಅಭಿಯಂತರರು ಎಂದು ನೆನಪು ಮಾಡುತ್ತಾ ಇಂತಹ ಐತಿಹಾಸಿಕ ಮಹತ್ವದ ಸಾಧಕರನ್ನು, ಸಾಧನೆಗಳನ್ನು ನೆನೆಪಿಸುವ ಕೆಲಸ ಮಾಡಿದ ಅಂಚೆ ಇಲಾಖೆಯ ಕಾರ್ಯ ಅಭಿನಂದನಿಯ ಎಂದರು.

ಕಾರ್ಯಕ್ರಮದ ಉದ್ಘಾಟಕರಾಗಿ ಮಾತನಾಡಿದ ರಾಜ್ಯಸಭಾ ಸಂಸದ ಈರಣ್ಣ ಕಾಡಡಿ ಅಂಚೆ ಇಲಾಖೆಯು ಇತಿಹಾಸ ಮೆಲುಕು ಹಾಕಲು ಅತ್ಯಂತ ಅರ್ಥಪೂರ್ಣ ಕಾರ್ಯಕ್ರಮವನ್ನು ಆಯೋಜಿಸಿದಕ್ಕೆ ಅಭಿನಂದನೆಗಳನ್ನು ಸಲ್ಲಿಸಿ ಇದೊಂದು ಪ್ರೇರಣಾದಯಕ ಕಾರ್ಯಕ್ರಮ ಎಂದು ಕೊಂಡಾಡಿದರು.

ಬೆಳಗಾವಿ ಜಿಲ್ಲಾಧಿಕಾರಿ ಮೋಹಮ್ಮದ್ ರೋಷನ್ ಅವರು ಮಾತನಾಡಿ ಅತಿ ಕಡಿಮೆ ಸಮಯದಲಿ ಕೇವಲ 18 ದಿನಗಳ ಅವಧಿಯಲ್ಲಿ ಕಿತ್ತೂರು ರಾಣಿ ಚೆನ್ನಮ್ಮರ ಎರಡುನೂರು ವರ್ಷಗಳ ಕುರಿತು ಅಂಚೆ ಚೀಟಿ ಯನ್ನು ಬಿಡುಗಡೆ ಗೊಳಿಸಿ ಅಸಾಧ್ಯವನ್ನು ಸಾಧ್ಯ ವಾಗಿಸಿದ ಕೀರ್ತಿ ಬೆಳಗಾವಿ ಅಂಚೆ ಬಳಗಕ್ಕೆ ಅಭಿನಂದನೆ ಸಲ್ಲಿಸಿದರು. ಫಿಲಾಟೆಲಿಸ್ಟ್‌ಗಳು ಇತಿಹಾಸ ಸಂರಕ್ಷಕರು ಎಂದು ಅಭಿಪ್ರಾಯ ಪಟ್ಟರು.

ಕರ್ನಲ್ ಚಂದ್ರ ನೀಲ ರಮಾನಾಥ್ ಕರ್ ನಮ್ಮ ಅಂಚೆ ಅಣ್ಣಾ ದೇಶದ ಪ್ರತಿಯೊಂದು ಮನೆಯ ಅತ್ಯಂತ ಅವಿಭಾಜ್ಯ ಸಂಬಂಧ ಹೊಂದಿದ್ದಾನೆ ಎಂದು ನುಡಿದರು.

ಮಾತನಾಡಿ ಪಂತ ಮಹಾರಾಜರ ಆಧ್ಯಾತ್ಮಿಕ ಬದುಕಿನ ಪರಿಚಯ ಮಾಡಿಕೊಟ್ಟರು ಮತ್ತು ಅಂಚೆ ಇಲಾಖೆಯ ಪ್ರಾಮಾಣಿಕ ಜನ ಸೇವೆಯನ್ನು ಕೊಂಡಾಡಿದರು.



ಕಾರ್ಯಕ್ರಮದಲ್ಲಿ ಬಾಳೆಕುಂದ್ರೀಯ ಶ್ರೀ ದತ್ತ ಸಂಸ್ಥಾನದ ಉಪಾಧ್ಯಕ್ಷರಾದ ಅಪ್ಪಸಾಹೇಬ್ ದಡ್ಡಿಕರ್, ಬೆಳಗಾವಿ ಅಂಚೆ ಅಧೀಕ್ಷಕರಾದ ವಿಜಯ ವಾದೋನಿ, ಗೋಕಾಕ್ ವಿಭಾಗದ ಅಂಚೆ ಅಧಿಕ್ಷಕರಾದ ರಮೇಶ್ ಕಮತೆ, ಚಿಕ್ಕೋಡಿ ಅಂಚೆ ಅಧೀಕ್ಷಕರಾದ ವೆಂಕಟೇಶ್ ಬದಾಮಿ ಉಪಸ್ಥಿತರಿದ್ದರು. ಅಂಚೆ ನಿರೀಕ್ಷಕ ಪ್ರವೀಣ್ ಶೀಲವಂತರ ಸ್ವಾಗತ ಕೋರಿದರು, ಶ್ರೀಮತಿ ಶೃತಿ ನಿರೂಪಿಸಿದರು, ರಾಮದುರ್ಗ ಪ್ರಧಾನ ಅಂಚೆ ಕಚೇರಿಯ ಅಂಚೆ ಪಾಲಕರಾದ ದವಲ್ ಅಣ್ಣಿಗೇರಿ ರವರು ವಂದನಾರ್ಪಣೆ ಸಲ್ಲಿಸಿದರು.

ಕಾರ್ಯಕ್ರಮದಲ್ಲಿ ಶ್ರೀ ಪಂತ ಮಹಾರಾಜ್ ಶ್ರೀ ಕ್ಷೇತ್ರ ಪಂತ ಬಾಳೇ ಕುಂದ್ರಿ ಕುರಿತು , ಉತ್ತರ ಕರ್ನಾಟಕ ದ ಭಗೀರಥ ಎಸ್ ಜಿ ಬಾಳೆಕುಂದ್ರಿ ರವರ ಸ್ಮರಣಾರ್ಥ ಮತ್ತು ಏಷ್ಯದ ಮೊದಲ ಹೈಡ್ರೋ ಎಲೆಕ್ಟ್ರಿಕ್ ಪವರ್ ಹೌಸ್ ಗೋಕಾಕ್ ಜಲಪಾತ ನೆನೆಪಿಗಾಗಿ ವಿಶೇಷ ಅಂಚೆ ಲಕೋಟೆಗಳನ್ನು ಅಂಚೆ ಇಲಾಖೆಯಿಂದ ಲೋಕಾರ್ಪಣೆ ಗೊಳಿಸಲಾಯಿತು ಮತ್ತು ಬೆಳಗಾವಿ ಪರಂಪರೆ ಯನ್ನು ಬಿಂಬಿಸುವ ಚಿತ್ರಯುಕ್ತ ಅಂಚೆ ಕಾರ್ಡ್ ಯನ್ನು ಸಹ ಗಣ್ಯ ಮಾನ್ಯರು ಬಿಡುಗಡೆ ಗೊಳಿಸಿದರು.

## ಆಶಾ ಕಾರ್ಯಕರ್ತರಿಗೆ ತಿಂಗಳಿಗೆ 10 ಸಾವಿರ ರೂ ವೇತನ ನೀಡಲು ಸರ್ಕಾರದ ನಿರ್ಧಾರ: ಮುಖ್ಯಮಂತ್ರಿ

### ಮುಖ್ಯಮಂತ್ರಿ ಸಂಧಾನ ಯಶಸ್ವಿ: ನಾಲ್ಕು ದಿನಗಳ ಅನಿರ್ದಿಷ್ಟಾವಧಿ ಹೋರಾಟ ಅಂತ್ಯ

ಮೈಸೂರು: ಆಶಾ ಕಾರ್ಯಕರ್ತರಿಗೆ ಪ್ರತಿ ತಿಂಗಳು 10 ಸಾವಿರ ರೂ ನೀಡಲು ನಿರ್ಧರಿಸಿದ್ದೇವೆ. ಇದರಿಂದಾಗಿ ಆಶಾ ಕಾರ್ಯಕರ್ತರು ಮುಷ್ಕರ ವಾಪಸ್ ಪಡೆಯುವುದಾಗಿ ಒಪ್ಪಿಕೊಂಡಿದ್ದಾರೆ ಎಂದು ಸಿಎಂ ಸಿದ್ದರಾಮಯ್ಯ ತಿಳಿಸಿದ್ದಾರೆ.






ಮೈಸೂರಿನ ವಿಮಾನ ನಿಲ್ದಾಣದಲ್ಲಿ ಮಾಧ್ಯಮಗಳಿಗೆ ಸಿಎಂ ಸಿದ್ದರಾಮಯ್ಯ ಪ್ರತಿಕ್ರಿಯೆ ನೀಡಿದರು. ಆಶಾ ಕಾರ್ಯಕರ್ತರೊಂದಿಗೆ ಸಭೆ ನಡೆಸಲಾಗಿದೆ. ಈ ಮುಂಚೆ ಮಾಹೆಯಾನ 8000 ರೂ. ನೀಡಲಾಗುತ್ತಿದ್ದು, ಈಗ ಪ್ರೋತ್ಸಾಹಕಗಳನ್ನೂ (ಇನ್ಸೆಂಟಿವ್ಸ್) ಸೇರಿದಂತೆ ಪ್ರತಿ ತಿಂಗಳು 10,000 ರೂ. ನೀಡಲು ನಿರ್ಧಾರ ಕೈಗೊಳ್ಳಲಾಗಿದೆ. ಇದರಿಂದಾಗಿ ಮುಷ್ಕರ ಕೈಬಿಡಲು ಆಶಾ ಕಾರ್ಯಕರ್ತರು ಸಮ್ಮತಿಸಿದ್ದಾರೆ. ಈ ಮೊತ್ತವನ್ನು ನೀಡಲು, ಸರ್ಕಾರದ ಆರ್ಥಿಕ ಪರಿಸ್ಥಿತಿ ಸದೃಢವಾಗಿದೆ ಎಂದು ಸಿಎಂ ಸ್ಪಷ್ಟಪಡಿಸಿದರು.

ನಕ್ಸಲಿಸಂ ಅನ್ನು ಸಂಪೂರ್ಣ ತೊಡೆದು ಹಾಕವುದು ಕಾಂಗ್ರೆಸ್ ಸರ್ಕಾರದ ಉದ್ದೇಶ. ಯಾವುದೇ ಹೋರಾಟ ಶಾಂತಿಯುತವಾಗಿರಬೇಕೇ ಹೊರತು ಹಿಂಸಾತ್ಮಕ ದಾರಿ ಹಿಡಿಯಬಾರದೆಂಬುದು ಸರ್ಕಾರದ ನಿಲುವು. ನಕ್ಸಲರು ಶರಣಾಗಿದ್ದು, ಅವರ ಶಸ್ತ್ರಾಸ್ತ್ರಗಳನ್ನೂ ಮೊಹಜರು ಮಾಡಲು ಕ್ರಮ ಕೈಗೊಳ್ಳಲಾಗುತ್ತಿದೆ. ಹೋರಾಟಗಳು ಸಂವಿಧಾನಾತ್ಮಕ ರೀತಿಯಲ್ಲಿ ನಡೆಯಬೇಕೆಂದು ಡಾ.ಅಂಬೇಡ್ಕರ್ ಅವರು ಹೇಳಿದ್ದರು. ಅನ್ಯಾಯದ ವಿರುದ್ಧ ದನಿ ಎತ್ತಲು ಸಂವಿಧಾನದಲ್ಲಿ ಅವಕಾಶವಿದ್ದರೂ, ಕೈಗೆ ಕಾನೂನು ತೆಗೆದುಕೊಳ್ಳುವ ಅವಕಾಶ ಯಾರಿಗೂ ನೀಡಲಾಗಿಲ್ಲ. ಶೃಂಗೇರಿಯಲ್ಲಿ ಮತ್ತೊಬ್ಬ ನಕ್ಸಲ ಇರುವ ಬಗ್ಗೆ ಸ್ಪಷ್ಟ ಮಾಹಿತಿ ಇಲ್ಲ. ಆದರೂ ಅವರೂ ಕೂಡ ಕಾನೂನಿಗೆ ಶರಣಾಗಿ ಮುಖ್ಯವಾಹಿನಿಗೆ ಬರುವಂತಾಗಲಿ ಎಂದು ತಿಳಿಸಿದರು.

ಅಂಬೇಡ್ಕರ್ ಅವರ ಕುರಿತ ಕಾಂಗ್ರೆಸ್ ಬದ್ಧತೆ ತೋರ್ಪಡಿಸುವ ಅಗತ್ಯವಿಲ್ಲ: ಕಾಂಗ್ರೆಸ್ ಸರ್ಕಾರಕ್ಕೆ ಅಂಬೇಡ್ಕರ್ ಕುರಿತ ಬದ್ಧತೆಯನ್ನು ತೋರ್ಪಡಿಸುವ ಅಗತ್ಯವಿಲ್ಲ. ಸಂವಿಧಾನದ ರಕ್ಷಣೆಯಲ್ಲಿ ತೊಡಗಿರುವ ಕಾಂಗ್ರೆಸ್ ಸರ್ಕಾರ, ಅದರ ಆಶಯಗಳ ಅನುಷ್ಠಾನಕ್ಕೆ ಬದ್ಧವಾಗಿದೆ ಎಂದರು.

ಕೇಂದ್ರದಲ್ಲಿ ಅಮಾನವೀಯ ಹಾಗೂ ರೈತ ವಿರೋಧಿ ಸರ್ಕಾರವಿದೆ: ನವದೆಹಲಿಯಲ್ಲಿ ಎಂಎಸ್ ಪಿ ಬೇಡಿಕೆ ಸಂಬಂಧ ಬಹಳ ದಿನಗಳಿಂದ ರೈತರ ಪ್ರತಿಭಟನೆ ನಡೆಯುತ್ತಿದೆ. ಕೇಂದ್ರ ಸರ್ಕಾರ ರೈತರ ಪರವಾದ ಸರ್ಕಾರವಲ್ಲ. ಬೆಳೆಗಳಿಗೆ ಎಂಎಸ್‌ಪಿ ನೀಡುವುದಕ್ಕೆ ಕಾನೂನು ರಚಿಸುವಂತೆ ರೈತರ ಬೇಡಿಕೆಯಾಗಿದ್ದು, ಈ ಬೇಡಿಕೆಗೆ ಮಣಿಯದ ಅಮಾನವೀಯ ಹಾಗೂ ರೈತ ವಿರೋಧಿ ಸರ್ಕಾರವಾಗಿದೆ ಎಂದು ಕಿಡಿಕಾರಿದರು.

ಚಾಮರಾಜನಗರದಲ್ಲಿ ಸಚಿವ ಸಂಪುಟ ಸಭೆ: ಚಾಮರಾಜನಗರದಲ್ಲಿ ಫೆಬ್ರವರಿ 15 ರಂದು ಸಚಿವ ಸಂಪುಟ ಸಭೆ ನಡೆಯಲಿದ್ದು, ಇದರಲ್ಲಿ ಯಾವುದೇ ಗೊಂದಲವಿಲ್ಲ. ಚಾಮರಾಜನಗರ ಭಾಗದ ಸಮಸ್ಯೆಗಳಿಗೆ ಪರಿಹಾರ ಒದಗಿಸುವ ಉದ್ದೇಶದಿಂದ ಸಭೆ ನಡೆಸಲಾಗುವುದು ಎಂದರು.

ಮೈಸೂರಿನ ರಸ್ತೆಯೊಂದಕ್ಕೆ ಸಿದ್ದರಾಮಯ್ಯ ಆರೋಗ್ಯ ಮಾರ್ಗ ಎಂದು ಹೆಸರಿಡುವ ಕುರಿತು ಪ್ರತಿಕ್ರಿಯೆ ನೀಡಿ, ನನ್ನ 45 ವರ್ಷದ ರಾಜಕೀಯದ ಅವಧಿಯಲ್ಲಿ ಎಂದಿಗೂ ತನ್ನ ಹೆಸರಿನ್ನಿಡುವಂತೆ ತಿಳಿಸಲಿಲ್ಲ. ಹಿಂದೆ ಮೈಸೂರು ವಿಶ್ವವಿದ್ಯಾಲಯದವರು ನೀಡುವ ಡಾಕ್ಟರೇಟ್ ಅನ್ನು ತಾವು ನಿರಾಕರಿಸಿದ್ದನ್ನು ಮುಖ್ಯಮಂತ್ರಿಗಳು ಸ್ಮರಿಸಿದರು.

## ಜಿಲ್ಲೆಗೆ ಹಂಚಿಕೆಯಾದ ಅನುದಾನ ಅಪವ್ಯಯಗೊಳಿಸದೆ ಸಂಪೂರ್ಣವಾಗಿ ಬಳಸಿ : ಜಿಪಂ ಸಿಇಒ ರಾಹುಲ್ ಶಿಂಧೆ

# ವಿವಿಧ ಇಲಾಖೆಗಳ ಪ್ರಗತಿ ಪರಿಶೀಲನಾ ಸಭೆಯಲ್ಲಿ ಅಧಿಕಾರಿಗಳಿಗೆ ಸೂಚನೆ

ಬೆಳಗಾವಿ : ಜಿಲ್ಲಾ ಪಂಚಾಯತ ಸಭಾಂಗಣದಲ್ಲಿ ಜರುಗಿದ ವಿವಿಧ ಇಲಾಖೆಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಜಿಪಂ ಸಿಇಒ ರಾಹುಲ್ ಶಿಂಧೆ ರವರು ಮಾತನಾಡಿದರು.

ಜಿಪಂ ಸಿಇಒ ರಾಹುಲ್ ಶಿಂಧೆ ವಿವಿಧ ಇಲಾಖೆಗಳನ್ನು ಉದ್ದೇಶಿಸಿ ಮಾತನಾಡಿ ಜಿಲ್ಲೆಗೆ ಹಂಚಿಕೆಯಾದ ಅನುದಾನವನ್ನು ಅಪವ್ಯಯಗೊಳಿಸದೆ ಸಂಪೂರ್ಣವಾಗಿ ಬಳಸಲು ಸೂಚಿಸಿದರು.

**ಕೃಷಿ ಇಲಾಖೆ** ಜಿಪಂ ಸಿಇಒ ರಾಹುಲ್ ಶಿಂಧೆ ಮಾತನಾಡಿ ಉತ್ಪಾದಣೆ ಹೆಚ್ಚಿಸುವ ಕಾರ್ಯಕ್ರಮಗಳೊಂದಿಗೆ ಈಗಾಗಲೇ ರಚಿತವಾದ ರೈತ ಉತ್ಪಾದಕ ಸಂಸ್ಥೆಗಳ ಕೇಂದ್ರಿಕೃತವಾಗಿ ಅವುಗಳ ಪುನರುತ್ಸಾನ ಮಾಡುತ್ತಾ ವಿವಿಧ ಬೆಳೆಗಳು ವಿಶೇಷವಾಗಿ ಗೋವಿನಜೋಳ, ಸೋಯಾಬಿನ್, ಅರಿಶಿಣ ಜೇನು ಬೆಳೆಯುವ ರೈತರಿಗೆ ಸೂಕ್ತ ಮಾರುಕಟ್ಟೆ ಕಲ್ಪಿಸಲು ಖರೀದಿದಾರರು ಹಾಗೂ ರೈತರ ಸಭೆಗಳನ್ನು ಏರ್ಪಡಿಸಲು ಸೂಚಿಸಿದರು. ರೈತ ಉತ್ಪಾದಕ ಸಂಸ್ಥೆಗಳನ್ನು ಸ್ವಾವಲಂಬಿಯಾಗಿಸುವ ನಿಟ್ಟಿನಲ್ಲಿ ಕಾರ್ಯೋನ್ಮುಖರಾಗಲು ತಾಲೂಕು ಹಾಗೂ ಜಿಲ್ಲಾಮಟ್ಟದ ಅಧಿಕಾರಿಗಳಿಗೆ ಸೂಚನೆ ನೀಡಿದರು ಅದರ ಜೊತೆಗೆ ನಾಲ್ಕನೆ ತ್ರೈಮಾಸಿಕದಲ್ಲಿ ಚುರುಕಾಗಿ ಕಾರ್ಯನಿರ್ವಹಿಸಲು ತಿಳಿಸಿದರು. ಜಿಲ್ಲೆಯ ಎಲ್ಲಾ ತಾಲೂಕುಗಳಲ್ಲಿ ರಸ್ತೆ ಬದಿಯಲ್ಲಿ ತರಕಾರಿ ಮಾರಾಟ ಮಾಡುವುದನ್ನು ಬದಲಿಸಿ ಸೂಕ್ತ ಸ್ಥಳದಲ್ಲಿ ಮಾರುಕಟ್ಟೆ ಪ್ರಾಂಗಣವನ್ನು ಸ್ಥಾಪಿಸಲು ಕ್ರಿಯಾ ಯೋಜನೆಯನ್ನು ತಯಾರಿಸಲು ಇಲಾಖೆಯ ಅಧಿಕಾರಿಗಳಿಗೆ ಸೂಕ್ತ ನಿರ್ದೇಶನ ನೀಡಿದರು.

**ಪಶು ಪಾಲನೆ ಮತ್ತು ಪಶು ವೈದ್ಯಕೀಯ ಸೇವೆ ಇಲಾಖೆ**

ಉಪನಿರ್ದೇಶಕರು ಪಶು ಪಾಲನೆ ಮತ್ತು ಪಶು ವೈದ್ಯಕೀಯ ಸೇವೆ ಬೆಳಗಾವಿ ಇವರು ಮಾತನಾಡಿ ಪಶುಪಾಲನೆ ಮತ್ತು ಪಶು ವೈದ್ಯಕೀಯ ಸೇವಾ ಇಲಾಖೆಯು ಜಾನುವಾರುಗಳ ಆರೋಗ್ಯ ರಕ್ಷಣೆ ತಳಿ ಅಭಿವೃದ್ಧಿಗೆ ಹಾಗೂ ರೈತರ ಆರ್ಥಿಕ ಮಟ್ಟವನ್ನು ಸುಧಾರಿಸಲು ಹಲವಾರು ಸಾಮಾಜಿಕ ಮತ್ತುಆರ್ಥಿಕ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸುತ್ತಿದೆ 2023-2024 ಹಾಗೂ 2024 -25ರಲ್ಲಿ ಪಶು ಸಂಗೋಪನ ಚಟುವಟಿಕೆಗಳನ್ನು ಅನುಷ್ಠಾನಗೊಳಿಸುವಲ್ಲಿ ಜಿಲ್ಲೆಯು ರಾಜ್ಯದಲ್ಲಿಯೇ ಅಗ್ರಸ್ಥಾನದಲ್ಲಿದೆ ಎಂದು ಮಾನ್ಯರಿಗೆ ತಿಳಿಸಿದರು. ಅದರಂತೆ

* ಜಾನುವಾರುಗಳ ತಳಿ ಅಭಿವೃದ್ಧಿಗಾಗಿ ಕೈಗೊಳ್ಳುವ ಕೃತಕ ಗರ್ಭಧಾರಣೆ, ಕಾರ್ಯಕ್ರಮದಲ್ಲಿ ಡಿಸೆಂಬರ್-2024ರ ವರೆಗೆ 3,25,205 ಕೃತಕ ಗರ್ಭಧಾರಣೆ ಮಾಡಿ ಶೇಕಡ 99 ರಷ್ಟು ಸಾಧನೆ ಮಾಡಲಾಗಿದೆ. ಇಲ್ಲಿಯವರೆಗೆ 96,543 ಜಾನುವಾರುಗಳು ಗರ್ಭದರ್ಶಿದ್ದು 62357 ಕರುಗಳ ಜನನವಾಗಿದೆ.

* ಜಾನುವಾರುಗಳಲ್ಲಿ ಕಂಡುಬರುವ ಸಾಂಕ್ರಾಮಿಕ ರೋಗಗಳಾದ ಕಾಲುಬಾಯಿರೋಗ, ಚಪ್ಪೆಬೇನೆರೋಗ ಗಂಟಲು, ಕರುಳು ಬೇನೆ ರೋಗಗಳ ವಿರುದ್ಧ ಮುಂಜಾಗ್ರತ ಕ್ರಮವಾಗಿ ಜಾನುವಾರುಗಳಲ್ಲಿ ಲಸಿಕೆ ಹಾಕಿ ಸಾಂಕ್ರಾಮಿಕ ರೋಗಗಳನ್ನು ತಡೆಗಟ್ಟಲಾಗುತ್ತಿದೆ 2024-25ನೇ ಸಾಲಿನಲ್ಲಿ1235775 ಜಾನುವಾರುಗಳಿಗೆ ಕಾಲು ಬಾಯಿರೋಗದ ವಿರುದ್ಧ ಲಸಿಕೆ ನೀಡಲಾಗಿದೆ 1459420 ಕುರಿ ಮೇಕೆಗಳಿಗೆ ಕರುಳವೇನೆ ವಿರುದ್ಧ ಲಸಿಕೆ ನೀಡಲಾಗಿದೆ 14,54,700 ಕುರಿ ಮೇಕೆಗಳಿಗೆ ಪಿಪಿ ಆರ್ರೋಗದ ವಿರುದ್ಧ ಲಸಿಕೆ ನೀಡಲಾಗಿದೆ 40,5 19 ಹೆಣ್ಣು ಕರುಗಳಿಗೆ ಕಂದರೋಗದ ವಿರುದ್ಧ ಲಸಿಕೆ ನೀಡಲಾಗಿದೆ.

* ಸ್ಥಳೀಯ ಅಭಿವೃದ್ಧಿ ಯೋಜನೆ ಅಡಿಯಲ್ಲಿ(-ಎಬಿಐಪಿಎಸ್‌ಎಸ್) ಲಿಂಗ ಆಧಾರಿತ ವೀರ್ಯ ನಳಿಕೆಯನ್ನು ಬಳಸಿ ಕೃತಕ ಗರ್ಭಧಾರಣೆ ಮಾಡಿ ಕೇವಲ ಹೆಣ್ಣು ಕರುಗಳೇ ಹುಟ್ಟುವ ಸಾಮರ್ಥ್ಯ ಹೊಂದಿರುವ ವೀರ್ಯ ನಳಿಕೆಗಳನ್ನು ಬಳಸಿ ಕೃತಕ ಗರ್ಭಧಾರಣೆ ಮಾಡುವ ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದ್ದು ಜಿಲ್ಲೆಗೆ 2024-25ನೇ ಸಾಲಿನಲ್ಲಿ ಒಟ್ಟು ಹೆಚ್‌ಎಫ್ 1500 ಜರಸಿ 800 ಹೀಗೆ ಒಟ್ಟು 2300 ವೀರ ಹೇಳಿಕೆಗಳನ್ನು ನೀಡಿದ್ದು



ಇಲ್ಲಿಯವರೆಗೆ 2156 ವೀರ್ಯನಳಿಕಗಳನ್ನು ಬಳಸಿ ಕೃತಕ ಗರ್ಭಧಾರಣೆ ಮಾಡಲಾಗಿದೆ ಡಿಸೆಂಬರ್ 2024 ರವರೆಗೆ 4 ಹೆಣ್ಣು ಕರಗಳ ಜನನವಾಗಿದೆ.

* ಜಾನುವಾರುಗಳ ರೋಗ ನಿರ್ಣಯಿಸಲು ಪಶು ಆಸ್ಪತ್ರೆ ಹುಕ್ಕೇರಿ ಮತ್ತು ಪಶು ಆಸ್ಪತ್ರೆಯ ಚಿಕ್ಕೋಡಿಯಲ್ಲಿ ಹೊಸದಾಗಿ ರೋಗನಿರ್ಣಯ ಪ್ರಯೋಗಾಲಯ ಪ್ರಾರಂಭಿಸಿ ಕ್ರಿಯಾಶೀಲಗೊಳಿಸಲಾಗಿದೆ.

* ರೈತ ಮಹಿಳೆಯರಲ್ಲಿ ಹೈನುಗಾರಿಕೆಯನ್ನು ಪ್ರೋತ್ಸಾಹಿಸಲು 6% ಬಡ್ಡಿ ದರ ಮೊತ್ತವನ್ನುಸರಕಾರದಿಂದ ಬರಿಸಲಾಗುತ್ತಿದೆ ಈ ಯೋಜನೆ ಅಡಿಯಲ್ಲಿ ಸನ್ 2024-25 ನೇ ಸಾಲಿನಲ್ಲಿ ಏಪ್ರಿಲ್ 2024 ರಿಂದ ಗರಿಷ್ಟ65,000 ರೂಪಾಯಿಗಳಿಗೆ ಮಿತಿಗೊಳಿಸಿ ಹೈನುಗಾರಿಕೆಗಾಗಿ ಸಾಲ ಪಡೆದು ಸಕಾಲದಲ್ಲಿ ಮರುಪಾವತಿಸುವ ರೈತ ಮಹಿಳೆಯರಿಗೆ ಅವರು ಪಾವತಿಸುವ ಬಡ್ಡಿ ದರದಲ್ಲಿ 6%ರಷ್ಟನ್ನು ಸರಕಾರ ಇಲಾಖೆ ಮುಖಾಂತರ ಫಲಾನುಭವಯ ಖಾತೆಗೆ ಜಮೆ ಮಾಡಲಾಗುತ್ತದೆ, ಬೆಳಗಾವಿ ಜಿಲ್ಲೆಗೆ ಈ ಯೋಜನೆ ಅಡಿಯಲ್ಲಿ ಒಟ್ಟು 335 ಫಲಾನುಭವಿಗಳ ಗುರಿ ನಿಗದಿಪಡಿಸಲಾಗಿದ್ದು ಮೂರು ಲಕ್ಷ ಮೂರು ಸಾವಿರ ರೂಪಾಯಿಗಳನ್ನುಬಿಡುಗಡೆ ಮಾಡಲಾಗಿದ್ದುಈವರೆಗೆ 26 ಫಲಾನುಭವಿಗಳಿಗೆ 21,963 ಬಡ್ಡಿಸಹಾಯಧನವನ್ನುನೀಡಲಾಗಿದೆ.

* ಪಶು ಸಂಜೀವಿನಿ ಚಿಕಿತ್ಸಾ ಘಟಕದ ಮೂಲಕ ರೈತರ ಮನೆ ಬಾಗಿಲಿನಲ್ಲಿ ಜಾನುವಾರಗಳಿಗೆ ತುರ್ತು ಚಿಕಿತ್ಸೆ ನೀಡಲಾಗುತ್ತಿದ್ದು ಜಿಲ್ಲೆಯಲ್ಲಿ 17 ಪಶು ಸಂಜೀವಿನಿ ಚಿಕಿತ್ಸಾ ಘಟಕದ ವಾಹನದ ಮೂಲಕ ಈ ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದೆ ಏಪ್ರಿಲ್ 2024 ರಿಂದ ಡಿಸೆಂಬರ್ 2024ರವರೆಗೆ 8054 ರೈತರ ಕರೆಗಳಿಗೆ ಸ್ಪಂದಿಸಿ 14 204 ಜಾನುವಾರುಗಳಿಗೆ ತುರ್ತು ಚಿಕಿತ್ಸೆಯನ್ನು ನೀಡಲಾಗುತ್ತಿದ್ದು ರೈತರು 1962 ಟೋಲ್ಫ್ರೀ ನಂಬರ್ಗೆ ಕರೆ ಮಾಡುವುದರ ಮುಖಾಂತರ ಈ ಸೇವೆಯನ್ನು ಪಡೆಯಬಹುದಾಗಿದೆ.

* ಜಿಲ್ಲೆಯಲ್ಲಿ ಜಾನುವಾರಗಳಲ್ಲಿ ಕೃತಕ ಗರ್ಭಧಾರಣೆ ಮತ್ತು ಜಾನುವಾರುಗಳ ಚಿಕಿತ್ಸೆಯಲ್ಲಿ ಸಹಾಯ ನೀಡಲು ನಿರುದ್ಯೋಗ ಯುವಕರನ್ನು ಮೈತ್ರಿ ಕಾರ್ಯಕರ್ತರನ್ನಾಗಿ ಹಾಗೂ ನಿರುದ್ಯೋಗ ಯುವತಿಯರನ್ನು ಪಶು ಸಖಿಯಾಗಿ ಕಾರ್ಯನಿರ್ವಹಿಸಲು ತರಬೇತಿ ನೀಡಲಾಗುತ್ತಿದ್ದುಇವರಿಗೆ 226 ಮೈತ್ರಿ ಕಾರ್ಯಕರ್ತರಿಗೆ ಹಾಗೂ 490 ಪಶು ಸಖಿಯರಿಗೆ ತರಬೇತಿ ನೀಡಿ ಕಾರ್ಯೋನ್ಮುಖಗೊಳಿಸಲಾಗಿದೆ ಎಂದು ಉಪ ನಿರ್ದೇಶಕರು ಪಶುಪಾಲನೆ ಮತ್ತು ಪಶು ವೈದ್ಯಕೀಯ ಸೇವೆ ಬೆಳಗಾವಿ ಇವರು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಜಿಲ್ಲಾಪಂಚಾಯತ್ ಬೆಳಗಾವಿ ಇವರಿಗೆ ವಿವರಣೆ ಮಾಡಿದರು. ಮಾನ್ಯರು ಮಾತನಾಡಿ ಪಶು ಪಾಲನೆ ಮತ್ತು ಪಶು ವೈದ್ಯಕೀಯ ಸೇವೆ ಇಲಾಖೆ 2024-25 ನೇ ಸಾಲಿನ ಯೋಜನೆಗಳಲ್ಲಿ ಉತ್ತಮ ರೀತಿಯಲ್ಲಿ ಪ್ರಗತಿ ಸಾಧಿಸಿರುವುದನ್ನು ಪರಿಗಣಿಸಿ ಮೆಚ್ಚುಗೆ ವ್ಯಕ್ತಪಡಿಸಿದರು.

**ಮೀನುಗಾರಿಕೆ ಇಲಾಖೆ** ಉಪ ನಿರ್ದೇಶಕ ಮೀನುಗಾರಿಕೆ ಇಲಾಖೆ ರವರು ಮಾತನಾಡಿ ಮೀನುಗಾರರಿಗೆ ಸಲಕರಣೆ ಕಿಟ್ ವಿತರಣೆ ಕುರಿತು ಅರ್ಜಿಗಳ ಸ್ವೀಕೃತ ವಾಗಿರುವ ಬಗ್ಗೆ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಗಮನಕ್ಕೆ ತಂದರು. ಅದೇ ರೀತಿ ಹಿಡಕಲ್ ಮೀನುಮರಿ ಪಾಲನಾ ಕೇಂದ್ರದಲ್ಲಿ ಪ್ರಸ್ತುತ ಸಾಲಿನಲ್ಲಿ ಇಲ್ಲಿಯವರೆಗೆ 16.00ಲಕ್ಷ ಬಿತ್ತನೆ ಮೀನುಮರಿಗಳನ್ನು ಹಾಗೂ ಮಲಪ್ರಭಾ ಮೀನುಮರಿ ಕೇಂದ್ರದಿಂದ 3.00ಲಕ್ಷ ಮೀನುಮರಿಗಳನ್ನು ಇಲ್ಲಿಯವರೆಗೆ ಸರಬರಾಜು ಮಾಡಿರುವ ಬಗ್ಗೆ ಮಾನ್ಯರಿಗೆ ತಿಳಿಸಿದರು.ಅದರ ಜೊತೆಗೆ ಇಲಾಖಾ ಕೆರೆಗಳು ಮೀನು ಪಾಶುವಾರು ಹಕ್ಕಿನ ವಿಲೇವಾರಿ ಪ್ರಗತಿ ಬಗ್ಗೆ ಚರ್ಚಿಸಿದರು.

ಜಿಪಂ ಸಿಇಒ ರಾಹುಲ್ ಶಿಂಧೆ ರವರು ಮಾತನಾಡಿ ಭೂತರಾಮನಹಟ್ಟಿ ಅಕ್ವೇರಿಯಂ ಪ್ರವೇಶ ದ್ವಾರವನ್ನು ಮಾರ್ಪಾಡು ಮಾಡುವುದು. ಸದರಿ ಅಕ್ವೇರಿಯಂ ಪ್ರವೇಶ ಫೀ ಕುರಿತು ಚರ್ಚಿಸಿದರು ಹಾಗೂ ಕೆ.ಎಫ್.ಡಿ.ಸಿ ಕ್ಯಾಂಟೀನ ನಿರ್ಮಿಸಲು ಜಾಗವನ್ನು (ನಿವೇಶನ) ಗುರುತಿಸಲು ಕೂಡಲೇ ಕ್ರಮ ವಹಿಸಹಿಸುವಂತೆ ಉಪ ನಿರ್ದೇಶಕ ಮೀನುಗಾರಿಕೆ ಇಲಾಖೆ ಅಧಿಕಾರಿಗೆ ಸೂಚಿಸಿದರು.

**ರೇಷ್ಮೆ ಇಲಾಖೆ :** ಜಿಪಂ ಸಿಇಒ ರಾಹುಲ್ ಶಿಂಧೆ ರವರು ಮಾತನಾಡತ್ತಾ ಹೊಸ ಹಿಪ್ಪು ನೇರಳೆ ನಾಟಿ ಪ್ರಗತಿ, ರೇಷ್ಮೆ ಮೊಟ್ಟೆ ಚಾಕಿ ಪ್ರಗತಿ, ರೇಷ್ಮೆ ಗೂಡು ಉತ್ಪಾದನೆ ಪ್ರಗತಿ, ರೇಷ್ಮೆ ಅಭಿವೃದ್ಧಿ ಯೋಜನೆ ಪ್ರಗತಿ ಹಾಗೂ ರೇಷ್ಮೆ ಕೃಷಿಕರಿಗೆ ತರಬೇತಿ ಕುರಿತು ಉಪ ನಿರ್ದೇಶಕ ರೇಷ್ಮೆ ಇಲಾಖೆ ಅಧಿಕಾರಿ ಮಹೇಶ ಕುಮಾರ ವಾಫೆ ರವರೊಂದಿಗೆ ಚರ್ಚಿಸಿದಾಗ ಉಪ ನಿರ್ದೇಶಕರು ಈ ಕೆಳಗಿನಂತೆ ತಮ್ಮ ಇಲಾಖೆಯ ಪ್ರಗತಿ ಕುರಿತು ವಿವರಣೆ ನೀಡಿದರು. ಹೊಸ ಹಿಪ್ಪುನೇರಳೆ ನಾಟಿ ಪ್ರಗತಿ - 79.92 ಹೆಕ್ಟೇರ್ ಹಿಪ್ಪುನೇರಳೆ ನಾಟಿ ಆಗಿರುತ್ತದೆ,ರೇಷ್ಮೆ ಮೊಟ್ಟೆ ಚಾಕಿ ಪ್ರಗತಿ - 4.41 ಲಕ್ಷ, ರೇಷ್ಮೆ ಗೂಡು ಉತ್ಪಾದನೆ ಪ್ರಗತಿ - 338 ಒ.ಖಿ, ರೇಷ್ಮೆ ಅಭಿವೃದ್ಧಿ ಯೋಜನೆ ಪ್ರಗತಿ - 9 ರೇಷ್ಮೆ ಹುಳು ಸಾಕಾಣಿಕೆ ಮನೆ ಸಹಾಯಧನ ಹಾಗೂ 41 ತಾತ್ಕಾಲಿಕ ಶೆಡ್ ಸಹಾಯಧನ ನೀಡಲಾಗಿದೆ. ಅದೇ ರೀತಿ **ರೇಷ್ಮೆ ಕೃಷಿಕರಿಗೆ ತರಬೇತಿ** - ಜಿಲ್ಲೆಯಲ್ಲಿ 5 ತರಬೇತಿ ಕಾರ್ಯಕ್ರಮಗಳನ್ನು ರಾಯಾಪೂರ ತರಬೇತಿ ಸಂಸ್ಥೆಯಿಂದ ಆಯೋಜಿಸಲಾಗಿದೆ ಎಂದು ಸಭೆಗೆ ತಿಳಿಸಿದರು.

**ತೋಟಗಾರಿಕೆ ಇಲಾಖೆ** ಜಿಪಂ ಸಿಇಒ ರಾಹುಲ್ ಶಿಂಧೆ ತೋಟಗಾರಿಕೆ ಇಲಾಖೆ ಪ್ರಗತಿ ಕುರಿತು ಮಾತನಾಡಿ ತೋಟಗಾರಿಕೆ ಇಲಾಖೆ ಪ್ರಗತಿ ಉತ್ತಮ ರೀತಿಯಲ್ಲಿದ್ದು, ಬೆಳಗಾವಿ ಚಳಿಗಾಲದ ಅಧಿವೇಶನದ ಸಂದರ್ಭದಲ್ಲಿ "ಫ್ಲವರ ಶೋ" ಚೆನ್ನಾಗಿ ಮಾಡಿದ್ದಾರೆ ಎಂದು ಉಪ ನಿರ್ದೇಶಕ ತೋಟಗಾರಿಕೆ ಇಲಾಖೆ ಮಹಾಂತೇಶ ಮುರಗೋಡ ರವರಿಗೆ ಮೆಚ್ಚುಗೆ ವ್ಯಕ್ತಪಡಿಸಿದರು.

ಮುಂದುವರೆದು, ಸರಕಾರದಿಂದ ಹೊಸದಾಗಿ ಜೇಂಕಾರ ಎಂಬ 'ಹನಿ ಬ್ರ್ಯಾಂಡ್' ಮಾಡಿದ್ದು ಇದರು ಕುರಿತು ಜಿಲ್ಲೆಯಾದ್ಯಂತ ವ್ಯಾಪಕ ಪ್ರಚಾರ ಕೈಗೊಳ್ಳುವಂತೆ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಿದರು. ಬೆಳಗಾವಿಯಲ್ಲಿ ವಿವಿಧ ಇಲಾಖೆಗಳ ಸಹಭಾಗಿತ್ವದಲ್ಲಿ ಎಕ್ಸಪೋರ್ಟ್ ಬಗ್ಗೆ ಬಾಯರ್ ಮತ್ತು ಸೇಲ್ಲರ ಮೀಟ್ ಏರ್ಪಡಿಸುವುದು ಹಾಗೂ ಮ್ಯಾಂಗೋ ಸೀಜನ್ ವೇಳೆಯಲ್ಲಿ ಬೆಳಗಾವಿಯಲ್ಲಿ ಮ್ಯಾಂಗೋ ಮೇಳ ಏರ್ಪಡಿಸುವಂತೆ ಉಪ ನಿರ್ದೇಶಕರು ತೋಟಗಾರಿಕೆ ಇಲಾಖೆ ರವರಿಗೆ ಸೂಕ್ತ ನಿರ್ದೇಶನ ನೀಡಿದರು.

ಸಭೆಯಲ್ಲಿ ಜಿಪಂ ಉಪಕಾರ್ಯದರ್ಶಿ(ಅಭಿವೃದ್ಧಿ) ಬಸವರಾಜ್ ಅಡವಿಮಠ, ಮುಖ್ಯ ಯೋಜನಾಧಿಕಾರಿ ಗಂಗಾಧರ ದಿವಟರ, ಜಂಟಿ ನಿರ್ದೇಶಕ ಕೃಷಿ ಶಿವನಗೌಡ ಪಾಟೀಲ, ಉಪನಿರ್ದೇಶಕ ಮಹಾಂತೇಶ ಮುರಗೋಡ ತೋಟಗಾರಿಕೆ ಇಲಾಖೆ, ಉಪ ನಿರ್ದೇಶಕ ರಾಜು ಕುಲೇರ ಪಶು ಸಂಗೋಪನಾ ಇಲಾಖೆ, ಉಪ ನಿರ್ದೇಶಕ ಸಂತೋಷ ಕೊಪ್ಪದ ಮೀನುಗಾರಿಕೆ ಇಲಾಖೆ, ಉಪ ನಿರ್ದೇಶಕ ಮಹೇಶ ಕುಮಾರ ವಾಫೆ ರೇಷ್ಮೆ ಇಲಾಖೆ,ಸಹಾಯಕ ನಿರ್ದೇಶಕ ಕೃಷಿ ಇಲಾಖೆ, ಉಪ ನಿರ್ದೇಶಕ ಕೃಷಿ ಮಾರುಕಟ್ಟೆ, ಲೀಡ್ ಬ್ಯಾಂಕ್ ಪ್ರತಿನಿಧಿ, ನಬಾರ್ಡ ಪ್ರತಿನಿಧಿ ಹಾಗೂ ಇತರೆ ಇಲಾಖೆಗಳ ಜಿಲ್ಲಾ ಮತ್ತು ತಾಲೂಕು ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

# ಕೆ-ಸೆಟ್ ಪರೀಕ್ಷೆಯಲ್ಲಿ ತೇರ್ಗಡೆ



ಮೂಡಲಗಿ : ತಾಲೂಕಿನ ಕಲ್ಲೋಳಿ ಪಟ್ಟಣದ ಶ್ರೀ ರಾಮಲಿಂಗೇಶ್ವರ ಶಿಕ್ಷಣ ಸಂಸ್ಥೆಯ ಪ್ರಥ-'ಮ ದರ್ಜೆ ಕಾಲೇಜಿನ ವಾಣಿಜ್ಯಶಾಸ್ತ್ರ ಉಪನ್ಯಾಸಕ ಸಂತೋಷ ಬಂಡಿ, ರಾಜ್ಯಶಾಸ್ತ್ರ ಉಪನ್ಯಾಸಕ ಎಂ. ಎನ್. ಮುರಗೋಡ ಇವರು ಇತ್ತೀಚೆಗೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರ ನಡೆಸಿದ ಕೆ-ಸೆಟ್ ಪರೀಕ್ಷೆಯಲ್ಲಿ ತೇರ್ಗಡೆಯಾಗಿದ್ದಾರೆ.

ಸದರಿ ಉಪನ್ಯಾಸಕರನ್ನು ಸಂಸ್ಥೆಯ ಅಧ್ಯಕ್ಷ ಬಸಗೌಡ ಪಾಟೀಲ, ಆಡಳಿತ ಮಂಡಳಿ ಸದಸ್ಯರು, ಪ್ರಾಚಾರ್ಯ ಡಾ. ಸುರೇಶ ಹನಗಂಡಿ, ಸಿಬ್ಬಂದಿ ವರ್ಗ ಹಾಗೂ ವಿದ್ಯಾರ್ಥಿಗಳು ಅಭಿನಂದಿಸಿದ್ದಾರೆ.

*******

# ಎಸ್.ಆರ್.ಪೂಜಾರ ಅವರಿಗೆ ರಾಷ್ಟ್ರ ಮಟ್ಟದ ವಿದ್ಯಾಭೂಷಣ ಪ್ರಶಸ್ತಿ



ಮೋಳೆ;- ಕಾಗವಾಡ ತಾಲೂಕಿನ ಶೇಡಬಾಳ ಪಟ್ಟಣದ ಸನ್ಮತಿ ವಿದ್ಯಾಲಯದ ಶಿಕ್ಷಕಿ ಶ್ರೀಮತಿ ಎಸ್.ಆರ್.ಪೂಜಾರ ಅವರಿಗೆ ರಾಷ್ಟ್ರ ಮಟ್ಟದ "ವಿದ್ಯಾಭೂಷಣ" ಪ್ರಶಸ್ತಿ ಪಡೆದುಕೊಂಡಿದ್ದಾರೆ.

ಸರಳ ಸಜ್ಜನಿಕೆಯ ಸಾಕಾರ ಮೂರ್ತಿಗಳಾದ ಶ್ರೀಮತಿ ಎಸ್.ಆರ್.ಪೂಜಾರ ಅವರು ಕಳೆದ ಹಲವಾರು ವರ್ಷಗಳಿಂದ ಈ ಶಾಲೆಯಲ್ಲಿ ಹಿಂದಿ ಶಿಕ್ಷಕಿಯಾಗಿ ಪ್ರಾಮಾಣಿಕವಾಗಿ ಕಾರ್ಯನಿರ್ವಹಸುತ್ತಿದ್ದು, ಇವರ ಅನುಪಮ ಸೇವೆಯನ್ನು ಗುರುತಿಸಿ ಕಸ್ತೂರಿ ಸಿರಿಗನ್ನಡ ವೇದಿಕೆ ಬೆಳಗಾವಿ ಇವರು ಭಾಷಾ ಪ್ರೇಮ ಮತ್ತು ಸಾಧನೆ ಗುರುತಿಸಿ ರಾಷ್ಟ್ರ ಮಟ್ಟದ "ವಿದ್ಯಾಭೂಷಣ" ಪ್ರಶಸ್ತಿ ನೀಡಿ ಗೌರವಿಸಿದ್ದಾರೆ.

ಅದೇ ಪ್ರಕಾರ ಚಿಕ್ಕೋಡಿಯಲ್ಲಿ ಜರುಗಿದ ರಾಜ್ಯ ಸರಕಾರಿ ಪ್ರಾಢಶಾಲಾ ಹಿಂದಿ ಸಹ ಶಿಕ್ಷಕರ ಸಂಘ ಬೆಳಗಾವಿ ಇವರು ಶ್ರೀಮತಿ ಎಸ್,ಆರ್.ಪೂಜಾರ ಅವರಿಗೆ ಹಿಂದಿ ಸಾಧಕ ಸಮ್ಮಾನ ಎಂಬ ಪ್ರಶಸ್ತಿ ನೀಡಿ ಗೌರವಿಸಿದ್ದಾರೆ.

ಶ್ರೀಮತಿ ಎಸ್.ಆರ್.ಪೂಜಾರ ಅವರು ಅವರು ಕಳೆದ ಹಲವಾರು ವರ್ಷಗಳಿಂದ ಕರ್ನಾಟಕ ಹಾಗೂ ಮಹಾರಾಷ್ಟ್ರದ ಗಡಿ ಭಾಗವಾದ ಶೇಡಬಾಳದಲ್ಲಿ ಹಿಂದಿ ಶಿಕ್ಷಕಿಯಾಗಿ ಕಾರ್ಯನಿರ್ವಹಿಸುತ್ತಿದ್ದು, ಅವರ ಸಾಧನೆಯನ್ನು ಗುರುತಿಸಿ ಈ ವರ್ಷ ಎರಡು ಪ್ರಶಸ್ತಿಗಳು ಸಿಕ್ಕಿದ್ದು, ಇವರಿಗೆ ಸನ್ಮತಿ ವಿದ್ಯಾಲಯದ ಆಡಳಿತ ಮಂಡಳಿ, ಮುಖ್ಯೋಪಾಧ್ಯಾಯರು, ಸಹ ಶಿಕ್ಷಕರು ಮತ್ತು ಈ ಭಾಗದಲ್ಲಿ ಹಲವಾರು ಶಿಕ್ಷಣ ಸಂಸ್ಥೆಗಳು ಹಾಗೂ ಶಿಕ್ಷಕರು ಮತ್ತು ಶಿಕ್ಷಣ ಪ್ರೇಮಿಗಳು ಮೆಚ್ಚುಗೆ ವ್ಯಕ್ತ ಪಡಿಸಿದ್ದಾರೆ.

# ಸಾರವಾಡ ಗ್ರಾಮವು 24X7 ನೀರು ಸರಬರಾಜು ಗ್ರಾಮ ಘೋಷಣೆ



ವಿಜಯಪುರ : ಜಿಲ್ಲೆಯಲ್ಲಿ ಸುಮಾರು 652 ಗ್ರಾಮಗಳಲ್ಲಿ ಜೇ ಜೇ ಎಂ. ಕಾಮಗಾರಿ ಅನುಷ್ಠಾನ ಗೊಳಿಸಲಾಗಿದೆ ಎಲ್ಲ ಕಾಮಗಾರಿಗಳನ್ನು ಉತ್ತಮ ರೀತಿಯಿಂದ ನಿರ್ಮಾಣ ಮಾಡಿ ವಾರದ 24 ಗಂಟೆ ನೀರು ಸರಬರಾಜು ಗ್ರಾಮ ಎಂದು ಘೋಷಿಸಲು ಆಯಾ ಗ್ರಾಮದ ಅಧಿಕಾರಿಗಳು ಕ್ರಮ ಕೈಗೊಳ್ಳಬೇಕು ಎಂದು ಸಂಸದ ರಮೇಶ ಜಿಗಜಿಣಗಿ ಹೇಳಿದರು.

ವಿಜಯಪುರ ಜಿಲ್ಲೆಯ ಸಾರವಾಡ ಗ್ರಾಮದ ಈಶ್ವರ ದೇವಾಲಯದಲ್ಲು ಹಮ್ಮಿಕೊಂಡ ಸಾರವಾಡ ಗ್ರಾಮವು 24 X 7 ನೀರು ಸರಬರಾಜು ಗ್ರಾಮ ಘೋಷಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು ಮಿತವಾಗಿ ನೀರು ಬಳಸಿ 24 X 7 ನೀರು ಸರಬರಾಜು ಗ್ರಾಮ ಎಂಬುದನ್ನು ನಿರಂತರವಾಗಿ ನಡೆಸಿಕೊಂಡು ಹೋಗುವಂತೆ ಗ್ರಾಮ ಪಂಚಾಯತ್ ಅಧಿಕಾರಿಗಳಿಗೆ ಅವರು ಸೂಚಿಸಿದರು.

ಕಾರ್ಯಪಾಲಕ ಬಸವರಾಜ ಕುಂಬಾರ ಮಾತನಾಡಿ ವಾರದ 24 ಗಂಟೆ ನೀರು ಸರಬರಾಜು ಯೋಜನೆಯಡಿ ಪ್ರತಿ ಮನೆಗೆ ಮೀಟರ್ ಒದಗಿಸಲಾಗಿದೆ, ಪ್ರತಿ ದಿನ ಪ್ರತಿ ವ್ಯಕ್ತಿಗೆ 55ಲೀಟರ್ ನೀರನ್ನು ಶುದ್ಧೀಕರಿಸಿ ಸ್ವಚ್ಛವಾದ ನೀರು ಪೂರೈಸಲಾಗುವುದು ಎಂದರು.

ಕಾರ್ಯಾಚರಣೆ ಮತ್ತು ನಿರ್ವಹಣೆಗೆ ಸ್ವಸಹಾಯ ಸಂಘಗಳ ಬಳಕೆ ಮಾಡಿಕೊಳ್ಳಲಾಗುವುದು. ಸುಸ್ಥಿರತೆ ಗ್ರಾಮ ನೀರು ಸರಬರಾಜು ಮತ್ತು ನೈರ್ಮಲ್ಯ ಸಮಿತಿಗಳಿಗೆ ತರಬೇತಿ ನೀಡಿ ಬಲಪಡೆಸಲಾಗಿದೆ. ಹಾಗೂ ಪ್ರತಿ ನಲ್ಲಿಯಿಂದ ಒಂದು ನಿಮಿಷಕ್ಕೆ10 ಲೀಟರ್ ಪೂರೈಸಲಾಗುತ್ತದೆ ಎಂದು ಅವರು ಹೇಳಿದರು.

ಗ್ರಾ. ನೀ.ಸ.ಮತ್ತು ನೈರ್ಮಲ್ಯ ಸಹಾಯಕ ಕಾರ್ಯಪಾಲಕ ಸತೀಶ್ ಪಾಟೀಲ್ ಪ್ರಾಸ್ತಾವಿಕ ಮಾತನಾಡಿದರು. ರಾಜ್ಯ ಯೋಜನಾ ಸಮನ್ವಯಾಧಿಕಾರಿ ಡಾ.ನಂದಕುಮಾರ ಸ್ವಾಗತಿಸಿದರು. ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿ ಗೀತಾ ಕಲ್ಲವ್ವಗೋಳ ವಂದಿಸಿದರು.

ಸಹಾಯಕ ಕಾರ್ಯಪಾಲಕ ಶ್ರೀನಿವಾಸ ಡಿಪಿಎಂ, ಶ್ರೀ ಎಸ್.ಬಿ, ಪಾಟೀಲ ಅಭಿಯಂತರರು, ಶಾಖಾಧಿಕಾರಿ ಮಲ್ಲಿಕಾರ್ಜುನ್ ವಗ್ಗರ್, ಸಚಿನ ಸಿಂಪಿ ಹಾಗೂ ಗೀತಾ ಮಹಾರ್, ಡಿಟಿಎಸ್ ಸಿಬ್ಬಂದಿ ಉಪಸ್ಥಿತರಿದ್ದರು.

*******

# 12ರಂದು ಬಣಗಾರ ಸಮಾಜದ ವಧು- ವರರ ಸಮಾವೇಶ

ಬೆಳಗಾವಿ: 'ಬೆಳಗಾವಿಯ ಬಣಗಾರ ಸಮಾಜದ ವತಿಯಿಂದ 8ನೇ ಅಖಿಲ ಭಾರತ ಮಟ್ಟದ ವಧು ವರರ ಹಾಗೂ ಪಾಲಕರ ಸಮಾವೇಶವನ್ನು ಜ.12ರಂದು ಜೆಎನ್‌ಎಂಸಿ ಕ್ಯಾಂಪಸ್ಸಿನಲ್ಲಿರುವ ಡಾ.ಬಿ.ಎಸ್. ಜೀರಗೆ ಸಭಾಂಗಣದಲ್ಲಿ ಆಯೋಜಿಸಲಾಗಿದೆ' ಎಂದು ಸಮಾಜದ ಅಧ್ಯಕ್ಷ ಅರುಣಕುಮಾರ ಈ. ಜೋತಾವರ ತಿಳಿಸಿದರು.

ನಗರದಲ್ಲಿ ಶುಕ್ರವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, 'ಭಾನುವಾರ ಬೆಳಿಗ್ಗೆ 10 ಗಂಟೆಗೆ ಉದ್ಘಾಟನಾ ಸಮಾರಂಭ ನಡೆಯಲಿದೆ. ನಂತರ ವಧು ವರರ ಹಾಗೂ ಪಾಲಕರ ಸಮಾವೇಶದ ಚಟುವಟಿ-ಕೆಗಳು ಆರಂಭವಾಗಲಿವೆ. ಅದೇ ದಿನ ಸಂಜೆ 4ಕ್ಕೆ ಸಮಾಜದ ಗಣ್ಯರ, ಸಾಧಕರ ಸನ್ಮಾನ ಸಮಾರಂಭವೂ ನಡೆಯಲಿದೆ' ಎಂದರು.

'ನಮ್ಮ ಸಂಘಟನೆ ವತಿಯಿಂದ ಪ್ರತಿ ಎರಡು ವರ್ಷಕ್ಕೊಮ್ಮೆ ಈ ಸಮಾವೇಶ ಆಯೋಜಿಸಲಾಗುತ್ತಿದೆ. ಕಳೆದ ಏಳೂ ಸಮಾವೇಶಗಳು ಅತ್ಯಂತ ಯಶಸ್ವಿಯಾಗಿವೆ. 8ನೇ ಸಮಾವೇಶದಲ್ಲಿ ಪಾಲ್ಗೊಳ್ಳಲು ಈಗಾಗಲೇ 600ಕ್ಕೂ ಹೆಚ್ಚು ವಧು? ವರರು ನೋಂದಣಿ ಮಾಡಿಸಿದ್ದಾರೆ' ಎಂದು ತಿಳಿಸಿದರು.

'ಉದ್ಘಾಟನಾ ಕಾರ್ಯಕ್ರಮಕ್ಕೆ ಮುಖ್ಯ ಅತಿಥಿಗಳಾಗಿ ವಕೀಲ ರಮೇಶ ಮಣೂರೆ, ಬಣಗಾರ ಸಮಾಜದ ಶಿವಮೊಗ್ಗ ಜಿಲ್ಲೆಯ ಮುಖಂಡ ವಿರೂಪಾಕ್ಷಪ್ಪ ಜವಳಿ, ಉದ್ಯಮಿಗಳಾದ ರಾಚಪ್ಪ ಮ. ಸರಡಗಿ, ಸಂಗಮನಾಥ ಮು. ಕರಡೆಗುದ್ದಿ, ಶಿವಶಂಕರ ಶಿ. ಚೊಣ್ಣದ, ಪಂಚಾಕ್ಷರಿ ಶಿ. ಚೊಣ್ಣದ ಆಗಮಿಸಲಿದ್ದಾರೆ' ಎಂದರು.

'ಬಣಗಾರ ಸಮಾಜ ಕೂಡ ಲಿಂಗಾಯತ ಸಮಾಜದ ಇನ್ನೊಂದು ಉಪಜಾತಿಯೇ ಆಗಿದೆ. ನೂಲಿಗೆ ಬಣ್ಣ ಹಾಕುತ್ತಿದ್ದ ಕಾರಣ ಈ ಸಮಾಜ-ಕ್ಕೆ ಬಣಗಾರ (ಬಣ್ಣಗಾರ) ಎಂಬ ಹೆಸರು ಬಂದಿದೆ. ಶಿವಶರಣ ಶಂಕರ ದಾಸೀಮಯ್ಯ ಅವರೇ ನಮ್ಮ ಸಮಾಜದ ಕುಲದೈವ. ಕೆಲವು ಕಡೆ ಸಿಂಪಿ ಸಮಾಜ, ದರ್ಜಿ ಸಮಾಜ ಎಂದೂ ಕರೆಯುತ್ತಾರೆ. ಆಂಧ್ರ, ತೆಲಂಗಾಣದಲ್ಲಿ ಚಿಪ್ಪಿಗ, ಮಹಾರಾಷ್ಟ್ರದಲ್ಲಿ ಅಂಗಾರಿ ಎಂಬ ಹೆಸರುಗಳೂ ಇವೆ. ದೇಶದ ಬೇರೆ ಬೇರೆ ಭಾಗಗಳಲ್ಲಿ ಹರಡಿರುವ ಈ ಸಮಾಜಕ್ಕೆ ಬೇರೆಬೇರೆ ಹೆಸರುಗಳಿವೆ.

ಕರ್ನಾಟಕ ರಾಜ್ಯದಲ್ಲೇ ಹೆಚ್ಚಿನ ಸಂಖ್ಯೆಯಲ್ಲಿದ್ದಾರೆ. ಬಣ್ಣ ಹಾಕುವ ಕಸುಬು ಇಲ್ಲವಾದ ಮೇಲೆ ಈ ಸಮಾಜದ ಜನ ಬೇರೆಬೇರೆ ಉದ್ಯೋಗ ಹಾಗೂ ವ್ಯಾಪಾರದಲ್ಲಿ ತೊಡಗಿದ್ದಾರೆ' ಎಂದೂ ಅವರು ವಿವ-ರಿಸಿದರು.

ಸಮಾಜದ ಕಾರ್ಯದರ್ಶಿ ಸೋಮನಾಥ ಸೂ. ಕೊಳಕಿ, ಸಮಾವೇಶದ ಅಧ್ಯಕ್ಷ ಹೇಮಂತ ರಾ. ಕಿತ್ತೂರ, ಕಾರ್ಯದರ್ಶಿ ಮಹಾಂತೇಶ ಮ. ಊರೊಳಗಿನ, ಸ್ಮರಣ ಸಂಚಿಕೆ ಸಂಪಾದಕ ಬಾಲಚಂದ್ರ ಶಿ. ಉಮದಿ, ಪ್ರಚಾರ ಸಮಿತಿ ಕಾರ್ಯದರ್ಶಿ ಪ್ರವೀಣಕುಮಾರ ಚಿಕಲಿ ಇತರರು ಇದ್ದರು.

# ಯುವನಿಧಿ ಯೋಜನೆಗೆ ನೋಂದಣಿ ಆರಂಭ

ಗದಗ : 2022-23 ಹಾಗೂ 2023-24 ಸಾಲಿನಲ್ಲಿ ಪದವಿ/ ಸ್ನಾತಕೊತ್ತರ ಪದವಿ ಮತ್ತು ಡಿಪ್ಲೋಮಾ ತೇರ್ಗಡೆ ಹೊಂದಿದ ನಿರುದ್ಯೋಗ ಅಭ್ಯರ್ಥಿಗಳನ್ನು ಯುವನಿಧಿ ಯೋಜನೆಯಡಿಯಲ್ಲಿ (https://sevasindhugs.karnataka.gov.in) ಸೇವಾಸಿಂಧು ಪೋರ್ಟಲ್‌ನಲ್ಲಿ ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳಲು ಜ. 20 ರವರೆಗೆ ವಿಶೇಷ ನೋಂದಣಿ ಅಭಿಯಾನವನ್ನು ಆರಂಭಿಸಲಾಗಿದೆ.

ಜಿಲ್ಲಾ ಉದ್ಯೋಗ ವಿನಿಮಯ ಕಛೇರಿ ವ್ಯಾಪ್ತಿಯ ವಿಶ್ವವಿದ್ಯಾಲಯ, ಸರ್ಕಾರಿ/ ಅನುದಾನಿತ ಪದವಿ/ಸ್ನಾತಕೊತ್ತರ ಪದವಿ ಮತ್ತು ಡಿಪ್ಲೋಮಾ, ಕಾಲೇಜುಗಳಲ್ಲಿ ಮತ್ತು ಜಿಲ್ಲಾ ಉದ್ಯೋಗ ವಿನಿಮಯ ಕಛೇರಿಯಲ್ಲಿ ನೋಂದಣಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದ್ದು, ಅರ್ಹ ಫಲಾನುಭವಿಗಳು ಈ ಸದಾವಕಾಶವನ್ನು ಸದುಪಯೋಗ ಪಡೆದುಕೊಳ್ಳಬಹುದು.

ಪದವೀದರರಿಗೆ ಪ್ರತಿ ತಿಂಗಳು ರೂ.3000/- ಹಾಗೂ ಡಿಪ್ಲೋಮಾದರರಿಗೆ ಪ್ರತಿ ತಿಂಗಳು ರೂ.1500/- ನಿರುದ್ಯೋಗಿ ಭತ್ಯೆಯನ್ನು ನೀಡಲಾಗುತ್ತದೆ. ಫಲಿತಾಂಶದ ನಂತರ ನಿರುದ್ಯೋಗಿಗಳಾಗಿ 180 ದಿನಗಳು ಪೂರೈಸಿ ಹೆಸರನ್ನು ನೊಂದಾಯಿಸಿಕೊಂಡ ಅಭ್ಯರ್ಥಿಗಳಿಗೆ ನೇರ ನಗದು ವರ್ಗಾವಣೆ ಮಾಡಲಾಗುತ್ತದೆ. ನಂತರ ಮಾಹೆವಾರು ಯುವನಿಧಿ ಯೋಜನೆಯ ಪ್ರಯೋಜನವನ್ನು ಪಡೆಯಬೇಕಿದ್ದರೆ, ಸೇವಾ ಸಿಂಧು ಪೋರ್ಟಲ್‌ನಲ್ಲಿ ಪ್ರತಿ ತಿಂಗಳು ತಾನು ನಿರುದ್ಯೋಗಿಯೆಂದು ಮತ್ತು ಉನ್ನತ ವ್ಯಾಸಂಗ ಮುಂದುವರೆಸುತ್ತಿಲ್ಲವೆಂದು ಹಾಗೂ ಸ್ವಯಂ ಉದ್ಯೋಗವಿಲ್ಲವೆಂದು ಪ್ರತಿ ತಿಂಗಳು 25ನೇ ತಾರೀಖಿನೊಳಗಾಗಿ ಸ್ವಯಂ ಘೋಷಣೆ ಆಧಾರದ ಮೇಲೆ ಅಭ್ಯರ್ಥಿಗಳು ಮುಂದಿನ ಪಾವತಿಯನ್ನು ಸ್ವೀಕರಿಸಬಹುದಾಗಿದೆ.

ಅಭ್ಯರ್ಥಿಗಳು ಕರ್ನಾಟಕ ಒನ್/ಗ್ರಾಮ ಒನ್ ಮತ್ತು ಬಾಪೂಜಿ ಸೇವಾ ಕೇಂದ್ರಗಳಲ್ಲಿ ಯುವನಿಧಿ ಯೋಜನೆಗೆ ಅರ್ಜಿ ಸಲ್ಲಿಸಬಬೇಕು, ಅರ್ಜಿ ಸಲ್ಲಿಸುವ ಸಂದರ್ಭದಲ್ಲಿ ಕಡ್ಡಾಯವಾಗಿ ಆಧಾರ ಸೀಡೆಡ್ ಬ್ಯಾಂಕ್ ಖಾತೆ ಹಾಗೂ ಆಧಾರ ಲಿಂಕ್ ಮೊಬೈಲ್ ಸಂಖ್ಯೆಯನ್ನು ಹೊಂದಿರಬೇಕು, ಅರ್ಜಿ ಸಲ್ಲಿಸಿದ ನಂತರ ಸೇವಾ ಸಿಂಧು ಪೋರ್ಟಲ್‌ನಲ್ಲಿ ತಮ್ಮ ಅರ್ಜಿಯು ಯಾವ ಹಂತದಲ್ಲಿದೆ ಎಂಬುದನ್ನು ಪರಿಶೀಲಿಸಿಕೊಳ್ಳಬೇಕು, ಒಂದು ವೇಳೆ ಅರ್ಜಿಯು ಅಪ್ರೂವಲ್‌ಆಗದ ಸಂದರ್ಭದಲ್ಲಿ ಅರ್ಜಿಯ ಪರಿಶೀಲನೆ ಮಾಡಿಕೊಳ್ಳಬೇಕಾಗಿರುತ್ತದೆ ಮತ್ತು ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಉದ್ಯೋಗ ವಿನಿಮಯ ಉದ್ಯೋಗಾಧಿಕಾರಿ ಕಛೇರಿ, ದೂ ಸಂ-08372220609 ಗೆ ಸಂಪರ್ಕಿಸಬಹುದಾಗಿದೆ.

# ಸಂಕ್ರಾಂತಿ ಹಬ್ಬದ ಪ್ರಯುಕ್ತ ವಾಕರಸಾ ಸಂಸ್ಥೆಯಿಂದ ಹೆಚ್ಚುವರಿ ವಿಶೇಷ ಸಾರಿಗೆಗಳ ಕಾರ್ಯಾಚರಣೆ

ಗದಗ : 2025 ನೇ ಸಾಲಿನ ಸಂಕ್ರಾಂತಿ ಹಬ್ಬದ ಪ್ರ0ಯುಕ್ತ ಸಾರ್ವಜನಿಕರು ತಮ್ಮ ಸ್ವಂತ ಊರುಗಳಿಗೆ ತೆರಳುವುದರಿಂದ, ವಾ.ಕ.ರ.ಸಾ.ಸಂಸ್ಥೆ0ಯ ವ್ಯಾಪ್ತಿ0ಯ ಹುಬ್ಬಳ್ಳಿ, ಧಾರವಾಡ, ಗದಗ, ಬೆಳಗಾವಿ, ಉತ್ತರ ಕನ್ನಡ, ಹಾವೇರಿ, ಚಿಕ್ಕೋಡಿ ಮತ್ತು ಬಾಗಲಕೋಟೆ ವಿಭಾಗಗಳಿಂದ ಸುಮಾರು 114 ಹೆಚ್ಚುವರಿ ವಿಶೇಷ ಸಾರಿಗೆಗಳನ್ನು ಕಾ0ರ್ಯಾಚರಣೆ ಮಾಡಲಾಗುತ್ತಿದೆ. ಜನೆವರಿ 11 ರಂದು ಎರಡನೇ ಶನಿವಾರ ಹಾಗೂ ಜನೆವರಿ 12 ರಂದು ರವಿವಾರ ಇದ್ದು, ಜನೆವರಿ 14 ರಂದು ಮಂಗಳವಾರ ಸಂಕ್ರಾಂತಿ ಹಬ್ಬವಿರುವದ-ರಿಂದ ಬೆಂಗಳೂರು ಮತ್ತು ಇತರೇ ಪ್ರಮುಖ ಸ್ಥಳಗಳಿಂದ ಹೆಚ್ಚಿನ ಪ್ರ0ಯಾಣಿಕರು ತಮ್ಮ ತಮ್ಮ ಊರುಗಳಿಗೆ ತೆರಳಲು ಹೆಚ್ಚುವರಿ ಸಾರಿಗೆಗಳನ್ನು ಕಾ0ರ್ಯಾಚರಣೆ ಮಾಡಲಾಗುವುದು.

ಬೆಂಗಳೂರಿನಿಂದ ರಾಜ್ಯ/ಅಂತರರಾಜ್ಯದ ವಿವಿಧ ಸ್ಥಳಗಳಿಗೆ ತೆರಳಲು ಜನೆವರಿ 11, ಹಾಗೂ 13 ರಂದು ಹೆಚ್ಚುವರಿ ವಿಶೇಷ ಸಾರಿಗೆ ಸೌಲಭ್ಯವನ್ನು ಕಲ್ಪಿಸಲಾಗಿದೆ. ಹಬ್ಬ ಮುಗಿದ ಮೇಲೆ ಜನೆವರಿ 14 ಹಾಗೂ 15 ರಂದು ಮತ್ತು ನಂತರದ ದಿನಗಳಂದು ಪ್ರಮುಖ ಸ್ಥಳಗಳಿಂದ ಜನದಟ್ಟಣೆಗೆ ಅನುಗುಣವಾಗಿ ಹೆಚ್ಚುವರಿ ಸಾರಿಗೆಗಳನ್ನು ಕಾ0ರ್ಯಾಚರಣೆಗೊಳಿಸಲಾಗುವುದು.

ವಿಶೇಷ ಸಾರಿಗೆಗಳ ಸದುಪ0ಯೋಗ ಪಡಿಸಿಕೊಳ್ಳುವದರೊಂದಿಗೆ, ಸುಖಕರ ಹಾಗೂ ಸುರಕ್ಷಿತ ಪ್ರ0ಯಾಣಕ್ಕಾಗಿ ಸಂಸ್ಥೆ0ಯ ಬಸ್ಸುಗಳಲ್ಲಿ ಪ್ರ0ಯಾಣಿಸುವಂತೆ ಮತ್ತು ವಿಶೇಷ ಹೆಚ್ಚುವರಿ ಸಾರಿಗೆಗಳ ಸದುಪ0ಯೋಗ ಪಡೆದುಕೊಳ್ಳುವಂತೆ ವಾ0ಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ0ಯ ಪ್ರಕಟಣೆ0ಯಲ್ಲಿ ತಿಳಿಸಿದೆ.

# ಹಾಸ್ಯ ಸಂಭ್ರಮ ಇಂದು



ಬೆಳಗಾವಿ ನಗರದ ಹಾಸ್ಯಕೂಟ ಮತ್ತು ಕನ್ನಡ ಸಾಹಿತ್ಯ ಭವನ ವಿಶ್ವಸ್ತ ಮಂಡಳಿಯವರು ಇಂದು 11 ಶನಿವಾರ ಸಾಯಂಕಾಲ 4-30 ಕ್ಕೆ ಚೆನ್ನಮ್ಮ ವೃತ್ತದ ಬಳಿಯಿರುವ ಕನ್ನಡ ಸಾಹಿತ್ಯ ಭವನದಲ್ಲಿ "ಹಾಸ್ಯ ಸಂಭ್ರಮ -2025"

ಹಾಸ್ಯ ಸಂಭ್ರಮ- 2025 ನ್ನು ಪ್ರೊ. ಜಿ. ಕೆ. ಕುಲಕರ್ಣಿ, ಜಿ.ಎಸ್.ಸೋನಾರ, ಅರವಿಂದ ಹುನಗುಂದ, ಕೆ. ತಾನಾಜಿ ಹಾಸ್ಯಕೂಟ ಬಳಗದವರು ನಡೆಯಿಸಿಕೊಡಲಿದ್ದಾರೆ. ಕೆ.ಎಸ್. ಆರ್.ಟಿ.ಸಿಯಲ್ಲಿ ಸೇವೆ ಸಲ್ಲಿಸಿ ನಿವೃತ್ತಿ ಹೊಂದಿರುವ ನಾಗಪ್ಪ ಸಿಂಪಿಯವರು ಪ್ರಾಯೋಜಕತ್ವವನ್ನು ವಹಿಸಿಕೊಂಡಿದ್ದಾರೆ. ಹೆಚ್ಚಿನ ಸಂಖ್ಯೆಯಲ್ಲಿ ಆಸಕ್ತರು ಬಂದು ಕಾರ್ಯಕ್ರಮದ ಸದುಪಯೋಗ ಪಡೆಯುವಂತೆ ಕನ್ನಡ ಸಾಹಿತ್ಯ ಭವನ ವಿಶ್ವಸ್ತ ಮಂಡಳಿಯ ಗೌರವ ಕಾರ್ಯದರ್ಶಿ ರಾಮಚಂದ್ರ ಕಟ್ಟಿ ಪ್ರಕಟನೆಯಲ್ಲಿ ತಿಳಿಸಿದ್ದಾರೆ.

# ವಿದ್ಯಾರ್ಥಿಗಳು ತಮ್ಮ ಆಂತರಿಕ ಕೌಶಲ್ಯಗಳ ಪರಿಚಯಿಸಬೇಕು-ರೋಹನ ಜುವಳಿ




ಬೆಳಗಾವಿ. : ವಿದ್ಯಾರ್ಥಿಗಳು ತಮ್ಮ ಆಂತರಿಕ ಕೌಶಲ್ಯಗಳ ಬಗ್ಗೆ ತಿಳಿವಳಿಕೆ ಹೊಂದುವ ಮೂಲಕ ತಮ್ಮಲ್ಲಿನ ವಿಶೇಷ ಕೌಶಲ್ಯಗಳನ್ನು ಪರಿಚಯಿಸಬೇಕೆಂದು ಮೈನಾಕ್ಸ್ ಅಲಾಯ್ಸ್ ಪ್ರೈ ಲಿ. ವ್ಯವಸ್ಥಾಪಕ ನಿರ್ದೇಶಕ ರೋಹನ ಜುವಳಿ ಅವರು ತಿಳಿಸಿದರು.

ಭರತೇಶ ಶಿಕ್ಷಣ ಸಂಸ್ಥೆಯ ಗ್ಲೋಬಲ ಬುಸಿನೆಸ್ ಸ್ಕೂಲ ಎಂ.ಬಿ.ಎ.ವಿದ್ಯಾಲಯದಲ್ಲಿ "ಟ್ರೆಶಹೋಲ್ಡ" ನೂತನವಾಗಿ ಪ್ರವೇಶ ಪಡೆದ ವಿದ್ಯಾರ್ಥಿಗಳ ಸ್ವಾಗತ ಸಮಾರಂಭದಲ್ಲಿ ಮುಖ್ಯ ಅತಿಥಿಗಳಾಗಿ ಆಗಮಿಸಿ ಮಾತನಾಡಿದ ಅವರು, ವಿದ್ಯಾರ್ಥಿಗಳು ಕಷ್ಟ ಪಡುವುದನ್ನು ಕಲಿಯಬೇಕು. ಪ್ರತಿನಿತ್ಯದ ಆಗುಹೋಗುಗಳ ಬಗ್ಗೆ ಸಾಮಾನ್ಯ ತಿಳಿವಳಿಕೆ ಹೊಂದಿರಬೇಕು. ಆಗ ಮಾತ್ರ ನಿಮ್ಮ ಕನಸು ನನಸು ಮಾಡಿಕೊಳ್ಳಲು ಸಾಧ್ಯ ಎಂದು ತಿಳಿಸಿದ ಅವರು, ಜೀವನದಲ್ಲಿ ಸಮಸ್ಯೆಗಳನ್ನು ಸಮಥ-ರ್ವಾಗಿ ಎದುರಿಸುವ ಸಾಮಥ-ರ್ಯವನ್ನು ಬೆಳೆಸಿಕೊಳ್ಳಬೇಕೆಂದು ಅವರು ಹೇಳಿದರು. ಸಮಾರಂಭಕ್ಕೆ ಆಗಮಿಸಿದ ಇನ್ನೋರ್ವ ಅತಿಥಿ ಲೇಟಕೋರ ಇಂಡಿಯಾ ಪ್ರೈ.ಲಿ.ಮಾನವ ಸಂಪನ್ಮೂಲ ವಿಭಾಗದ ಹಿರಿಯ ವ್ಯವಸ್ಥಾಪಕ ಸತೀಶ ಹೆಗಡೆ ಅವರು ಮಾತನಾಡಿ,ಉತ್ತಮ ಜೀವನ ರೂಪಿಸುವಲ್ಲಿ ವಿಶೇಷ ಕೌಶಲ್ಯಗಳನ್ನು ಹೊಂದಿರುವುದು ಅವಶ್ಯಕತೆಯಾಗಿದೆ. ಬಹುರಾಷ್ಟ್ರೀಯ ಕಂಪನಿಗಳು ಯಾವ ರೀತಿಯಲ್ಲಿ ವ್ಯವಹಾರ ನಡೆಸುತ್ತವೆ ಎಂಬುದರ ಬಗ್ಗೆ ನಿರಂತರ ಅಧ್ಯಯನ ನಡೆಸಬೇಕು.ಇದರಿಂದ ಮಾರುಕಟ್ಟೆ ಜ್ಞಾನ ಬೆಳೆದು ನಿಮ್ಮ ವ್ಯವಹಾರದಲ್ಲಿ ಸುಧಾರಣೆ ತರಲು ಸಹಕಾರಿಯಾಗುತ್ತದೆ ಎಂದರು.

ಸಮಾರಂಭದಲ್ಲಿ ಎಂ.ಬಿ.ಎ.ಮಹಾವಿದ್ಯಾಲಯದ ನಿರ್ದೇಶಕ ಡಾ.ಪ್ರಸಾದ ದಡ್ಡಿಕರ ಅವರು ಅತಿಥಿಗಳನ್ನು ಸ್ವಾಗತಿಸಿದರು. ಸಮಾರಂಭದ ಅಧ್ಯಕ್ಷತೆಯನ್ನು ಮಹಾವಿದ್ಯಾಲಯದ ಆಡಳಿತ ಮಂಡಳಿಯ ಸದಸ್ಯ ಶರದ ಬಾಳಿಕಾಯಿ ಅವರು ವಹಿಸಿ, ವಿದ್ಯಾರ್ಥಿಗಳನ್ನು ಉದ್ದೇಶಿಸಿ ಮಾತನಾಡಿದರು.

ಈ ಕಾರ್ಯಕ್ರಮವನ್ನು ಡಾ,.ಪದ್ಮಪ್ರೀಯಾ ಕತಗಲ, ರಂಜನಾ ಚೌಗುಲೆ, ಮಾಣಿಕಚಂದ ಬಸ್ತವಾಡೆ, ಡಾ. ನಿಖಿಲ ರಾಗಶೆಟ್ಟಿ ಅವರು ಆಯೋಜಿಸಿದ್ದರು. ಆಯೇಶಾ ಜಿ. ಕಾರ್ಯಕ್ರಮ ನಿರೂಪಿಸಿ ಕೊನೆಯಲ್ಲಿ ವಂದಿಸಿದರು.

# ತಾಲೂಕು ಮಟ್ಟದ ಅಧಿಕಾರಿಗಳ ಸಭೆ



ಮುದ್ದೇಬಿಹಾಳ: ಕರ್ನಾಟಕ ಲೋಕಾಯುಕ್ತ ನ್ಯಾ. ಬಿ.ಎಸ್.ಪಾಟೀಲ ಪಡೇಕನೂರ ಅವರು ಜ.13 ರಂದು ಮುದ್ದೇಬಿಹಾಳಕ್ಕೆ ಭೇಟಿ ನೀಡಿ ತಪಾಸಣೆ, ಬಾಕಿ ಪ್ರಕರಣಗಳ ವಿಚಾರಣೆ, ತಾಲೂಕಿನ ಪ್ರಗತಿ ಪರಿಶೀಲನೆ ಸಭೆ ನಡೆಸಲಿದ್ದಾರೆ. ಎಲ್ಲ ಇಲಾಖೆಗಳ ಮುಖ್ಯಸ್ಥರು ಅಗತ್ಯ ದಾಖಲೆಗಳ ಸಮೇತ ಖುದ್ದು ಹಾಜ-ರಿರಬೇಕು ಎಂದು ವಿಜಯಪುರ ಲೋಕಾಯುಕ್ತ ಎಸ್ಪಿ ಟಿ.ಮಲ್ಲೇಶ ಹೇಳಿದರು.

ಇಲ್ಲಿನ ತಾಪಂ ಸಭಾ ಭವನದಲ್ಲಿ ಬುಧವಾರ ತಹಸೀಲ್ದಾರ್ ಬಲರಾಮ ಕಟ್ಟೀಮನಿ ಅವರ ಅಧ್ಯಕ್ಷತೆಯಲ್ಲಿ ಲೋಕಾಯುಕ್ತರ ಪ್ರವಾಸ ಹಿನ್ನೆಲೆ ಏರ್ಪಡಿಸಿದ್ದ ತಾಲೂಕು ಮಟ್ಟದ ಅಧಿಕಾರಿಗಳ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದ ಅವರು, ತಾಲೂಕಿನ ಕೆಲವು ಇಲಾಖೆಗಳ ವಿರುದ್ಧ ಅಹವಾಲುಗಳು, ದೂರುಗಳು ಸಲ್ಲಿಕೆಯಾಗಿವೆ. ಸರ್ಕಾರಿ ಆಸ್ಪತ್ರೆ, ಹಾಸ್ಟೇಲುಗಳ ತಪಾಸಣೆ ನಡೆಸಬಹುದು. ಈಗಾಗಲೇ ಲೋಕಾಯುಕ್ತರ ಬಳಿ ಸಲ್ಲಿಕೆಯಾಗಿರುವ ಅರ್ಜಿಗಳ ಪೈಕಿ ಯಾವುದೇ ಅರ್ಜಿಯ ಮಾಹಿತಿಯನ್ನು ಕೇಳಿದರೂ ಕೊಡಲು ಸಿದ್ದರಿರಬೇಕು ಎಂದು ತಿಳಿಸಿದರು.

ಗ್ರಾಮಗಳಲ್ಲಿ ಸ್ವಚ್ಛತೆ, ಕುಡಿಯುವ ನೀರಿನ ವ್ಯವಸ್ಥೆ, ಮೂಲಸೌಕರ್ಯಗಳು ಸೇರಿ ಹಲವು ಮಾಹಿತಿಗಳನ್ನು ತಿಳಿದುಕೊಳ್ಳಲು, ತಾಲೂಕಿನ ಪ್ರಗತಿ ಸೂಚ್ಯಾಂಕದ ಬಗ್ಗೆ ನಿಖರ ಅಂಕಿ ಸಂಖ್ಯೆ ಪಡೆದುಕೊಳ್ಳಲು ಲೋಕಾಯುಕ್ತರು ಅಧಿಕಾರಿಗಳ ಪ್ರಗತಿ ಪರಿಶೀಲನಾ ಸಭೆಯನ್ನೂ ನಡೆಸಲಿರುವುದ-ರಿಂದ ಎಲ್ಲ ಇಲಾಖೆಗಳ ಮುಖ್ಯಸ್ಥರು ತಮ್ಮ ಇಲಾಖೆ ವ್ಯಾಪ್ತಿಯಲ್ಲಿನ ಪ್ರಗತಿ ವರದಿ ತಯಾರಿಸಿ ಸಿದ್ದಪಡಿಸಿಟ್ಟುಕೊಳ್ಳಬೇಕು. ಪುರಸಭೆಗೂ ಹಠಾತ್ ಭೇಟಿ ನೀಡುವ ಸಂಭವ ಇರುವುದರಿಂದ ಅವರೂ ಜಾಗೃತರಾಗಿರಬೇಕು. ಇದಲ್ಲದೆ ತೊಗರಿ ಬೆಳೆ ಕುರಿತು ಅನೇಕ ರೈತರು ಲೋಕಾಯುಕ್ತರಿಗೆ ದೂರು ಸಲ್ಲಿಸಿದ್ದು ಇದಕ್ಕೆ ಸಂಬಂಧಸಿದ ಪೂರಕ ದಾಖಲೆ, ಮಾಹಿತಿಯನ್ನು ಕೃಷಿ ಇಲಾಖೆಯವರು ತಯಾರಿಸಿ ಇಟ್ಟುಕೊಂಡಿರಬೇಕು. ಕಂದಾಯ, ಕೃಷಿ, ಶಿಕ್ಷಣ, ಆರೋಗ್ಯ ಇಲಾಖೆಗಳು, ಪುರಸಭೆ ಇವು ಆದ್ಯತಾ ಪಟ್ಟಿಯಲ್ಲಿವೆ ಎಂದರು.

ತಹಸೀಲ್ದಾರ್ ಬಲರಾಮ ಕಟ್ಟಿಮನಿ ಅವರು ಸಲಹೆ ಸೂಚನೆ ನೀಡಿ ಎಲ್ಲರೂ ತಯಾರಿಯಲ್ಲಿರುವಂತೆ ಸೂಚಿಸಿದರು.ಸಭೆಯ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಎಸ್ಪಿಯವರು ಲೋಕಾಯುಕ್ತರು ಅಚ್ಚ-ರಿಯ ಭೇಟಿ ನೀಡುವ ಸಾಧ್ಯತೆಗಳಿವೆ. ಸರ್ಕಾರಿ ಆಸ್ಪತ್ರೆ, ಪುರಸಭೆ ಹೀಗೆ ತಮಗೆ ತೋಚಿದ ಕಡೆ ಅವರು ಭೇಟಿ ನೀಡಲು ಬಯಸಿದರೆ ಎಲ್ಲರೂ ಸಹಕರಿಸಲೇಬೇಕು. ತೊಗರಿ ಸಮಸ್ಯೆ ಪ್ರಮುಖವಾಗಿ ಪ್ರಸ್ತಾಪವಾಗಬಹುದು. ಲೋಕಾಯುಕ್ತರ ನಡೆಯನ್ನು ಮುಂಚಿತವಾಗಿಯೇ ತಿಳಿಸಲು ಬರುವುದಿಲ್ಲ ಎಂದರು.

ತಾಪಂ ಸಹಾಯಕ ನಿರ್ದೇಶಕ ಖೂಬಾಸಿಂಗ್ ಜಾಧವ, ತಾಲೂಕು ಆರೋಗ್ಯಾಧಿಕಾರಿ ಡಾ.ಸತೀಶ ತಿವಾರಿ, ಸಿಡಿಪಿಓ ಶಿವಮೂರ್ತಿ ಕುಂಬಾರ, ಸಹಾಯಕ ಕೃಷಿ ನಿರ್ದೇಶಕ ಸುರೇಶ ಭಾವಿಕಟ್ಟಿ, ಕ್ಷೇತ್ರ ಶಿಕ್ಷಣಾಧಿಕಾರಿ ಬಿ.ಎಸ್.ಸಾವಳಗಿ, ಹೆಸ್ಕಾಂ ಎಇಇ ರಾಜಶೇಖರ ಹಾದಿಮನಿ, ಪುರಸಭೆ ಮುಖ್ಯಾಧಿಕಾರಿ ಮಲ್ಲನಗೌಡ ಬಿರಾದಾರ, ಪಿಡಬ್ಲೂಡಿ ಎಇಇ ಸಂಗಮೇಶ ಶಿವನಗುತ್ತಿ, ಸಮಾಜ ಕಲ್ಯಾಣ ಸಹಾಯಕ ನಿರ್ದೇಶಕಿ ಬಸಂತಿ ಮಠ, ಬಿಸಿಎಸ್ ಅಧಿಕಾರಿಣಿ ಶಿವಲೀಲಾ ಕೊಣ್ಣೂರ, ಅಕ್ಷರದಾಸೋಹ ಎಡಿ ಎಂ.ಎಂ.ಬೆಳಗಲ್ಲ, ಲೋಕಾಯುಕ್ತ ಇನ್ಸಪೆಕ್ಟರ್ ಆನಂದ ಠಕ್ಕನವರ್, ಇನ್ನಿತರ ಇಲಾಖೆಗಳ ಮುಖ್ಯಸ್ಥರು ಇದ್ದರು.

ಸಭೆಯ ನಂತರ ಲೋಕಾಯುಕ್ತರು ಬರುವ ಮಾಹಿತಿಯನ್ನು ಸ್ಥಳೀಯ ಶಾಸಕ, ಕರ್ನಾಟಕ ಸಾಬೂನು ಮತ್ತು ಮಾರ್ಜಕ ನಿಗಮದ ಅಧ್ಯಕ್ಷ ಸಿ.ಎಸ್.ನಾಡಗೌಡ ಅವರಿಗೂ ತಲುಪಿಸುವಂತೆ ಅವರ ಆಪ್ತ ಸಹಾಯಕರಿಗೆ ತಿಳಿಸಲಾಯಿತು.

**ಲೋಕಾಯುಕ್ತರ ಪ್ರವಾಸ:**

ಜ.11ರಂದು ಬೆಳಿಗ್ಗೆ ಬೆಂಗಳೂರು ಬಿಟ್ಟು ಚಿತ್ರದುರ್ಗದಲ್ಲಿ ವಾಸ್ತವ್ಯ. 12ರಂದು ಚಿತ್ರದುರ್ಗದಿಂದ ಸ್ವಗ್ರಾಮ ಮುದ್ದೇಬಿಹಾಳ ತಾಲೂಕು ಪಡೇಕನೂರಕ್ಕೆ ಆಗಮಿಸಿ ರಾತ್ರಿ ಅಲ್ಲಿಯೇ ವಾಸ್ತವ್ಯ. 13ರಂದು ಬೆಳಿಗ್ಗೆ 9ಕ್ಕೆ ಮುದ್ದೇಬಿಹಾಳದಲ್ಲಿ ತಾಲೂಕು ಮಟ್ಟದ ಅಧಿಕಾರಿಗಳ ಸಭೆ, ಬಾಕಿ ಪ್ರಕರಣಗಳ ವಿಚಾರಣೆ. ಮದ್ಯಾಹ್ನ 1-30ಕ್ಕೆ ಆಲಮಟ್ಟಿಯಲ್ಲಿ ಊಟದ ನಂತರ ನಿಡಗುಂದಿ, ಬಾಗಲಕೋಟ ಜಿಲ್ಲೆ ಕೂಡಲಸಂಗಮ ಸಾರ್ವಜನಿಕ ಕಚೇರಿ, ಆಸ್ಪತ್ರೆ, ಆರೋಗ್ಯ ಕೇಂದ್ರ, ಸರ್ಕಾರಿ ಹಾಸ್ಟೇಲ್ ತಪಾಸಣೆ. ರಾತ್ರಿ ಹೊಸಪೇಟೆಯಲ್ಲಿ ವಾಸ್ತವ್ಯ. 14ರಂದು ಚಿತ್ರದುರ್ಗ ಮಾರ್ಗವಾಗಿ ಬೆಂಗಳೂರು ಕೇಂದ್ರ ಸ್ಥಾನಕ್ಕೆ ನಿರ್ಗಮನ.

# ಭ್ರೂಣ ಲಿಂಗ ಪತ್ತೆ ನಿಷೇಧ ಕಾಯ್ದೆ ಸಮರ್ಪಕವಾಗಿ ಜಾರಿಗೊಳಿಸಿ : ಜಿಲ್ಲಾಧಿಕಾರಿ ಟಿ.ಭೂಬಾಲನ್



ವಿಜಯಪುರ ಅನಧಿಕೃತವಾಗಿ ಪ್ರಸವಪೂರ್ವ ಭ್ರೂಣಲಿಂಗ ಪತ್ತೆ ಅಪರಾಧವಾಗಿದ್ದು, ಗರ್ಭಧಾರಣಾ ಪೂರ್ವ ಮತ್ತು ಪ್ರಸವಪೂರ್ವ ತಂತ್ರ ವಿಧಾನಗಳ (ಲಿಂಗ ಆಯ್ಕೆಯ ನಿಷೇಧ) ಕಾಯ್ದೆ 1994 ನ್ನು ಜಿಲ್ಲೆಯಲ್ಲಿ ಸಮರ್ಪಕವಾಗಿ ಜಾರಿಗೊಳಿಸಲು ಮತ್ತು ಸದರಿ ಕಾಯ್ದೆ ಉಲ್ಲಂಘಿ-ಸಿರುವ ಸ್ಕ್ಯಾನಿಂಗ್ ಕೇಂದ್ರಗಳ ವಿರುದ್ಧ ಎಫ್.ಐ.ಆರ್ ದಾಖಲಿಸಲು ಮತ್ತು ಸದರಿ ಕಾಯ್ದೆಯನ್ವಯ ನಿರ್ದಾಕ್ಷಿಣ್ಯವಾಗಿ ಕ್ರಮ ಕೈಗೊಳ್ಳುವಂತೆ ಜಿಲ್ಲಾಧಿಕಾರಿ ಟಿ.ಭೂಬಾಲನ್ ಸಂಬಂಧಪಟ್ಟ ಅಧಿಕಾ-ರಿಗಳಿಗೆ ಸೂಚಿಸಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ಜ.8ರಂದು ಬುಧವಾರ ಪಿಸಿ&ಪಿಎನ್‌ಡಿಟಿ ಕಾಯ್ದೆಯ ಜಿಲ್ಲಾ ಸಲಹಾ ಸಮಿತಿ ಸಭೆಯಲ್ಲಿ ಅಧ್ಯಕ್ಷತೆ ವಹಿಸಿದ್ದ ಮಾತನಾಡಿದ ಅವರು, ರಾಜ್ಯ ಸಕ್ಷಮ ಪ್ರಾಧಿಕಾರದ ಅಧಿಕಾರಿ ಮತ್ತು ತಂಡದವರು ಡಿ.26, 2024 & ಡಿ. 27, 2024 ರಂದು ಜಿಲ್ಲೆಯಲ್ಲಿನ ಆಸ್ಪತ್ರೆ/ಸ್ಕ್ಯಾನಿಂಗ್ ಕೇಂದ್ರಗಳಿಗೆ ಅನೀರಿಕ್ಷಿತವಾಗಿ ಭೇಟಿ ನೀಡಿದಾಗ ಪಿಸಿ&ಪಿಎನ್‌ಡಿಟಿ ಕಾಯ್ದೆಯ ಉಲ್ಲಂಘನೆ ಮಾಡಿರುವ 1) ದೇಸಾಯಿ ಆಸ್ಪತ್ರೆ, ಇಂಡಿ 2) ಗಜಾಕೋಶ ಆಸ್ಪತ್ರೆ, ಇಂಡಿ ಹಾಗೂ 3) ಆದಿತ್ಯ ಮೆಟರನಿಟಿ & ಜನರಲ್ ಆಸ್ಪತ್ರೆ, ವಿಜಯಪುರ ಇಲ್ಲಿನ ಸ್ಕ್ಯಾನಿಗ್ ಯಂತ್ರಗಳನ್ನು ಸೀಜ್ ಮಾಡಿ ಆಸ್ಪತ್ರೆ/ಸ್ಕ್ಯಾನಿಂಗ್ ಕೇಂದ್ರದ ಅಗತ್ಯ ದಾಖಲೆಗಳನ್ನು ವಶಪಡಿಸಿಕೊಂಡಿದ್ದು, ಸದರಿ ಆಸ್ಪತ್ರೆಗಳ ವಿರುದ್ಧ ಎಫ್.ಐ.ಆರ್ ದಾಖಲಿಸಲು ಅವರು ಸೂಚಿಸಿದರು.

ಜಿಲ್ಲೆಯ 04 ಸ್ಕ್ಯಾನಿಂಗ್ ಕೇಂದ್ರ/ ಆಸ್ಪತ್ರೆಗಳಾದ 1) ಶಿವಾ ಕ್ಲಿನಿಕ್, ಚಡಚಣ 2) ಮಿರಜಕರ ಆಸ್ಪತ್ರೆ, ಚಡಚಣ 3) ಶ್ರೀ ಸಾಯಿ ಆಸ್ಪತ್ರೆ, ತಾಳೀಕೋಟಿ ಮತ್ತು 4) ಪ್ರೇಮಾ ಸ್ಕ್ಯಾನ್ ಸೆಂಟರ್, ವಿಜಯಪುರ ಕೇಂದ್ರಗಳಿಗೆ ನೋಟಿಸ್ ನೀಡಲಾಗಿದ್ದು, ಸದರಿ ನೋಟೀಸ್‌ಗೆ ಅವ-ರಿಂದ ಸಲ್ಲಿಕೆಯಾಗಿರುವ ವಿವರಣೆಗಳನ್ನು ಕೂಲಂಕುಷವಾಗಿ ಪರಿಶೀಲಿಸಿ, ಕಾಯ್ದೆ ಉಲ್ಲಂಘನೆ ಕಂಡು ಬಂದಲ್ಲಿ ಅಂತಹವರ ವಿರುದ್ಧ ಪಿಸಿ&ಪಿಎನ್‌ಡಿಟಿ ಕಾಯ್ದೆಯನ್ವಯ ಪ್ರಕರಣ ದಾಖಲಿಸಲು ಕ್ರಮವನ್ನು ಜರುಗಿಸಬೇಕೆಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳಿಗೆ ಹಾಗೂ ಜಿಲ್ಲಾ ಕುಟುಂಬ ಕಲ್ಯಾಣ ಅಧಿಕಾರಿಗಳಿಗೆ ಜಿಲ್ಲಾಧಿಕಾರಿಗಳು ಸೂಚಿಸಿದರು.

ಚಡಚಣದಲ್ಲಿರುವ ಸ್ಕ್ಯಾನಿಂಗ್ ಕೇಂದ್ರ/ ಆಸ್ಪತ್ರೆಯಲ್ಲಿ ಫಾರ್ಮ-ಎಫ್ ನಲ್ಲಿ ರೋಗಿಗಳು ಮಾಡಿರುವ ಸಹಿಗಳ ನೈಜತೆಯ ಬಗ್ಗೆ ಫಾರೆನ್ಸಿಕ್ ತಜ್ಞರಿಂದ ಪರೀಲಿಸಿಕೊಂಡು ವರದಿ ಪಡೆದು ಸೂಕ್ತ ಕಾನೂನು ಕ್ರಮ ಜರುಗಿಸಲು ಜಿಲ್ಲಾ ಆರೋಗ್ಯ ಮತ್ತು ಕು. ಕ.ಅಧಿಕಾರಿಗಳಿಗೆ ತಿಳಿಸಿದರು.

ಜಿಲ್ಲೆಯಲ್ಲಿ ಹೊಸದಾಗಿ ಸ್ಕ್ಯಾನಿಂಗ್ ಕೇಂದ್ರಗಳ ಸ್ಥಾಪನೆಗೆ ಅರ್ಜಿ ಸಲ್ಲಿಸಿರುವ ಆಸ್ಪತ್ರೆ/ಸ್ಕ್ಯಾನಿಂಗ್ ಕೇಂದ್ರಗಳ ಮಾಲೀಕರು, ಸದರಿ ಕಾಯ್ದೆ ಅಡಿಯಲ್ಲಿ ಅವರ ಆಸ್ಪತ್ರೆ/ ಕೇಂದ್ರ ನೊಂದಣಿಯಾಗುವವರೆಗೆ ಮತ್ತು ಬಾಲಿಕಾ ಸಾಫ್ಟ್‌ವೇರ್‌ನಲ್ಲಿ ಸದರಿ ಆಸ್ಪತ್ರೆ/ ಕೇಂದ್ರಕ್ಕೆ ಆನ್‌ಲೈನ್ ಯುಸರ್‌ನೇಮ್ & ಪಾಸ್‌ವರ್ಡ ಬರುವವರೆಗೆ ಸ್ಕ್ಯಾನಿಂಗ್ ಯಂತ್ರ ಬಳಸತಕ್ಕದಲ್ಲ ಎಂದು ತಿಳಿಸಿದರು.

ಸದರಿ ವಿಷಯವನ್ನು ಜಿಲ್ಲಾ ಆರೋಗ್ಯ ಮತ್ತು ಕು.ಕ.ಅಧಿಕಾರಿಗಳು ಮತ್ತು ಡಿಐಎಂಸಿ ತಂಡದವರು ಅರ್ಜಿ ಸಲ್ಲಿಸಿರುವ ಆಸ್ಪತ್ರೆ/ಸ್ಕ್ಯಾನಿಂಗ್ ಕೇಂದ್ರಗಳ ಮಾಲೀಕರಿಗೆ ಮಾಹಿತಿ ನೀಡುವಂತೆ ಹಾಗೂ ನೊಂದಣಿ ಪಡೆಯದೇ ಸ್ಕ್ಯಾನಿಂಗ್ ಯಂತ್ರಗಳನ್ನು ಬಳಸಿದ್ದಲ್ಲಿ ಅಂತಹವರ ವಿರುದ್ಧ ಕಾನೂನು ಕ್ರಮವನ್ನು ಕೈಗೊಳ್ಳುವಂತೆ ಅವರು ಸೂಚನೆ ನೀಡಿದರು.

ಪಿಸಿ&ಪಿಎನ್‌ಡಿಟಿ ಕಾಯ್ದೆಯ ಕು-ರಿತು ಜಿಲ್ಲೆಯಾದ್ಯಂತೆ ಜನಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಂಡು ಜನರಿಗೆ ಕಾಯ್ದೆಯ ಬಗ್ಗೆ ತಿಳುವಳಿಕೆ ಮೂಡಿಸಬೇಕು. ಕಾಯ್ದೆಯ ನಿಯಮಗಳ ಕುರಿತು ಕರಪತ್ರಗಳನ್ನು ಮುದ್ರಿಸಿ ಜನಸಂದಣಿ ಪ್ರದೇಶಗಳಾದ ಬಸ್ ನಿಲ್ದಾಣ, ರೈಲು ನಿಲ್ದಾಣ ಒಳಗೊಂಡಂತೆ ವಿವಿಧ ಸ್ಥಳಗಳಲ್ಲಿ ಪ್ರಚುರಪಡಿಸುವ ಮೂಲಕ ಜನರಲ್ಲಿ ಈ ಕುರಿತು ಜಾಗೃತಿ ಮೂಡಿಸಬೇಕು, ಲಿಂಗಾನುಪಾತದ ಸಮಾನತೆ ಕಾಪಾಡಲು ಜಾಗೃತಿ ಅಭಿಯಾನ ಕೈಗೊಳ್ಳಬೇಕು,

ರೇಡಿಯೋ ಜಿಂಗಲ್ಸ್ ಮೂಲಕ ಪ್ರಚುರಪಡಿಸಬೇಕು, ಸಾರ್ವಜನಿಕ ಪ್ರದೇಶಗಳಲ್ಲಿ ವಿಡಿಯೋ ಪ್ರದರ್ಶನ ಮಾಡುವ ಮೂಲಕ ಜಾಗೃತಿ ಮೂಡಿಸುವಂತೆ ಅವರು ಸೂಚನೆ ನೀಡಿದರು. ಸಭೆಯಲ್ಲಿ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಿಷಿ ಆನಂದ, ಉಪ ವಿಭಾಗಾಧಿಕಾರಿ ಗುರುನಾಥ ದಡ್ಡೆ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ.ಸಂಪತ್ ಗುಣಾರಿ, ಜಿಲ್ಲಾ ಕುಟುಂಬ ಕಲ್ಯಾಣಾಧಿಕಾರಿ ಡಾ.ರಾಜೇಶ್ವರಿ ಗೊಲಗೇರಿ, ಪಿಸಿ&ಪಿಎನ್‌ಡಿಟಿ ಸಲಹಾ ಸಮಿತಿ ಸದಸ್ಯರಾದ ಡಾ.ಟಿ.ಪಿ.ನಾಯ್ಡು, ಡಾ.ಶೈಲಜಾ ಬಿದರಿ, ಪೀಟರ್ ಅಲೆಕ್ಸಾಂಡರ್, ಶರತ್ ಜಿ.ರೂಡಗಿ ಸೇ-ರಿದಂತೆ ಇತರರು ಉಪಸ್ಥಿತರಿದ್ದರು.

## ಜನವರಿ 20 ರವರೆಗೆ ಯುವನಿಧಿ ಯೋಜನೆಯ ವಿಶೇಷ ನೋಂದಣಿ ಅಭಿಯಾನ

ಕೊಪ್ಪಳ : ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದಿಂದ "ಯುವನಿಧಿ ಯೋಜನೆಯ ವಿಶೇಷ ನೋಂದಣಿ ಅಭಿಯಾನ"ವನ್ನು ಜನವರಿ 20 ರವರೆಗೆ ಜಿಲ್ಲೆಯಾದ್ಯಂತ ಹಮ್ಮಿಕೊಳ್ಳಲಾಗಿದೆ.

ಕರ್ನಾಟಕ ಸರಕಾರದ ಮಹತ್ವಕಾಂಕ್ಷಿ ಯೋಜನೆಗಳಲ್ಲಿ ಒಂದಾದ 'ಯುವನಿಧಿ' ಯೋಜನೆ ಫಲಾನುಭವಿಗಳ ನೋಂದಣಿ ಪ್ರಕ್ರಿಯೆ ಚಾಲ್ತಿಯಲ್ಲಿರುತ್ತದೆ. ಈ ಸಂಬಂಧ 2022–23 ಹಾಗೂ 2023–24ನೇ ಸಾಲಿನಲ್ಲಿ ಪದವಿ/ಡಿಪ್ಲೋಮಾ ತೇರ್ಗಡೆ ಹೊಂದಿದ ನಿರುದ್ಯೋಗ ಅಭ್ಯರ್ಥಿಗಳನ್ನು 'ಯುವನಿಧಿ' ಯೋಜನೆಯಡಿಯಲ್ಲಿ ನೋಂದಾಯಿಸಿಕೊಳ್ಳಲು http://sevasindhugs.karnataka.gov.in ಸೇವಾ ಸಿಂಧು ಪೋರ್ಟಲ್‌ನಲ್ಲಿ ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳಲು ಜನವರಿ 6 ರಿಂದ ಜ.20 ರವರೆಗೆ ವಿಶೇಷ ನೋಂದಣಿ ಅಭಿಯಾನವನ್ನು ಜಿಲ್ಲಾ ಉದ್ಯೋಗ ವಿನಿಮಯ ಕಛೇರಿ, ಜಿಲ್ಲೆಯ ಎಲ್ಲಾ ವಿಶ್ವವಿದ್ಯಾಲಯಗಳು, ಸರಕಾರಿ, ಅನುದಾನಿತ ಪದವಿ, ಡಿಪ್ಲೋಮಾ ಹಾಗೂ ತಾಲ್ಲೂಕು ಕಛೇರಿಗಳಲ್ಲಿ ಹಮ್ಮಿಕೊಳ್ಳಲಾಗಿದೆ. ಅರ್ಹ ಫಲಾನುಭವಿಗಳು ಈ ಸದಾವಕಾಶವನ್ನು ಉಪಯೋಗಿಸಿಕೊಂಡು ಇದರ ಸದುಪಯೋಗವನ್ನು ಪಡೆದುಕೊಳ್ಳಬಹುದು.

ಪದವೀಧರಿಗೆ ಪ್ರತಿ ತಿಂಗಳು ರೂ. 3000 ಹಾಗೂ ಡಿಪ್ಲೋಮಾ ಪದವೀಧರ–ರಿಗೆ ರೂ. 1500 ನಿರುದ್ಯೋಗಿ ಭತ್ಯೆಯನ್ನು ನೀಡಲಾಗುತ್ತದೆ. ಫಲಿತಾಂಶದ ನಂತರ ನಿರುದ್ಯೋಗಿಗಳಾಗಿ 180 ದಿವಸಗಳು ಪೂರೈಸಿ ಹೆಸರನ್ನು ನೊಂದಾಯಿಸಿಕೊಂಡ ಅಭ್ಯರ್ಥಿಗಳಿಗೆ ನೇರ ನಗದು ವರ್ಗಾವಣೆ ಮಾಡಲಾಗುತ್ತದೆ. ನಂತರ ಮಾಹೆವಾರು ಯುವನಿಧಿ ಯೋಜನೆಯ ಪ್ರಯೋಜನವನ್ನು ಪಡೆಯಬೇಕಿದ್ದರೆ, ಸೇವಾ ಸಿಂಧು ಪೋರ್ಟಲ್‌ನಲ್ಲಿ ಪ್ರತಿ ತಿಂಗಳು ತಾನು ನಿರುದ್ಯೋಗಿಯೆಂದು, ಉನ್ನತ ವ್ಯಾಸಂಗ ಮುಂದುವರೆಸುತ್ತಿಲ್ಲವೆಂದು ಹಾಗೂ ಸ್ವಯಂ ಉದ್ಯೋಗವಿಲ್ಲವೆಂದು ಪ್ರತಿ ತಿಂಗಳು 25ನೇ ದಿನಾಂಕದೊಳಗಾಗಿ ಸ್ವಯಂ ಘೋಷಣೆ ಆಧಾರದ ಮೇಲೆ ಅಭ್ಯರ್ಥಿಗಳು ಮುಂದಿನ ಪಾವತಿಯನ್ನು ಸ್ವೀಕರಿಸಬಹುದು.

ಅಭ್ಯರ್ಥಿಗಳು ಕರ್ನಾಟಕ ಒನ್/ಗ್ರಾಮ ಒನ್ ಮತ್ತು ಬಾಪೂಜಿ ಸೇವಾ ಕೇಂದ್ರಗಳಲ್ಲಿ ಯುವನಿಧಿ ಯೋಜನೆಗೆ ಅರ್ಜಿ ಸಲ್ಲಿಸಬಹುದು. ಅರ್ಜಿ ಸಲ್ಲಿಸುವ ಸಂದರ್ಭದಲ್ಲಿ ಕಡ್ಡಾಯವಾಗಿ ಆಧಾರ ಸೀಡೆಡ್ ಬ್ಯಾಂಕ್ ಖಾತೆ ಹಾಗೂ ಆಧಾರ ಲಿಂಕ್ಡ್ ಮೊಬೈಲ್ ನಂಬರನ್ನು ಹೊಂದಿರಬೇಕು. ಅರ್ಜಿ ಸಲ್ಲಿಸಿದ ನಂತರ ಸೇವಾ ಸಿಂಧು ಪೋರ್ಟಲ್‌ನಲ್ಲಿ ತಮ್ಮ ಅರ್ಜಿಯು ಯಾವ ಹಂತದಲ್ಲಿದೆ ಎಂಬುದನ್ನು ಪರಿಶೀಲಿಸಿಕೊಂಡು, ಒಂದು ವೇಳೆ ಅರ್ಜಿಯು ಅಪ್ರೂವ್‌ವಾಗದ ಸಂದರ್ಭದಲ್ಲಿ ಸೂಚಿಸಲ್ಪಟ್ಟ ಇಲಾಖೆಯ ಕಛೇ–ರಿಗಳಿಗೆ ತಮ್ಮ ಎಲ್ಲಾ ಮೂಲ ಅಂಕಪಟ್ಟಿ ಹಾಗೂ ಇತರೆ ಪ್ರಮಾಣಪತ್ರಗಳೊಂದಿಗೆ ಖುದ್ದಾಗಿ ಭೇಟಿ ನೀಡಿ ಅಪ್ರೂವ್ ಮಾಡಿಸಿಕೊಳ್ಳಬೇಕಾಗಿರುತ್ತದೆ ಎಂದು ಜಿಲ್ಲಾ ಉದ್ಯೋಗ ಮಿನಿಮಯ ಕೇಂದ್ರದ ಉದ್ಯೋಗಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕು. ರಜತ ಕುಲಕರ್ಣಿಯವರಿಂದ ಸಂಗೀತ ಕಾರ್ಯಕ್ರಮ



ಬೆಳಗಾವಿ 9– ನಗರದ ಪಂ. ಬಿ. ವ್ಹಿ. ಕಡ್ಲಾಸ್ಕರಬುವಾ ಮೆಮೋರಿಯಲ್ ಟ್ರಸ್ಟ್ ಬೆಳಗಾವಿ ಇವರು 'ಸಂಕ್ರಾಂತಿಯ ಸ್ವರ–ಸಂಜೆ' ಕಾರ್ಯಕ್ರಮವನ್ನು ಇದೇ ದಿ. 12 ರವಿವಾರದಂದು ಸಾಯಂಕಾಲ 6 ಗಂಟೆಗೆ ಚೆನ್ನಮ್ಮ ವೃತ್ತದ ಬಳಿಯಿರುವ ಕನ್ನಡ ಸಾಹಿತ್ಯ ಭವನದಲ್ಲಿ ಹಮ್ಮಿಕೊಂಡಿದ್ದಾರೆ.

ಚೆನ್ನಮ್ಮ ಕಿತ್ತೂರಿನ ಕು. ರಜ–ತ ಕುಲಕರ್ಣಿಯವರಿಂದ ಲಘು ಮತ್ತ ಶಾಸ್ತ್ರೀಯ ಸಂಗೀತ ಕಾರ್ಯಕ್ರಮವಿದ್ದು ಯೋಗೇಶ ರಾಮದಾಸ ಹಾರ್ಮೋನಿಯಂ ಮತ್ತು ನಾರಾಯಣ ಗಣಾಚಾರಿ ತಬಲಾ ಸಾಥ ನೀಡಲಿದ್ದಾರೆ. ಹೆಚ್ಚಿನ ಸಂಖ್ಯೆಯಲ್ಲಿ ಸಂಗೀತಾಸಕ್ತರು ಆಗಮಿಸಿ ಕಾರ್ಯಕ್ರಮದ ಸದುಪಯೋಗ ಪಡೆಯುವಂತೆ ಗುರುರಾಜ ಕುಲಕರ್ಣಿ ಮತ್ತು ವಿಜಯ ಬಾಂದಿವಡೆಕರ ಪ್ರಕಟನೆಯಲ್ಲಿ ತಿಳಿಸಿದ್ದಾರೆ.

## ಅತಿವೃಷ್ಠಿಯಿಂದ ಉಂಟಾದ ಬೆಳೆ ಹಾನಿ ಪರಿಹಾರ ಫಲಾನುಭವಿಗಳ ಖಾತೆಗೆ ಇನಪುಟ್ ಸಬ್ಸಿಡಿ ನೇರ ಜಮೆ ಮಾಡಲಾಗಿದೆ: ಜಿಲ್ಲಾಧಿಕಾರಿ ದಿವ್ಯ ಪ್ರಭು



ಧಾರವಾಡ : 2024–25ನೇ ಸಾಲಿನಲ್ಲಿ ನೈಸರ್ಗಿಕ ವಿಕೋಪಗಳಾದ ಪ್ರವಾಹ, ಅತಿವೃಷ್ಠಿಯಿಂದ ಧಾರವಾಡ ಜಿಲ್ಲೆಯಲ್ಲಿ ಉಂಟಾದ ಬೆಳೆ ಹಾನಿ ಪರಿಹಾರವನ್ನು ಪಾವತಿಸುವ ಕುರಿತು ಬೆಳೆ ಸಮೀಕ್ಷೆ ದತ್ತಾಂಶ, ಫ್ರೂಟ್ಸ್ ಐಡಿ (ಈಖಗಙಖಿಖ ಖಆ) ಹೊಂದಿರುವ ರೈತರಿಗೆ ಬೆಳೆಹಾನಿ ಅಂತಿಮ ಜಂಟಿ ಸಮೀಕ್ಷೆ ವರದಿಯ ಆಧಾರದ ಮೇಲೆ ಪರಿಹಾರ ತಂತ್ರಾಂಶದ ಮೂಲಕ ಹಂತ–ಹಂತವಾಗಿ ಪರಿಹಾರ ವಿತರಣೆ ಮಾಡಲಾಗುತ್ತಿದೆ. ಮೊದಲ ಮತ್ತು ಎರಡನೇ ಹಂತದಲ್ಲಿ ಇಲ್ಲಿಯವರೆಗೆ ಒಟ್ಟಾರೆಯಾಗಿ ಧಾರವಾಡ ಜಿಲ್ಲೆಯ ಏಳು ತಾಲ್ಲೂಕಿನ 69,573 ರೈತ ಫಲಾನುಭವಿಗಳಿಗೆ ರೂ.48.45 ಕೋಟಿಗಳನ್ನು ಒಟ್ಟು ಕ್ಷೇತ್ರ 55,809.19 ಹೆಕ್ಟರಗೆ ಇನಪುಟ್ ಸಬ್ಸಿಡಿಯನ್ನು ಜಮೆ ಮಾಡಲಾಗಿದೆ ಎಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ಧಾರವಾಡ ಜಿಲ್ಲೆಯಲ್ಲಿ ಒಂದನೇ ಹಂತವಾಗಿ ಸೆಪ್ಟಂಬರ್ ತಿಂಗಳಲ್ಲಿ ಧಾರವಾಡ, ಅಳ್ನಾವರ ಮತ್ತು ಕಲಘಟಗಿ ತಾಲ್ಲೂಕುಗಳಲ್ಲಿ ಒಟ್ಟು 19,058 ಜನ ರೈತರಿಗೆ ರೂ.6.34 ಕೋಟಿ ಒಟ್ಟು ಕ್ಷೇತ್ರ 7,706.51 ಹೆಕ್ಟರಗೆ ಇನಪುಟ್ ಸಬ್ಸಿಡಿಯನ್ನು ಜಮೆ ಮಾಡಲಾಗಿದೆ.

ಅಕ್ಟೋಬರ್ ತಿಂಗಳಲ್ಲಿ ಸುರಿದ ಅತಿಯಾದ ಮಳೆಯಿಂದಾಗಿ ಧಾರವಾಡ ಜಿಲ್ಲೆಯ 7 ತಾಲ್ಲೂಕುಗಳಿಗೆ ಎರಡನೇ ಹಂತದಲ್ಲಿ ಈಗಾಗಲೇ ಒಟ್ಟು 50,515 ಜನ ರೈತರಿಗೆ ರೂ. 42.11 ಕೋಟಿ ಒಟ್ಟು ಕ್ಷೇತ್ರ 48,102.68 ಹೆಕ್ಟರಗೆ ಇನಪುಟ್ ಸಬ್ಸಿಡಿಯನ್ನು ಜಮೆ ಮಾಡಲಾಗಿದೆ.

ಎರಡನೇ ಹಂತದಲ್ಲಿ ಧಾರವಾಡ ತಾಲ್ಲೂಕಿನ 9,132 ಫಲಾನುಭವಿಗಳಿಗೆ ರೂ.758.30 ಲಕ್ಷಗಳನ್ನು ಒಟ್ಟು ಕ್ಷೇತ್ರ 9198.70 ಹೆಕ್ಟರಗೆ ಇನಪುಟ್ ಸಬ್ಸಿಡಿಯನ್ನು ಜಮೆ ಮಾಡಲಾಗಿದೆ.

ಅಳ್ನಾವರ ತಾಲ್ಲೂಕಿನ 69 ಫಲಾನುಭವಿಗಳಿಗೆ ರೂ.3.99 ಲಕ್ಷಗಳನ್ನು ಒಟ್ಟು ಕ್ಷೇತ್ರ 49.48 ಹೆಕ್ಟರಗೆ ಇನಪುಟ್ ಸಬ್ಸಿಡಿಯನ್ನು ಜಮೆ ಮಾಡಲಾಗಿದೆ.

ಹುಬ್ಬಳ್ಳಿ ತಾಲ್ಲೂಕಿನ 8,616 ಫಲಾನುಭವಿಗಳಿಗೆ ರೂ.791.98 ಲಕ್ಷಗಳನ್ನು ಒಟ್ಟು ಕ್ಷೇತ್ರ 9,551.28 ಹೆಕ್ಟರಗೆ ಇನಪುಟ್ ಸಬ್ಸಿಡಿಯನ್ನು ಜಮೆ ಮಾಡಲಾಗಿದೆ.

ಹುಬ್ಬಳ್ಳಿ ನಗರ ತಾಲ್ಲೂಕಿನ 741 ಫಲಾನುಭವಿಗಳಿಗೆ ರೂ.63.81 ಲಕ್ಷಗಳನ್ನು ಒಟ್ಟು ಕ್ಷೇತ್ರ 765.37 ಹೆಕ್ಟರಗೆ ಇನಪುಟ್ ಸಬ್ಸಿಡಿಯನ್ನು ಜಮೆ ಮಾಡಲಾಗಿದೆ.

ಕುಂದಗೋಳ ತಾಲ್ಲೂಕಿನ 19,778 ಫಲಾನುಭವಿಗಳಿಗೆ ರೂ.1,223.27 ಲಕ್ಷಗಳನ್ನು ಒಟ್ಟು ಕ್ಷೇತ್ರ 14,819.30 ಹೆಕ್ಟರಗೆ ಇನಪುಟ್ ಸಬ್ಸಿಡಿಯನ್ನು ಜಮೆ ಮಾಡಲಾಗಿದೆ.

ನವಲಗುಂದ ತಾಲ್ಲೂಕಿನ 8,998 ಫಲಾನುಭವಿಗಳಿಗೆ ರೂ.1,121.47 ಲಕ್ಷಗಳನ್ನು ಒಟ್ಟು ಕ್ಷೇತ್ರ 10,714.04 ಹೆಕ್ಟರಗೆ ಇನಪುಟ್ ಸಬ್ಸಿಡಿಯನ್ನು ಜಮೆ ಮಾಡಲಾಗಿದೆ.

ಅಣ್ಣಿಗೇರಿ ತಾಲ್ಲೂಕಿನ 3,181 ಫಲಾನುಭವಿಗಳಿಗೆ ರೂ.248.35 ಲಕ್ಷಗಳನ್ನು ಒಟ್ಟು ಕ್ಷೇತ್ರ 3,004.51 ಹೆಕ್ಟರಗೆ ಇನಪುಟ್ ಸಬ್ಸಿಡಿಯನ್ನು ಜಮೆ ಮಾಡಲಾಗಿದೆ.

ಒಟ್ಟಾರೆಯಾಗಿ ಎರಡನೇ ಹಂತದಲ್ಲಿ ಧಾರವಾಡ ಜಿಲ್ಲೆಯ ಏಳು ತಾಲ್ಲೂಕಿನ 50,515 ಫಲಾನುಭವಿಗಳಿಗೆ ರೂ. 4,211.17 ಲಕ್ಷಗಳನ್ನು ಒಟ್ಟು ಕ್ಷೇತ್ರ 48,102.68 ಹೆಕ್ಟರಗೆ ಇನಪುಟ್ ಸಬ್ಸಿಡಿಯನ್ನು ಜಮೆ ಮಾಡಲಾಗಿದೆ ಎಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಗೋವು ರಕ್ಷಣೆಯಲ್ಲಿ ಕಾಂಗ್ರೆಸ್ ಸರ್ಕಾರ ವಿರೋಧ ನೀತಿಗೆ ಖಂಡನೆ: ಜಗದೀಶ ಬೂದಿಹಾಳ



ಬೈಲಹೊಂಗಲ: ನಗರದ ಬಿಜೆಪಿ ಕಚೇರಿಯಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಬಿಜೆಪಿ ರೈತ ಮೋರ್ಚಾ ಬೆಳಗಾವಿ ಗ್ರಾಮಾಂತರ ಜಿಲ್ಲಾ ಅಧ್ಯಕ್ಷ ಜಗದೀಶ ಬೂದಿಹಾಳ ಅವರು. ಭಾರತೀಯ ಸಂಸ್ಕೃತಿಯಲ್ಲಿ ಗೋವು ಆಧಾರಿತ ಕೃಷಿ ಒಂದು ಬಹು ಮುಖ್ಯವಾದ ವಿಚಾರ, ಗೋವುಗಳಿಗೆ ಮತ್ತು ಮುನುಷ್ಯರಿಗೆ ಮತ್ತು ಪ್ರಕೃತಿಗೆ ಅವಿನಾಭಾವ ಸಂಬಂಧ. ಭಾರತೀಯ ಪರಂಪರೆಯಲ್ಲಿ ಗೋ ಮಾತೆಗೆ ತನ್ನದೆ ಆದ ಸ್ಥಾನವಿದೆ. ಈ ದೇಶದಲ್ಲಿ ಕೃಷಿ ಏನಾದರು ಉಳಿದಿದ್ದರೆ, ಅದು ಗೋ ಮಾತೆಯ ಕಾಣಿಕೆ. ಆದರೆ, ರಾಜ್ಯದ ಕೋಟ್ಯಾಂತರ ಜನರ ಭಾವನೆಗಳೊಂದಿಗೆ ಬೆರೆತಿರುವ ಗೋ ಮಾತೆಯನ್ನು ಸಂರಕ್ಷಣೆಮಾಡುವಲ್ಲಿ ರಾಜ್ಯ ಕಾಂಗ್ರೆಸ್ ಸರ್ಕಾರವು ತನ್ನ ಅಸಡ್ಡೆಯನ್ನು ತೋ–ರಿಸುತ್ತಿದೆ. ಕರ್ನಾಟಕ ರಾಜ್ಯದಲ್ಲಿ ಭಾರತೀಯ ಜನತಾ ಪಕ್ಷ ಆಡಳಿತ ನಡೆಸುತ್ತಿದ್ದ ಸಮಯದಲ್ಲಿ ರಾಜ್ಯಾದ್ಯಂತ ಒಟ್ಟು 15 ಜಿಲ್ಲೆಗಳಲ್ಲಿ ಗೋ ಶಾಲೆಗಳನ್ನು ಪ್ರಾರಭಿಸಿತ್ತದೆ. ಆದರೆ, ನಂತರ ಬಂದ ಕಾಂಗ್ರೆಸ್ ಸರ್ಕಾರವು ಬಹು ಸಂಖ್ಯಾತ ಹಿಂದುಗಳ ಭಾವನೆಗೆ ಧಕ್ಕೆ ತರುವ ಉದ್ದೇಶದಿಂದ ಗೋ ಶಾಲೆಗಳಿಗೆ ಅನುದಾನಗಳನ್ನು ಕಡಿತಗೊಳಿಸಿ ಅದರ ಮೂಲ ಉದ್ದೇಶಗಳಿಗೆ ತೊಂದರೆಕೊಡುವ ಮೂಲಕ ಗೋ ಶಾಲೆಗಳನ್ನು ಮುಚ್ಚಲು ಹೊರಟಿರುವುದು ಕರ್ನಾಟಕ ರಾಜ್ಯದ ಮತದಾರರಿಗೆ ಮಾಡಿರುವ ಅನ್ಯಾಯವಾಗಿದೆ.

ರಾಜ್ಯದಲ್ಲಿ 1.10 ಕೋಟಿ ಜಾನುವಾರುಗಳಿದ್ದು, ಇವುಗಳ ಸಂರಕ್ಷಣೆಮಾಡಲು ಮತ್ತು ಹಾಲು ಉತ್ಪಾದಕರಿಗೆ ಉತ್ತೇಜನ ನೀಡಲು ಕೇಂದ್ರ ಸರ್ಕಾರವು ಸಾಕಷ್ಟು ಕೇಂದ್ರ ಪುರಸ್ಕೃತ ಯೋಜನೆಗಳನ್ನು ರೂಪಿಸಿದೆ. ಈ ಕಾರ್ಯಕ್ರಮಗಳನ್ನು ಅನುಷ್ಠಾನಮಾಡುವುದು ರಾಜ್ಯ ಸರ್ಕಾರದ ಕರ್ತವ್ಯ. ಈ ಕಾರ್ಯಕ್ರಮಗಳನ್ನು ಅನುಷ್ಠಾನ ಮಾಡುವಲ್ಲಿ ರಾಜ್ಯ ಸರ್ಕಾರ ವಿಫಲಗೊಂಡಿದೆ. ಈ ವಿಫಲತೆಯು ರಾಜ್ಯ ಸರ್ಕಾರದ ನಿಷ್ಕ್ರಿಯತೆಯನ್ನು ಎತ್ತಿ ತೋರಿಸುತ್ತದೆ. ಗೋ ಶಾಲೆಗಳನ್ನು ಮುಚ್ಚುವ ಮುಖಾಂತರ ಗೋ ಕಳ್ಳ ಸಾಗಣೆಯನ್ನು ಉತ್ತೇಜನ ನೀಡುವಂತೆ ಸರ್ಕಾರ ನಡೆದುಕೊಳ್ಳುತ್ತಿದೆ. ರಾಜ್ಯ ರೈತ ಮೋರ್ಚಾವು ಸರ್ಕಾರವನ್ನು ಒತ್ತಾಯಿಸುವುದೇನೆಂದರೆ ಗೋ ಶಾಲೆಗಳನ್ನು ಪುನರಾರಂಭಿಸಬೇಕು, ಗೋ ಶಾಲೆಗಳಿಗೆ ವಿಶೇಷ ಅನುದಾನವನ್ನು ನೀಡಬೇಕು, ಕೇಂದ್ರ ಪುರಸ್ಕೃತ ಗೋ ಆಧಾರಿತ ಯೋಜನೆಗಳನ್ನು ಶೀಘ್ರ ಅನುಷ್ಠಾನಕ್ಕೆ ಕ್ರಮ ಕೈಗೊಳ್ಳಬೇಕು, ಈ ರಾಜ್ಯದ ಬಹು ಸಂಖ್ಯಾತರ ಭಾವನೆಗಳಿಗೆ ಧಕ್ಕೆಯಾಗದ ರೀತಿ ನಡೆದುಕೊಳ್ಳಬೇಕು. ಈ ಮೇಲ್ಕಂಡ ಅಂಶಗಳನ್ನು ರಾಜ್ಯ ಸರ್ಕಾರ ಗಮನಿಸದಿದ್ದರೆ ರಾಜ್ಯ ರೈತ ಮೋರ್ಚಾದ ವತಿಯಿಂದ ರಾಜ್ಯಾದ್ಯಂತ ಉಗ್ರ ಹೋರಾಟ ಮಾಡಲಾಗುವುದು ಎಂದು ಸರ್ಕಾರಕ್ಕೆ ಎಚ್ಚರಿಸಿದರು. ಈ ಸಂದರ್ಭದಲ್ಲಿ ರೈತ ಮೋರ್ಚಾ ಹಾಗೂ ಬಿಜೆಪಿ ಪದಾಧಿಕಾರಿಗಳು, ಉಪಸ್ಥಿತ–ರಿದ್ದರು.

*********

## ವಿದ್ಯಾರ್ಥಿಗಳಿಂದ ತಂದೆತಾಯಿಗಳ ಪಾದ ಪೂಜೆ ಕಾರ್ಯಕ್ರಮ



ರಾಯಬಾಗ: ಮಗುವಿಗೆ ಪ್ರಾಥಮಿಕ ಶಿಕ್ಷಣವನ್ನು ಮಾತೃಭಾಷೆಯಲ್ಲಿ ನೀಡಿದರೆ ಪ್ರಪಂಚವನ್ನು ಚೆನ್ನಾಗಿ ಅರಿಯಲು ಸಾಧ್ಯವಾಗುತ್ತದೆ ಎಂದು ತಹಶೀಲ್ದಾರ ಸುರೇಶ ಮುಂಜೆ ಹೇಳಿದರು.

ಗುರುವಾರ ಸಾಯಂಕಾಲ ತಾಲೂಕಿನ ಖೈರವಾಡಿಯ ಹಾಲಸಿದ್ದೇಶ್ವರ ಕನ್ನಡ ಮಾಧ್ಯಮ ಹಿರಿಯ ಪ್ರಾಥಮಿಕ ಶಾಲೆಯ ವಾರ್ಷಿಕ ಸ್ನೇಹ ಸಮ್ಮೇಳನ ಹಾಗೂ ವಿದ್ಯಾರ್ಥಿಗಳಿಂದ ತಂದೆತಾಯಿಗಳ ಪಾದ ಪೂಜೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದವರು ಇಂದು ಅನೇಕ ಉನ್ನತ ಹುದ್ದೆಯನ್ನು ಅಲಂಕರಿಸಿದ್ದಾರೆ. ನಗು ನಗುತ್ತ ಬಾಳುವುದೇ ಶಿಕ್ಷಣ ಎಂದರು.

ಬಿಇಒ ಬಸವರಾಜಪ್ಪ ಆರ್. ಮಾತನಾಡಿ, ಪಾಲಕರು ಮತ್ತು ಶಿಕ್ಷಕರು ಮಕ್ಕಳಿಗೆ ಒಳ್ಳೆಯ ಶಿಕ್ಷಣದ ಜೊತೆಗೆ ಒಳ್ಳೆಯ ಸಂಸ್ಕಾರ ನೀಡಬೇಕೆಂದರು.

ಪರಮಾನಂದವಾಡಿಯ ಗುರುದೇವ ಬ್ರಹ್ಮಾನಂದ ಆಶ್ರಮದ ಡಾ.ಅಭಿನವ ಬ್ರಹ್ಮಾನಂದ ಸ್ವಾಮೀಜಿಯವರು ಆಶೀರ್ವಚನ ನೀಡಿದರು.

ಸಂಸ್ಥೆಯ ಅಧ್ಯಕ್ಷ, ವಕೀಲರಾದ ಆರ್.ಎಚ್.ಗೊಂಡೆ ಅಧ್ಯಕ್ಷತೆಯನ್ನು ವಹಿಸಿದ್ದರು.

ಕಾರ್ಯಕ್ರಮದಲ್ಲಿ ಚಿಕ್ಕೋಡಿ ಅಬಕಾರಿ ನಿರೀಕ್ಷಕ ರಾಜು ಗೊಂಡೆ, ವಕೀಲರ ಸಂಘದ ಅಧ್ಯಕ್ಷ ಪಿ.ಎಮ್. ದರೂರ, ಗ್ರಾ.ಪಂ.ಅಧ್ಯಕ್ಷೆ ಮಹಾದೇವಿ ದೀಪಾಳೆ, ಸಿ.ಆರ್.ಪಿ ಅನೀಲ ಸುತಾರ, ಶಿಕ್ಷಕ ಬಿ.ಎಲ್.ಘಂಟಿ, ರಾಜು ಕುರಾಡೆ, ರಮೇಶ ಗೊಂಡೆ, ಅಂಬರೀಶ ಬ್ಯಾಕೂಡೆ, ಸತ್ಯಪ್ಪ ಗೊಂಡೆ, ಕುಮಾರ ಘೇನಾನಿ, ಯಾಸಿನ್ ಮೋಮಿನ ಸೇ–ರಿದಂತೆ ಶಿಕ್ಷಕರು, ವಿದ್ಯಾರ್ಥಿಗಳು ಮತ್ತು ಪಾಲಕರು ಇದ್ದರು.

ಮಕ್ಕಳಿಂದ ಸಾಂಸ್ಕೃತಿಕ ಕಾರ್ಯಕ್ರಮ ಜರುಗಿದವು.

## ಬಾಲಕಾರ್ಮಿಕ ಪದ್ಧತಿ ವಿರೋಧಿ ಜನಜಾಗೃತಿ ಸಂಚಾರಿ ವಾಹನಕ್ಕೆ ಜಿಲ್ಲಾಧಿಕಾರಿಗಳಿಂದ ಚಾಲನೆ



ಗದಗ: ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಕಾರ್ಮಿಕ ಇಲಾಖೆ ಹಾಗೂ ಜಿಲ್ಲಾ ಬಾಲಕಾರ್ಮಿಕ ನಿರ್ಮೂಲನಾ ಯೋಜನಾ ಸೊಸೈಟಿ(ರಿ) ಗದಗ ಇವರ ಸಂಯುಕ್ತ ಆಶ್ರಯದಲ್ಲಿ ಗುರುವಾರ ಜಿಲ್ಲಾಡಳಿತ ಭವನದ ಆವರಣದಲ್ಲಿ ಬಾಲ ಕಾರ್ಮಿಕ ಹಾಗೂ ಕಿಶೋರ ಕಾರ್ಮಿಕ ಪದ್ಧತಿ ವಿರೋಧಿ ಜನಜಾಗೃತಿ ಸಂಚಾರಿ ವಾಹನಕ್ಕೆ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಅವರು ಚಾಲನೆ ನೀಡಿದರು.

ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಅವರು ಮಾತನಾಡಿ 1986 ರ ಬಾಲ ಕಾರ್ಮಿಕ ಮತ್ತು ಕಿಶೋರ ಕಾರ್ಮಿಕ ನಿಷೇದ ಮತ್ತು ನಿಯಂತ್ರಣ ತಿದ್ದುಪಡಿ ಕಾಯ್ದೆ 2016 ರ ಪ್ರಕಾರ 14 ವರ್ಷದ ಮೇಲ್ಪಟ್ಟ ಹಾಗೂ 18 ವರ್ಷ ಒಳಗಿನ ಕಿಶೋರ ಕಾರ್ಮಿಕರನ್ನು ಅಪಾಯಕಾರಿ ಉದ್ಯಮದಲ್ಲಿ ಹಾಗೂ 14 ವರ್ಷದ ಒಳಗಿನ ಮಕ್ಕಳನ್ನು ಯಾವುದೇ ಕೆಲಸಕ್ಕೆ ನೇಮಿಸಿಕೊಳ್ಳುವುದು ಶಿಕ್ಷಾರ್ಹ ಅಪರಾಧವಾಗಿದೆ. ಒಂದು ವೇಳೆ ನೇಮಿಸಿಕೊಂಡಲ್ಲಿ ಕನಿಷ್ಠ 20000 ದಿಂದ ಗರಿಷ್ಠ 50000 ರ ವರೆಗೆ ದಂಡ ಹಾಗೂ 6 ತಿಂಗಳಿಂದ 3 ವರ್ಷದ ವರೆಗೆ ಜೈಲು ಶಿಕ್ಷೆ ವಿಧಿಸಲು ಅವಕಾಶವಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಕಾರ್ಮಿಕ ಅಧಿಕಾರಿಗಳಾದ ಶ್ರೀಶೈಲ್ ಸೊಮನಕಟ್ಟಿ, ಬಾಲಕಾರ್ಮಿಕ ಯೋಜನಾ ಸೊಸೈಟಿಯ ಯೋಜನಾ ನಿರ್ದೇಶಕರಾದ ಸಂದೇಶ ಪಾಟೀಲ, ಕಾರ್ಮಿಕ ನಿರೀಕ್ಷಕರಾದ ಉಮೇಶ ಹುಲ್ಲಣ್ಣವರ 2ನೇ ವೃತ್ತ ಗದಗ, ಕುಮಾರಿಸುಶ್ಮಾ 1ನೇ ವೃತ್ತ ಗದಗ ಹಾಗೂ ಫಕಿರಪ್ಪ ಹಡಗಲಿ ಹಾಗೂ ಕಾರ್ಮಿಕ ಇಲಾಖೆಯ ಸಿಬ್ಬಂದಿಗಳು ಪಾಲ್ಗೊಂಡಿದ್ದರು.

ಸದರಿ ವಾಹನವು ಜಿಲ್ಲೆಯಾದ್ಯಂತ 15 ದಿನಗಳವರೆಗೆ ಸಂಚರಿಸಲಿದೆ.

*********

## ವೇದಿಕೆ ನಿರ್ಮಾಣ ಕಾಮಗಾರಿಗೆ ಭೂಮಿ ಪೂಜೆ



ಖಾನಾಪುರ : ಖಾನಾಪುರ ತಾಲೂಕಿನ ಕಾರಲಗಾ ಗ್ರಾಮದ ಪ್ರೌಢಶಾಲೆಯ ವಾರ್ಷಿಕ ಕ್ರೀಡಾಕೂಟದಲ್ಲಿ ಭಾಗವಹಿಸಿದ ಯುವ ಕಾಂಗ್ರೆಸ್ ಮುಖಂಡ ಮೃಣಾಲ ಹೆಬ್ಬಾಳಕರ್, ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ನಡೆಸಲು ಅನುಕೂಲವಾಗುವಂತೆ ಶಾಲಾ ಆವರಣದಲ್ಲಿ ವೇದಿಕೆ ನಿರ್ಮಾಣದ ಕಾಮಗಾರಿಗೆ ಭೂಮಿ ಪೂಜೆ ನೆರವೇ–ರಿಸಿದರು.

ಮಕ್ಕಳು ಪಠ್ಯ ಚಟುವಟಿಕೆ ಜೊತೆ ಜೊತೆಗೇ ಪಠ್ಯೇತರ ಚಟುವಟಿಕೆಗಳಿಗೂ ಮಹತ್ವ ನೀಡಬೇಕು. ದೈಹಿಕ ಬೆಳವಣಿಗೆಗೆ ಕ್ರೀಡೆ ಕೂಡ ಮಹತ್ವ. ಮೊಬೈಲ್ ಗೀಳಿನಿಂದ ಹೊರಬಂದು ಮೈದಾನದಲ್ಲಿ ಆಟವಾಡಬೇಕು.

ಅಂದಾಗ ಮಾತ್ರ ಸರ್ವಾಂಗೀಣ ಬೆಳವಣಿಗೆ ಸಾಧ್ಯ ಎಂದು ಮೃಣಾಲ ಹೆಬ್ಬಾಳಕರ್ ಹೇಳಿದರು.

ಕಾರ್ಯಕ್ರಮದಲ್ಲಿ ಖಾನಾಪುರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಈಶ್ವರ್ ಗಾಡೆ, ಪಕ್ಷದ ಮುಖಂಡರಾದ ಯಶವಂತ ಬಿರ್ಜೆ, ವಿನಾಯಕ ಮುತಗೇಕರ್, ವಾಯ್.ಎನ್.ಮಜುಕರ್ ಉಪಸ್ಥಿತರಿದ್ದರು.

***

## ರಂಗಸಂಪದದವರಿಂದ 'ರಂಗ ಸಂಕ್ರಮಣ' ನಾಟಕೋತ್ಸವ

ಬೆಳಗಾವಿ – ನಗರದ ರಂಗಸಂಪದದವರು ಇದೇ ದಿನಾಂಕ 11 ಶನಿವಾರದಿಂದ ದಿನಾಂಕ 14 ಮಂಗಳವಾರದವರೆಗೆ ಪ್ರತಿದಿನ ಸಾಯಂಕಾಲ 6–30 ಕ್ಕೆ 4 ದಿನಗಳ ಕಾಲ 'ರಂಗ ಸಂಕ್ರಮಣ' ನಾಟಕೋತ್ಸವವನ್ನು ಕೋನವಾಳ ಬೀದಿಯಲ್ಲಿರುವ ಲೋಕಮಾನ್ಯ ರಂಗಮಂದಿರದಲ್ಲಿ ಹಮ್ಮಿಕೊಂಡಿದ್ದಾರೆ. ನಾಟಕೋತ್ಸವದ ಉದ್ಘಾಟನೆಯನ್ನು ಭಾರತೀಯ ಜೀವವಿಮಾ ನಿಗಮದ ಹಿರಿಯ ವಿಭಾಗಾಧಿಕಾರಿ ಬಿ. ಪಿ. ರವಿಯವರು ಮಾಡಲಿದ್ದಾರೆ.

ದಿ.11 ಶನಿವಾರದಂದು ಧಾರವಾಡದ ಅಭಿನಯ ಭಾರತಿ ತಂಡದವರಿಂದ ಡಾ. 'ಉರಿಯ ಉಯ್ಯಾಲೆ' ಏಕವ್ಯಕ್ತಿ ಪ್ರದರ್ಶನವಿದೆ. ಶ್ರೀಪತಿ ಮಂಜನಬೈಲು ಅವರ ನಿರ್ದೇಶನವಿದ್ದು ಪ್ರಸ್ತುತಿ ಜ್ಯೋತಿ ದಿಕ್ಷಿತ ಪುರಾಣಿಕ ಅವರದ್ದಾಗಿದೆ.

ದಿ. 12 ರವಿವಾರ ರಂದು ರಂಗಸಂಪದದವ–ರಿಂದ ಬೆಳಗಾವಿ ಇವರು ಕಲಾವಕಾಶದವರ ಸಹಕಾರದೊಂದಿಗೆ ಈಗಾಗಲೇ ಹಲಾವರು ಪ್ರದರ್ಶನಗಳನ್ನು ಕಂಡು ಜನರ ಪ್ರೀತಿಗೆ ಪಾತ್ರವಾಗಿರುವ 'ಡಿಯರ ಅಜ್ಜೋ' ನಾಟಕ ಪ್ರದರ್ಶನಗೊಳ್ಳಲಿದೆ. ಡಾ. ಅರವಿಂದ ಕುಲಕರ್ಣಿ ಮತ್ತು ಕು. ಸ್ನೇಹಾ ಕುಲಕರ್ಣಿ ಅಜ್ಜ ಮತ್ತು ಮೊಮ್ಮಗಳ ಪಾತ್ರಗಳಲ್ಲಿ ಅಭಿನಯಿಸಲಿದ್ದು. ವೈಭವ ಲೋಕೂರ ಅವರ ನಿರ್ದೇಶನವಿದೆ.

ದಿ. 13 ಸೋಮವಾರದಂದು ರಂಗಬಂಡಿ ಮಳವಳ್ಳಿ ತಂಡದವರಿಂದ ಏಕವ್ಯಕ್ತಿ ಪ್ರದರ್ಶನ 'ಮಧುರ ಮಂಡೋದರಿ' ನಾಟಕ ಪ್ರದರ್ಶನಗೊಳ್ಳಲಿದೆ. ಮಧು ಮಳವಳ್ಳಿಯವರ ನಿರ್ದೇಶನವಿದ್ದು ವನೀತಾ ರಾಜೇಶ ಪ್ರಸ್ತುತ ಪಡಿಸಲಿದ್ದಾರೆ.

ದಿ.14 ಮಂಗಳವಾರದಂದು ಧಾರವಾಡ ಆಟಮಾಟ ತಂಡದವರಿಂದ ಪಂ. ಬಸವರಾಜ ರಾಜಗುರು ಅವರ ಬದುಕಿನ ವೃತ್ತಾಂತಗಳಿಂದ ಕೂಡಿದ ನಾಟಕ 'ನಾ ರಾಜಗುರು' ಪ್ರದರ್ಶನಗೊಳ್ಳಲದೆ. ಮಹಾದೇವ ಹಡಪದ ಅವರ ನಿರ್ದೇಶನವಿದ್ದು ವಿಶ್ವರಾಜ ರಾಜಗುರು ಅವರು ಪ್ರಸ್ತುತಪಡಿಸಲಿದ್ದಾರೆ. 'ರಂಗ ಸಂಕ್ರಮಣ' ನಾಟಕೋತ್ಸವದ ಪ್ರಾಯೋಜ–ಕತ್ವವನ್ನು ಭಾರತೀಯ ಜೀವವಿಮಾ ನಿಗಮ ವಿಭಾಗೀಯ ಕಚೇರಿ, ಬೆಳಗಾವಿ ಇವರು ವಹಿಸಿಕೊಂಡಿದ್ದಾರೆ. ಪ್ರದರ್ಶನಗೊಳ್ಳಲಿರುವ ನಾಟಕಗಳು ನಾಡಿನ ಹಿರಿಯ ಸಾಹಿತಿ, ಕಲಾವಿದರ ಪ್ರಶಂಸೆಗೆ ಪಾತ್ರವಾಗಿವೆ. ರಂಗಾಸಕ್ತರು ಇದರ ಸದುಪಯೋಗ ಪಡೆಯುವಂತೆ ರಂಗಸಂಪದದ ಅಧ್ಯಕ್ಷ ಡಾ. ಅರವಿಂದ ಕುಲಕರ್ಣಿ ಹಾಗು ಕಾರ್ಯದರ್ಶಿ ಪ್ರಸಾದ ಕಾರಜೋಳ ಪ್ರಕಟನೆಯಲ್ಲಿ ತಿಳಿಸಿದ್ದಾರೆ.

# ಗಣರಾಜ್ಯೋತ್ಸವ ದಿನಾಚರಣೆ ಶಿಸ್ತುಬದ್ಧ ಆಚರಣೆಗೆ ಆದ್ಯತೆ



ಗದಗ: ಜಿಲ್ಲೆಯಲ್ಲಿ ಜನೇವರಿ 26 ರಂದು ಜರುಗಲಿರುವ ಗಣರಾಜ್ಯೋತ್ಸವ ದಿನಾಚರಣೆಯನ್ನು ಶಿಸ್ತುಬದ್ಧ ಹಾಗೂ ಅರ್ಥ–ಪೂರ್ಣ ವ್ಯವಸ್ಥಿತವಾಗಿ ಆಚರಿಸಲು ಅಗತ್ಯ ಕ್ರಮ ಕೈಗೊಳ್ಳಬೇಕೆಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಅವರು ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಗುರುವಾರ ಜರುಗಿದ ಗಣರಾಜ್ಯೋತ್ಸವ ದಿನಾಚರಣೆ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಜಿಲ್ಲಾ ಮಟ್ಟದ ಗಣರಾಜ್ಯೋತ್ಸವ ದಿನಾಚರಣೆಗೆ ವಿವಿಧ ಸಮಿತಿಗಳನ್ನು ರಚಿಸಲಾಗಿದ್ದು ಆಯಾ ಸಮಿತಿಯವರು ಜವಾಬ್ದಾರಿಯಿಂದ ಕಾರ್ಯ ನಿರ್ವಹಿಸಬೇಕು. ಕಾರ್ಯಕ್ರಮದಲ್ಲಿ ಯಾವುದೇ ಲೋಪದೋಷಗಳಿಗೆ ಆಸ್ಪದ ನೀಡದೇ ಅಚ್ಚುಕಟ್ಟಾಗಿ ಕಾರ್ಯನಿರ್ವಹಿಸುವಂತೆ ನಿರ್ದೇಶನ ನೀಡಿದರು.

ಗಣರಾಜ್ಯೋತ್ಸವ ದಿನದಂದು ಸರ್ಕಾರ ರಜೆ ನೀಡುವುದು ಗಣರಾಜ್ಯೋತ್ಸವ ಆಚ–ರಣೆಗಾಗಿ ಎಂಬುದನ್ನು ಅಧಿಕಾರಿಗಳು ಹಾಗೂ ಇಲಾಖಾ ಸಿಬ್ಬಂದಿಗಳು ಗಮನದಲ್ಲಿಟ್ಟುಕೊಂಡು ಗಣರಾಜ್ಯೋತ್ಸವ ಹಬ್ಬವನ್ನು ಅತ್ಯಂತ ಸಂಭ್ರಮ ಸಡಗರದಿಂದ ಆಚರಿಸಲು ಒಗ್ಗಟ್ಟಾಗಿ ಪಾಲ್ಗೊಳ್ಳಬೇಕು ಎಂದರು.

ಗಣರಾಜ್ಯೋತ್ಸವ ದಿನಾಚರಣೆ ಅಂಗವಾಗಿ ಕಾರ್ಯಕ್ರಮದ ಹಿಂದಿನ ದಿನ ಹಾಗೂ ಕಾರ್ಯಕ್ರಮದ ದಿನ ಎರಡು ದಿನಗಳ ಕಾಲ ಸರ್ಕಾರಿ ಕಚೇರಿ ಹಾಗೂ ನಗರದ ವಿವಿಧ ವೃತ್ತಗಳಲ್ಲಿ ಸ್ವಚ್ಛತೆಯೊಂದಿಗೆ ವಿದ್ಯುತ್ ದೀಪಾಲಂಕಾರಕ್ಕೆ ಕ್ರಮ ಕೈಗೊಳ್ಳಬೇಕು. ಗಣ–ರಾಜ್ಯೋತ್ಸವ ದಿನದಂದು ಎಲ್ಲ ಕಚೇರಿ ಮತ್ತು ಶಾಲಾ ಕಾಲೇಜುಗಳ ಸಿಬ್ಬಂದಿ ತಮ್ಮ ಕಾರ್ಯಾಲಯದ ಧ್ವಜಾರೋಹಣವನ್ನು ಬೆ7.30 ರೊಳಗೆ ನೆರವೇರಿಸಿ ಬೆ.8.30 ಗಂಟೆಗೆ ನಗರದ ಕೆ.ಎಚ್.ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಹಾಜರಾಗಬೇಕು. ಅಂ–ದು ಬೆ.9 ಗಂಟೆಗೆ ನಗರದ ಕೆ.ಎಚ್.ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಜಿಲ್ಲಾ ಉಸ್ತುವಾರಿ ಸಚಿವರಿಂದ ಸಾರ್ವಜನಿಕ ಧ್ವಜಾರೋಹಣ ಕಾರ್ಯಕ್ರಮ ಜರುಗಲಿದ್ದು ಎಲ್ಲ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಕಡ್ಡಾಯವಾಗಿ ಹಾಜ–ರಿರಬೇಕು ಎಂದು ಸೂಚಿಸಿದರು.

ಕಾರ್ಯಕ್ರಮದ ಸ್ಥಳದ ಸ್ವಚ್ಛತೆ ಕುರಿತು ಆದ್ಯತೆ ವಹಿಸಬೇಕು. ಕಾರ್ಯಕ್ರಮ ಮುಗಿದ ನಂತರವೂ ಸಹ ಆ ಸ್ಥಳ ಮೊದಲಿನ ಹಾಗೆ ಸ್ವಚ್ಛವಾಗಿರುವಂತೆ ಸಂಬಂಧಿತ ಅಧಿಕಾರಿಗಳು ನಿಗಾ ವಹಿಸಬೇಕು. ಅತಿಥಿಗಳಿಗೆ ಆಸನದ ವ್ಯವಸ್ಥೆ, ಅಲ್ಪೋಪಹಾರದ ವ್ಯವಸ್ಥೆ ಕುರಿತು ಕ್ರಮ ಕೈಗೊಳ್ಳಬೇಕು. ವಿವಿಧ ರಂಗಗಳಲ್ಲಿ ಅತ್ಯುತ್ತಮ ಸಾಧನೆ ಮಾಡಿದ ಸಾಧಕರಿಗೆ ಸನ್ಮಾನಿಸುವ ಕಾರ್ಯಕ್ರಮವನ್ನುಅಚ್ಚುಕಟ್ಟಾಗಿ ನಿರ್ವಹಿಸಬೇಕು. ಕಾರ್ಯಕ್ರಮದ ಕು–ರಿತು ಮುದ್ರಿಸಲಾಗುವ ಆಮಂತ್ರಣ ಪತ್ರಿಕೆಗಳನ್ನು ಶಿಷ್ಟಾಚಾರದ ಪ್ರಕಾರ ಮುದ್ರಿಸಿ ಗಣ್ಯರುಗಳಿಗೆ ಸಾಕಷ್ಟು ಸಮಯ ಮುಂಚಿತವಾಗಿ ತಲುಪಿಸಿ ಕಾರ್ಯಕ್ರಮಕ್ಕೆ ಆಹ್ವಾನಿಸಬೇಕು. ಕಾರ್ಯಕ್ರಮದಲ್ಲಿ ಶಿಷ್ಟಾಚಾರ ಉಲ್ಲಂಘನೆಯಾಗದಂತೆ ನಿಗಾವಹಿಸಬೇಕು ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ತಿಳಿಸಿದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್ ಮಾತನಾಡಿ ಗಣರಾಜ್ಯೋತ್ಸವ ವ್ಯವಸ್ಥಿತ ಆಚರಣೆಗಾಗಿ ವಿವಿಧ ಇಲಾಖೆಯ ಅಧಿಕಾ–ರಿಗಳು ಪರಸ್ಪರ ಸಮನ್ವಯತೆಯಿಂದ ಹಾಗೂ ಶ್ರದ್ಧೆಯಿಂದ ಕಾರ್ಯನಿರ್ವಹಿಸುವುದು ಮುಖ್ಯವಾಗಿದೆ. ಇಲಾಖಾಧಿಕಾರಿಗಳಿಗೆ ಗಣರಾಜ್ಯೋತ್ಸವದ ಆಚರಣೆ ಕುರಿತಂತೆ ವಹಿಸಲಾಗಿರುವ ಜವಾಬ್ದಾರಿಯನ್ನು ಸರಿಯಾಗಿ ನಿಭಾಯಿಸುವ ಮೂಲಕ ಕಾರ್ಯಕ್ರಮದ ಯಶಸ್ಸಿಗೆ ಶ್ರಮಿಸುವಂತೆ ಸೂಚಿಸಿದರು.

ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ ಮಾತನಾಡಿ ಗಣರಾಜ್ಯೋತ್ಸವ ದಿನಾಚರಣೆಯ ಕುರಿತಂತೆ ಕಳೆದ ವರ್ಷದ ಸಭಾ ನಡುವಳಿಯ ಅಂಶಗಳನ್ನು ಸಭೆಯ ಮುಂದಿಡುತ್ತಾ ಪ್ರಸಕ್ತ ವರ್ಷ ವಿವಿಧ ಇಲಾಖಾಧಿಕಾ–ರಿಗಳು ನಿರ್ವಹಿಸಬೇಕಾದ ಜವಾಬ್ದಾರಿಗಳನ್ನು ತಿಳಿಸಿದರು.

ಸಭೆಯಲ್ಲಿ ಸಾಂಸ್ಕೃತಿಕ ಕಾರ್ಯಕ್ರಮದ ವ್ಯವಸ್ಥೆ, ಎನ್‌ಎಸ್‌ಎಸ್ ಹಾಗೂ ಎನ್‌ಸಿಸಿ ಪರೇಡ, ಮೂಲಭೂತ ಸೌಕರ್ಯಗಳ ವ್ಯವಸ್ಥೆ, ವೇದಿಕ ನಿರ್ಮಾಣ, ಆಸನದ ವ್ಯವಸ್ಥೆ, ಆಂಬುಲೆನ್ಸ್ ವ್ಯವಸ್ಥೆ ಕುರಿತು ಮುಂತಾದ ವಿಷಯಗಳ ಕುರಿತು ಚರ್ಚಿಸಲಾಯಿತು.

ಸಭೆಯಲ್ಲಿ ಹೆಚ್ಚುವರಿ ಪೊಲೀಸ ವರಿಷ್ಠಾಧಿಕಾರಿ ಎಂ.ಬಿ.ಸಂಕದ,ಉಪವಿಭಾಗಾಧಿಕಾರಿ ಗಂಗಪ್ಪ, ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಬಸವರಾಜ ಕೊಟ್ಟೂರ, ತಹಶೀಲ್ದಾರ ಶ್ರೀನಿವಾಸಮೂರ್ತಿ ಕುಲಕರ್ಣಿ, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಮಹೇಶ ಪೋತದಾರ, ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯ ಜಂಟಿ ನಿರ್ದೇಶಕ ವಿನೋದಕುಮಾರ್ ಹೆಗ್ಗಳಗಿ, ಯುವಜನ ಸೇವಾ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಶರಣು ಗೋಗೇರಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಎಸ್. ಎಸ್.ನೀಲಗುಂದ, ಲೋಕೋಪಯೋಗಿ ಇಲಾಖೆಯ ಕಾರ್ಯಕಾರಿ ಅಭಿಯಂತರರಾದ ರಮೇಶ ಪಾಟೀಲ, ಭೂ ದಾಖಲೆ ಇಲಾಖೆ ಉಪನಿರ್ದೇಶಕ ರುದ್ರಗೌಡ, ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಆರ್. ಎಸ್.ಬುರುಡಿ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

# ದೇಹದ ತೂಕ ಇಳಿಸಲು ರಾಜಸ್ಥಾನಿ ವೈದ್ಯರು ಹೇಳಿರುವ ಪರಿಣಾಮಕಾರಿ ಮನೆಮದ್ದುಗಳಿವು



ತೂಕ ಇಳಿಸುವುದು ಬರೀ ನಿಮ್ಮ ಬಾಹ್ಯ ಸೌಂದರ್ಯಕ್ಕೆ ಮಾತ್ರವಲ್ಲ, ನಿಮ್ಮ ಉತ್ತಮ ಆರೋಗ್ಯಕ್ಕೂ ಪ್ರಯೋಜನಕಾರಿಯಾಗಿದೆ. ಹಾಗಾಗಿ ಬಹಳಷ್ಟು ಮಂದಿ ವಾಕಿಂಗ್, ಜಿಮ್ ವರ್ಕೌಟ್ ಜೊತೆಗೆ ಡಯೆಟ್‌ನ್ನೂ ಪಾಲಿಸುತ್ತಾರೆ. ನಿಮಗೂ ತೂಕ ಇಳಿಸಬೇಕೆಂದಿದ್ದರೆ ಇಲ್ಲಿದೆ ಸಿಂಪಲ್ ಮನೆಮದ್ದು.

ಇತ್ತೀಚಿನ ದಿನಗಳಲ್ಲಿ ಹೆಚ್ಚಿನ ಜನರು ಸ್ಥೂಲಕಾಯತೆಯಿಂದ ತೊಂದರೆಗೀಡಾಗಿದ್ದಾರೆ. ಸ್ಥೂಲಕಾಯತೆಯು ದೇಹದ ಸೌಂದರ್ಯವನ್ನು ಕಡಿಮೆ ಮಾಡುವುದಲ್ಲದೆ ಹೃದಯಾಘಾತದಿಂದ ಹಿಡಿದು ಹಲವಾರು ಗಂಭೀರ ಮತ್ತು ಮಾರಣಾಂತಿಕ ಕಾಯಿಲೆಗಳಿಗೆ ಕಾರಣವಾಗುತ್ತದೆ. ತೂಕ ಇಳಿಸಿಕೊಳ್ಳುವುದು ಸುಲಭದ ಮಾತಲ್ಲ ನಿಜ. ದೇಹದ ತೂಕವನ್ನು ಕಡಿಮೆಮಾಡುವ ಸಲುವಾಗಿ ಅನೇಕರು ಪ್ರತಿದಿನ ಜಿಮ್‌ಗೆ ಹೋಗಿ ವರ್ಕ್‌ಔಟ್ ಮಾಡುತ್ತಾರೆ. ಡಯೆಟ್‌ನ್ನು ಅನುಸರಿಸುತ್ತಾರೆ. ಇಷ್ಟೆಲ್ಲಾ ಮಾಡಿದರೂ ನಿರೀಕ್ಷಿತ ಫಲಿತಾಂಶ ಪಡೆಯಲು ಸಾಧ್ಯವಾಗುವುದಿಲ್ಲ.

**ರಾಜಸ್ಥಾನಿ ವೈದ್ಯರ ಟಿಪ್ಸ್**

ಎಲ್ಲಾ ಪರಿಹಾರಗಳನ್ನು ಪ್ರಯತ್ನಿಸಿದ ನಂತರ ಮತ್ತು ಸಾಕಷ್ಟು ಹಣವನ್ನು ಖರ್ಚು ಮಾಡಿದ ನಂತರವೂ ನೀವು ತೂಕವನ್ನು ಕಳೆದುಕೊಳ್ಳದಿದ್ದರೆ, ರಾಜಸ್ಥಾನದ ಪ್ರಸಿದ್ಧ ವೈದ್ಯ ಜಗದೀಶ್ ಸುಮನ್ ಅವರು ತಿಳಿಸಿರುವ ಈ ಮನೆಮದ್ದನ್ನು ಟ್ರೈ ಮಾಡಿ ನೋಡಿ.

ಇದು ಬಹಳ ಕಡಿಮೆ ಬೆಲೆಯ ತಯಾರಿಸಬಹುದಾದ ಆಯುರ್ವೇದಿಕ್ ಪರಿಹಾರವಾಗಿದೆ. ಇದು 100 ಪ್ರತಿಶತದಷ್ಟು ದೇಹದಲ್ಲಿನ ಬೊಜ್ಜು ಕಡಿಮೆ ಮಾಡಲು ಸಹಾಯಮಾಡುತ್ತದೆ ಎನ್ನಲಾಗುತ್ತದೆ. ನೀವೂ ಕೂಡಾ ತೂಕ ಇಳಿಸಿಕೊಳ್ಳಬೇಕೆಂದಿದ್ದರೆ ಈ ಸಲಹೆಯನ್ನು ಪಾಲಿಸಿ.

**ಇದಕ್ಕೆ ಬೇಕಾಗುವ ಸಾಮಾಗ್ರಿಗಳು**

250 ಗ್ರಾಂ ಓಂಕಾಳು
5 ರಿಂದ 6 ದೊಡ್ಡ ನಿಂಬೆಹಣ್ಣುಗಳು
250 ಗ್ರಾಂ ಸೋಂಪು ಕಾಳು
10 ಗ್ರಾಂ ಕೀಡಾ ಜಡಿ



100 ಗ್ರಾಂ ಕಪ್ಪು ಉಪ್ಪು
50 ಗ್ರಾಂ ಇಂದ್ರಾಯಣ ಪುಡಿ
ತೂಕ ಇಳಿಕೆಗೆ ವೈದ್ಯರ ಸಲಹೆ

**ತೂಕ ನಷ್ಟಕ್ಕೆ ಮನೆಮದ್ದನ್ನು ತಯಾರಿಸುವುದು ಹೇಗೆ?**

ದೊಡ್ಡ ಬಟ್ಟಲಿನಲ್ಲಿ ಓಂಕಾಳು ಇರಿಸಿ.

ಅದರಲ್ಲಿ ಸಾಕಷ್ಟು ನಿಂಬೆ ಹಿಂಡಿ, ನಿಂಬೆ ರಸದಲ್ಲಿ ಓಂಕಾಳು ಚೆನ್ನಾಗಿ ಮುಳುಗುತ್ತದೆ.

ನಿಂಬೆಯಿಂದ ಬೀಜಗಳನ್ನು ತೆಗೆದುಹಾಕುವುದನ್ನು ಮರೆಯದಿರಿಈ ಮಿಶ್ರಣವನ್ನು ನೆರಳಿನಲ್ಲಿ ಒಣಗಿಸಿ.

ಮಿಶ್ರಣವು ಒಣಗಿದ ನಂತರ, ಅದರಲ್ಲಿ ಸೋಂಪುಕಾಳನ್ನು ಮಿಶ್ರಣ ಮಾಡಿ.

ಇದರ ನಂತರ, ಅದರಲ್ಲಿ ಉಪ್ಪು ಬೆರೆಸಿ ಮತ್ತು ಇಂದ್ರಾಯಣ ಪುಡಿಯನ್ನು ಕೂಡ ಮಿಶ್ರಣ ಮಾಡಿ.

ಇದರ ನಂತರ, ಅದರಲ್ಲಿ 10 ಗ್ರಾಂ ಕೀಡಾ ಜಡಿ ಮಿಶ್ರಣ ಮಾಡಿ.

ಇವೆಲ್ಲವನ್ನೂ ಚೆನ್ನಾಗಿ ಪುಡಿ ಮಾಡಿ ಒಂದು ಗಾಜಿನ ಪಾತ್ರೆಯಲ್ಲಿ ಸಂಗ್ರಹಿಸಿಡಿ.

**ಇದನ್ನು ಸೇವಿಸುವುದು ಹೇಗೆ?**

ಈ ಮಿಶ್ರಣವನ್ನು ಪ್ರತಿದಿನ ಬೆಳಿಗ್ಗೆ ಮತ್ತು ಸಂಜೆ ಸೇವಿಸಲು ವೈದ್ಯರು ಸಲಹೆ ನೀಡಿದ್ದಾರೆ. ಅರ್ಧ ಚಮಚ ಪುಡಿಯನ್ನು ತೆಗೆದುಕೊಂಡು ಬೆಚ್ಚಗಿನ ನೀರಿನೊಂದಿಗೆ ಬೆರೆಸಿ ಇದನ್ನು ಸೇವಿಸಬೇಕು. ಹೀಗೆ ದಿನಕ್ಕೆರಡು ಬಾರಿ ಈ ಪುಡಿಯನ್ನು ಸೇವಿಸಬೇಕು.

**ಬೊಜ್ಜು 100 ಪ್ರತಿಶತ ಕಡಿಮೆಯಾಗುತ್ತದೆ**

ಸ್ಥೂಲಕಾಯದಿಂದ ಬಳಲುತ್ತಿರುವವರಿಗೆ ತೂಕ ಇಳಿಸುವ ಈ ವಿಧಾನವು ತುಂಬಾ ಪರಿಣಾಮಕಾರಿಯಾಗಿದೆ ಎಂದು ವೈದ್ಯರು ಹೇಳುತ್ತಾರೆ. ಈ ಮಿಶ್ರಣವನ್ನು ಸೇವಿಸುವುದರಿಂದ 100 ಪ್ರತಿಶತ ಬೊಜ್ಜು ಕಡಿಮೆಯಾಗುತ್ತದೆ. ಅಷ್ಟೇ ಅಲ್ಲ ಇದರ ಸೇವನೆಯಿಂದ ಹೊಟ್ಟೆಗೆ ಸಂಬಂಧಿಸಿದ ಇತರೆ ಸಮಸ್ಯೆಗಳನ್ನೂ ನಿವಾರಿಸಬಹುದು. ಈ ಪರಿಹಾರದಿಂದ ನೀವು ಎರಡರಿಂದ ಮೂರು ತಿಂಗಳೊಳಗೆ ಫಲಿತಾಂಶವನ್ನು ಪಡೆಯುತ್ತೀರಿ.



# ಕಾಫಿ ಕುಡಿಯೋದ್ರಿಂದ ಹೃದಯ ಬಡಿತ ವೇಗವಾಗುತ್ತೆ ಇದು ನಿಜನಾ?




ಕಾಫಿಯು ಹೆಚ್ಚಿನ ಪ್ರಮಾಣದ ಕೆಫಿನ್ ಅನ್ನು ಹೊಂದಿರುತ್ತದೆ. ಇದು ಹೃದಯದ ಬಡಿತವನ್ನು ಹೆಚ್ಚಿಸುವುದಲ್ಲದೆ, ನಿದ್ರಾಹೀನತೆಗೂ ಕಾರಣವಾಗುತ್ತದೆ ಎಂದು ವಿಡಿಯೋವೊಂದರಲ್ಲಿ ತಿಳಿಸಲಾಗಿದೆ. ಇದು ಎಷ್ಟರಮಟ್ಟಿಗೆ ನಿಜ ವೈದ್ಯರಿಂದ ತಿಳಿಯೋಣ.

ಕೆಲವರು ಚಹಾವನ್ನು ಇಷ್ಟಪಟ್ಟರೆ ಇನ್ನೂ ಕೆಲವರು ಕಾಫಿ ಕುಡಿಯೋದನ್ನು ಇಷ್ಟಪಡುತ್ತಾರೆ. ಅದರಲ್ಲೂ ಚಳಿಗಾಲದಲ್ಲಿ ಬಿಸಿ ಬಿಸಿ ಕಾಫಿ ಕುಡಿಯುವುದು ದೇಹವನ್ನು ಬೆಚ್ಚಗಾಗಿಸಲು ಸಹಾಯ ಮಾಡುತ್ತದೆ. ಕಾಫೀ ಕುಡಿಯುವುದರಿಂದ ಮೂಡ್ ಫ್ರೆಶ್ ಆಗುತ್ತದೆ, ಮನಸ್ಸಿಗೆ ಉಲ್ಲಾಸ ಆಗುತ್ತದೆ ಎನ್ನುವುದನ್ನು ನೀವು ಕೇಳಿರಬಹುದು. ಆದರೆ ಕಾಫಿ ಕುಡಿಯದ್ರಿಂದ ಹೃದಯ ಬಡಿತ ಹೆಚ್ಚುತ್ತದೆ, ಹೊಟ್ಟೆ ನೋವು ಶುರುವಾಗುತ್ತದೆ ಎಂದು ಯೂಟ್ಯೂಬ್‌ನಲ್ಲಿನ ವಿಡಿಯೋವೊಂದು ಹೇಳುತ್ತಿದೆ.

**ವಿಡಿಯೋದಲ್ಲಿ ಏನಿದೆ?**

MyChannel-i4w ನಲ್ಲಿ ಯೂಟ್ಯೂಬ್‌ನಲ್ಲಿ ಪ್ರಕಟವಾದ ಕಿರುಚಿತ್ರವೊಂದು ಕಾಫಿ ಕುಡಿಯುವುದು ನಿದ್ರಾಹೀನತೆ, ಹೊಟ್ಟೆ ನೋವು ಸೇರಿದಂತೆ ಅನೇಕ ಸಮಸ್ಯೆಗಳು ಉಂಟಾಗಬಹುದು ಎಂದು ಹೇಳುತ್ತಿದೆ. ಈ ವಿಡಿಯೋದಲ್ಲಿ ಕಾಫಿ ಕುಡಿಯೋದರ ಅನಾನುಕೂಲಗಳ ಬಗ್ಗೆ ವಿವರಿಸಿದ್ದಾರೆ.

ಅವರ ಪ್ರಕಾರ, ಕಾಫಿ ಸೇವನೆಯು ನಿದ್ರಾಹೀನತೆ, ಹೆದರಿಕೆ, ಹೆಚ್ಚಿದ ಹೃದಯ ಬಡಿತ, ಹೊಟ್ಟೆ ನೋವು, ತಲೆನೋವು ಮತ್ತು ವಾಕರಿಕೆ ಮುಂತಾದ ಸಮಸ್ಯೆಗಳನ್ನು ಉಂಟುಮಾಡಬಹುದು.

**ಇದು ನಿಜವೋ, ಸುಳ್ಳೋ**

ಆದರೆ ಈ ವಿಡಿಯೋದಲ್ಲಿ ತಿಳಿಸಲಾಗಿರುವ ಮಾಹಿತಿ ಎಷ್ಟರ ಮಟ್ಟಿಗೆ ನಿಜ ಎನ್ನುವುದನ್ನು ವೈದ್ಯರಿಂದ ತಿಳಿಯೋಣ.

ನಿಜಕ್ಕೂ ಕಾಫೀ ಸೇವನೆಯಿಂದ ಈ ಎಲ್ಲಾ ಸಮಸ್ಯೆಗಳು ಕಾಡುತ್ತಾ? ಎನ್ನುವುದನ್ನು ನಾವು ಹೈದರಾಬಾದ್‌ನ ಸಮನ್ವೇ ಆಯುರ್ವೇದ ಕ್ಲಿನಿಕ್ ಸಂಸ್ಥಾಪಕ ಮತ್ತು ಮುಖ್ಯ ಸಲಹೆಗಾರರಾದ ಡಾ. ಸ್ನಿಗ್ಧಾ ವರ್ತಕ್ ಅವರಿಂದ ತಿಳಿಯೋಣ.

**ವೈದ್ಯರ ಅಭಿಪ್ರಾಯವೇನು?**

ಈ ವಿಡಿಯೋದಲ್ಲಿ ತಿಳಿಸಲಾಗಿರುವ ವಿಷಯಗಳ ಬಗ್ಗೆ ವೈದ್ಯರು ಮಿಶ್ರ ಪ್ರತಿಕ್ರಿಯೆ ನೀಡಿದ್ದಾರೆ. ಅವರ ಪ್ರಕಾರ, ಅದು ಎಷ್ಟು ಪ್ರಯೋಜನಗಳನ್ನು ಹೊಂದಿದೆಯೋ ಅಷ್ಟೇ ಅನಾನುಕೂಲವನ್ನು ಹೊಂದಿದೆ. ಕಾಫೀ ಸೇವಿಸುವುದರ ಅನಾನುಕೂಲಗಳು ಅದನ್ನು ಓರ್ವ ವ್ಯಕ್ತಿ ಎಷ್ಟು ಪ್ರಮಾಣದಲ್ಲಿ ಸೇವಿಸುತ್ತಾರೆ ಎನ್ನುವುದರ ಮೇಲೆ ಅವಲಂಭಿತವಾಗಿದೆ ಎನ್ನುತ್ತಾರೆ.

ಕಾಫಿಯಲ್ಲಿ ಹಲವು ಬಗೆಯ ರಾಸಾಯನಿಕಗಳಿವೆ. ಕಾಫಿಯಲ್ಲಿ ಹೆಚ್ಚಿನ ಪ್ರಮಾಣದ ಕೆಫೀನ್ ಇದೆ, ಇದು ನರಮಂಡಲವನ್ನು ತ್ವರಿತವಾಗಿ ಉತ್ತೇಜಿಸುತ್ತದೆ ಎಂದು ಅವರು ಹೇಳಿದರು. ಇದು ಮೆದುಳಿನಲ್ಲಿ ಅಡೆನೊಸಿನ್ ಗ್ರಾಹಕಗಳನ್ನು ತಡೆಯುವ ಮೂಲಕ ಜಾಗರೂಕತೆ ಮತ್ತು ದೈಹಿಕ ಕಾರ್ಯಕ್ಷಮತೆಯನ್ನು ಉತ್ತೇಜಿಸುತ್ತದೆ. ಇದಲ್ಲದೆ, ಇದು ಕ್ಲೋರೊಜೆನಿಕ್, ಕ್ವಿನಿಕ್, ಸಿಟ್ರಿಕ್, ಮಾಲಿಕ್, ಅಸಿಟಿಕ್ ಮತ್ತು ಫಾರ್ಮಿಕ್ ಆಮ್ಲಗಳನ್ನು ಸಹ ಒಳಗೊಂಡಿದೆ. ಇದು ಪಿತ್ತರಸದ ಮೇಲೆ ಪರಿಣಾಮ ಬೀರುತ್ತದೆ ಜೊತೆಗೆ ಕಾಫಿ ವಾತ ದೋಷವನ್ನು ಉತ್ತೇಜಿಸುತ್ತದೆ.

**ವೈದ್ಯರು ಕಾಫಿಯ ಅನಾನುಕೂಲಗಳನ್ನು ತಿಳಿಸಿದ್ದಾರೆ**

ಕಾಫಿಯ ಅತಿಯಾದ ಸೇವನೆಯು ಆತಂಕವನ್ನು ಹೆಚ್ಚಿಸುತ್ತದೆ.

ಕಾಫಿ ಕೆಳ ಅನ್ನನಾಳದ ಸ್ಪಿಂಕ್ಟರ್ ಅನ್ನು ಸಡಿಲಗೊಳಿಸುತ್ತದೆ, ಇದು ಆಸಿಡ್ ರಿಫ್ಲಕ್ಸ್ ಅಥವಾ ಎದೆಯುರಿ ಉಂಟುಮಾಡಬಹುದು.

ಕಾಫಿಯು ಕೆಫೀನ್ ಅಡೆನೊಸಿನ್ ಎಂಬ ರಾಸಾಯನಿಕವನ್ನು ಹೊಂದಿರುತ್ತದೆ, ಇದು ನಿದ್ದೆಗೆ ಅಡ್ಡಿಯನ್ನುಂಟು ಮಾಡುತ್ತದೆ.

ಕಾಫಿ ಆಮ್ಲೀಯವಾಗಿದೆ ಮತ್ತು ಹೊಟ್ಟೆಯ ಒಳಪದರವನ್ನು ಕೆರಳಿಸುತ್ತದೆ. ಇದು ಆಸಿಡ್ ರಿಫ್ಲಕ್ಸ್, ಜಠರದುರಿತ ಅಥವಾ ಹೊಟ್ಟೆ ಅಸಮಾಧಾನಕ್ಕೆ ಕಾರಣವಾಗಬಹುದು.

ಇದರ ನಿಯಮಿತ ಸೇವನೆಯು ತಲೆನೋವು, ಆಯಾಸ, ಕಿರಿಕಿರಿ ಮತ್ತು ಗಮನವನ್ನು ಕೇಂದ್ರೀಕರಿಸುವಲ್ಲಿ ತೊಂದರೆಗೆ ಕಾರಣವಾಗಬಹುದು.

**ಸತ್ಯಾನ್ವೇಷಣೆ ಏನು ಹೇಳುತ್ತೇ?**

ಕಾಫಿ ಕುಡಿಯುವುದರಿಂದ ಸಮಸ್ಯೆ ಉಂಟಾಗುತ್ತದೆ ಎಂಬ ಮಾತು ಬಹುಮಟ್ಟಿಗೆ ನಿಜ ಎಂಬುದು ಸಜಗ್ ತಂಡ ನಡೆಸಿದ ಸತ್ಯಾಂಶ ಪರಿಶೀಲನೆಯಿಂದ ತಿಳಿದುಬಂದಿದೆ. ಕಾಫಿ ಸೇವನೆಯು ಮಿತಿಮೀರಿದ ಸಂದರ್ಭಗಳಲ್ಲಿ ಈ ಸಮಸ್ಯೆಗಳು ಹೆಚ್ಚಾಗಿ ಕಂಡುಬರುತ್ತವೆ. ಅಂತಹ ಪರಿಸ್ಥಿತಿಯಲ್ಲಿ ಕಾಫಿಯನ್ನು ಮಿತವಾಗಿ ಸೇವಿಸುವುದು ಉತ್ತಮ.

# ಮನೆಯಲ್ಲಿ ಮೀನು ಚಿಕನ್ ಕರಿ ಮಾಡಲು ಬಳಸಿದ ಪಾತ್ರೆ ವಾಸನೆ ಬರುತ್ತಿದೆಯಾ? ಹಾಗಾದ್ರೆ ಹೀಗೆ ಮಾಡಿ

ಅಡುಗೆ ಮನೆಯಲ್ಲಿನ ಪಾತ್ರೆಗಳು ಶುಚಿಯಾಗಿದ್ದರೆ, ಆಗ ಮಾಡುವಂತಹ ಅಡುಗೆ ಕೂಡ ಆರೋಗ್ಯಕಾರಿಯಾಗಿರುವುದು. ಹೀಗಾಗಿ ಪಾತ್ರೆಗಳು ವಾಸನೆ ಬರುತ್ತಿದ್ದರೆ, ಅದನ್ನು ದೂರ ಮಾಡಲು ಕೆಲವೊಂದು ವಿಧಾನಗಳನ್ನು ಬಳಸಿಕೊಳ್ಳಬಹುದು.

ಅಡುಗೆ ಮನೆಯನ್ನು ಎಷ್ಟೇ ಶುಚಿ ಮಾಡಿದರೂ ಅಲ್ಲಿಂದ ಸ್ವಲ್ಪವಾದರೂ



ವಾಸನೆ ಎನ್ನುವುದು ಬಂದೇ ಬರುವುದು. ಅಡುಗೆ ಮನೆಯಲ್ಲಿ ಅಳಿದುಳಿದ ಆಹಾರ ಇತ್ಯಾದಿಗಳಿಂದ ವಾಸನೆಯು ಕೀಟಗಳಿಗೆ ಕೂಡ ರಹದಾರಿಯಾಗಿರುವುದು.ಅದರಲ್ಲೂ



ಕೆಲವೊಮ್ಮೆ ಪಾತ್ರೆಗಳಿಂದ ಆಹಾರದ ವಾಸನೆಯು ಹೋಗುವುದೇ ಇಲ್ಲ. ಮಾಂಸಾಹಾರಿಗಳ ಮನೆಯಲ್ಲಿ ಇದು ಹೆಚ್ಚೇ ಎನ್ನಬಹುದು. ಇದನ್ನು ಹೋಗಲಾಡಿಸಲು ಕೆಲವರು ನಾನಾ ರೀತಿಯಿಂದ ಪ್ರಯತ್ನಿಸುವರು. ಆದರೆ ಅವರಿಗೆ ಇದರಲ್ಲಿ ಯಶಸ್ಸು ಸಿಗುವುದಿಲ್ಲ.ಸ್ವಲ್ಪ ವಾಸನೆ ಹೋದರೂ ಮತ್ತೆ ಅದೇ ವಾಸನೆ ಮರಳಿ ಬರುವುದು ಇದೆ. ಇದಕ್ಕಾಗಿ ಕೆಲವು ವಿಧಾನಗಳನ್ನು ಅನುಸರಿಸಿಕೊಂಡು ಹೋದರೆ, ಆಗ ಪಾತ್ರೆಗಳಲ್ಲಿನ ವಾಸನೆಯನ್ನು ದೂರ ಮಾಡಬಹುದು. ಅದು ಹೇಗೆ ಎಂದು ತಿಳಿಯಿರಿ.

**ಕಾಫಿ ಪೌಡರ್ ಬಳಸಿ**


ವಾಸನೆ ಬರುತ್ತಿರುವ ಪಾತ್ರೆಗೆ 1–2 ಚಮಚ ಕಾಫಿ ಹುಡಿ ಹಾಕಿ ಮತ್ತು ಅದಕ್ಕೆ ನೀರು ಹಾಕಿಡಿ. 2–3 ನಿಮಿಷ ಕಾಲ ಇದನ್ನು ಗ್ಯಾಸ್ ನಲ್ಲಿಟ್ಟು ಕುದಿಸಿ. ಗ್ಯಾಸ್ ನಿಂದ ತೆಗೆದ ಬಳಿಕ 15–20 ನಿಮಿಷ ಕಾಲ ಹಾಗೆ ಬಿಡಿ ಮತ್ತು ಇದ ಬಳಿಕ ಡಿಟರ್ಜೆಂಟ್ ಬಳಸಿಕೊಂಡು ತೊಳೆಯಿರಿ.

**ಆಲೂಗಡ್ಡೆಯನ್ನು ಬಳಸಬಹುದು**

?ಆಲೂಗಡ್ಡೆಯನ್ನು ಕೇವಲ ಖಾದ್ಯಗಳನ್ನು ತಯಾರಿಸಲು ಮಾತ್ರವಲ್ಲದೆ, ವಾಸನೆ ದೂರ ಮಾಡಲು ಬಳಸಬಹುದು. ಆಲೂಗಡ್ಡೆ ತುಂಡುಗಳನ್ನು ಕತ್ತರಿಸಿಕೊಂಡು ಅದಕ್ಕೆ ಸ್ವಲ್ಪ ಉಪ್ಪನ್ನು ಸಿಂಪಡಿಸಿ, ವಾಸನೆ ಬರುತ್ತಿರುವ ಪಾತ್ರೆಗಳಲ್ಲಿ ಇದನ್ನು ಹಾಗೆ 10–15 ನಿಮಿಷ ಕಾಲ ಇಟ್ಟುಬಿಡಿ ಮತ್ತು ಇದರ ಬಳಿಕ ತೊಳೆಯಿರಿ.

**ದಾಲ್ಚಿನ್ನಿ ಬಳಸಿ**

ಸಾಂಬಾರ ಪದಾರ್ಥಗಳಲ್ಲಿ ಒಂದಾಗಿರುವಂತಹ ದಾಲ್ಚಿನ್ನಿಯು ಅದ್ಭುತ ವಾಗಿ ಕೆಲಸ ಮಾಡುವುದು.



ಇದು ಪಾತ್ರೆಗಳಲ್ಲಿ ಇರುವ ವಾಸನೆ ದೂರ ಮಾಡುವುದು. ದಾಲ್ಚಿನ್ನಿ ಹುಡಿ ಹಾಗೂ ಚಕ್ಕೆ ಹಾಕಿ ಪಾತ್ರೆಗೆ 3–4 ಕಪ್ ನೀರು ಹಾಕಿ ಐದು ನಿಮಿಷ ಕಾಲ ಕುದಿಸಿ. ಇದರ ಬಳಿಕ ತಣ್ಣಗಾದರೆ ಆಗ ಪಾತ್ರೆಗಳು ವಾಸನೆಯಿಲ್ಲದೆ ಹೊಳೆಯುವುದು.

**ಬಿಳಿ ವಿನೇಗರ್ ಬಳಸಿ**

ವಾಸನೆ ದೂರ ಮಾಡುವುದು ಮಾತ್ರವಲ್ಲದೆ, ಇನ್ನು ಹಲವಾರು ಬಗೆಯಲ್ಲಿ ವಿನೇಗರ್ ನ್ನು ಬಳಸಿಕೊಳ್ಳಬಹುದು. ಇದು ಅಡುಗೆ ಮನೆಯಲ್ಲಿರುವ ಪಾತ್ರೆಗಳ ವಾಸನೆಯನ್ನು ದೂರ ಮಾಡುವಲ್ಲಿ ಪ್ರಮುಖ ಪಾತ್ರ ವಹಿಸುವುದು. ಒಂದು ಕಪ್ ವಿನೇಗರ್ ನ್ನು ಪಾತ್ರೆಗೆ ಹಾಕಿ 10–15 ನಿಮಿಷ ಕಾಲ ಕುದಿಸಿ, ಎಷ್ಟೇ ಹಠಮಾರಿ ವಾಸನೆಯಾಗಿದ್ದರೂ ಇದು ತೆಗೆಯುವುದು.

**ಲಿಂಬೆ ಜತೆಗೆ ಉಪ್ಪು**


ಪಾತ್ರೆಗಳಲ್ಲಿನ ವಾಸನೆಯನ್ನು ತೆಗೆಯಲು ಲಿಂಬೆಯ ಜತೆಗೆ ಉಪ್ಪು ಬಳಸಿಕೊಂಡರೂ ಪ್ರಯೋಜನಕಾರಿಯಾಗಿರುವುದು. ಅರ್ಧ ಲಿಂಬೆ ತುಂಡುಗಳು ಮತ್ತು ಒಂದು ಪಿಂಗಾಣಿ ಉಪ್ಪು ತೆಗೆದುಕೊಳ್ಳಿ. ಲಿಂಬೆ ತುಂಡುಗಳನ್ನು ಉಪ್ಪಿನ ಪಿಂಗಾಣಿಗೆ ಹಾಕಿ ಮತ್ತು ಪಾತ್ರೆಯನ್ನು ಇದರಿಂದ ಸರಿಯಾಗಿ ಉಜ್ಜಿರಿ. ಇದನ್ನು 15–20 ನಿಮಿಷ ಹಾಗೆ ಬಿಡಿ ಮತ್ತು ಇದರ ಬಳಿಕ ಡಿಟರ್ಜೆಂಟ್ ಬಳಸಿಕೊಂಡು ತೊಳೆಯಿರಿ.

**ಲಿಂಬೆಯ ಸಿಪ್ಪೆ**

ಲಿಂಬೆಯ ಸಿಪ್ಪೆಯನ್ನು ಬಿಸಾಕುವ ಬದಲು ಅದನ್ನು ಬಳಸಿಕೊಂಡರೆ, ಪಾತ್ರೆಗಳಲ್ಲಿನ ವಾಸನೆ ದೂರ ಮಾಡಬಹುದು. ಇದರಲ್ಲಿ ಕೂಡ ಆಮ್ಲೀಯ ಗುಣವು ಇದೆ. ಲಿಂಬೆಯ ಸಿಪ್ಪೆಯನ್ನು ಪಾತ್ರೆಗೆ ಹಾಕಿ ಅದನ್ನು 15 ನಿಮಿಷ ಕಾಲ ಕುದಿಸಬೇಕು.ಆ ಬಳಿಕ ಪಾತ್ರೆಗಳನ್ನು ಸೋಪ್ ಹಾಕಿ ತೊಳೆಯ ಬೇಕು

**ಬೇಕಿಂಗ್ ಸೋಡಾ ಅಥವಾ ಅಡುಗೆ ಸೋಡಾ**

ಅಡುಗೆ ಮನೆಯಲ್ಲಿ ಬೇಕಿಂಗ್ ಸೋಡಾವು ತುಂಬಾ ಪ್ರಮುಖ ಪಾತ್ರ ವಹಿಸುತ್ತದೆ. ಪಾತ್ರೆಗಳಲ್ಲಿನ ವಾಸನೆ ನಿವಾರಣೆ ಮಾಡಲು ಒಂದು ಚಮಚ ಬೇಕಿಂಗ್ ಸೋಡಾವನ್ನು 4–5 ಚಮಚ ವಿನೇಗರ್ ಜತೆಗೆ ಹಾಕಿಕೊಂಡು ಬಳಸಿದರೆ ಆಗ ಇದು ಅದ್ಭುತವಾಗಿ ಕೆಲಸ ಮಾಡುವುದು. ಲಿಂಬೆ ತುಂಡನ್ನು ಕೂಡ ಇದಕ್ಕೆ ಹಾಕಬಹುದು. ಇದನ್ನು ಪಾತ್ರೆ ತೊಳೆಯಲು ಬಳಸಬಹುದು.



# ಥೈರಾಯ್ಡ್ ನಿರ್ವಹಿಸಲು ಆಹಾರಕ್ರಮ ಪಾಲನೆ ನಿರ್ಣಾಯಕ



ಥೈರಾಯ್ಡ್.. ಇದು ಇತ್ತೀಚಿನ ದಿನಗಳಲ್ಲಿ ಹೆಚ್ಚಾಗಿ ಕೇಳುತ್ತಿರುವ ಆರೋಗ್ಯ ಸಮಸ್ಯೆಗಳಲ್ಲಿ ಒಂದು. ಅದರಲ್ಲೂ ಪುರಷರಿಗಿಂತ ಮಹಿಳೆಯರಲ್ಲೇ ಈ ಸಮಸ್ಯೆ ಹೆಚ್ಚಾಗಿ ಕಾಡುತ್ತಿದೆ.

ಥೈರಾಯ್ಡ್.. ಇದು ಇತ್ತೀಚಿನ ದಿನಗಳಲ್ಲಿ ಹೆಚ್ಚಾಗಿ ಕೇಳುತ್ತಿರುವ ಆರೋಗ್ಯ ಸಮಸ್ಯೆಗಳಲ್ಲಿ ಒಂದು. ಅದರಲ್ಲೂ ಪುರಷರಿಗಿಂತ ಮಹಿಳೆಯರಲ್ಲೇ ಈ ಸಮಸ್ಯೆ ಹೆಚ್ಚಾಗಿ ಕಾಡುತ್ತಿದೆ.

ಥೈರಾಯ್ಡ್ ಕುತ್ತಿಗೆ ಭಾಗದಲ್ಲಿ ಚಿಟ್ಟೆಯಾಕಾರ ಗ್ರಂಥಿಯಾಗಿದ್ದು, ಇದು ಟಿ–3 ಹಾಗೂ ಟಿ–4 ಹಾರ್ಮೋನ್‌ಗಳನ್ನು ಉತ್ಪತ್ತಿಸುತ್ತವೆ. ಇದು ಪಿಟ್ಯುಟರಿ ಗ್ರಂಥಿಯಿಂದ ಸ್ರವಿಸುವ ಥೈರಾಯ್ಡ್ ಆಗಿದ್ದು, ಟಿಎಸ್‌ಎಚ್ ಹಾರ್ಮೋನ್ ಉತ್ಪದಿಸಲಿದ್ದು, ದೇಹದ ಪಚನ ಕ್ರಿಯೆಯನ್ನು ನಿಯಂತ್ರಿಸುತ್ತದೆ. ಥೈರಾಯ್ಡ್‌ನಲ್ಲಿ ಹೈಪೋ ಥೈರಾಯ್ಡ್ ಮಹಿಳೆಯರಲ್ಲಿ ಹೆಚ್ಚು ಕಾಣಿಸಿಕೊಳ್ಳುತ್ತದೆ. ಇದು ತೂಕ ಹೆಚ್ಚಳಕ್ಕೆ ಕಾರಣವಾಗುತ್ತದೆ. ಇದು ಅತ್ಯಂತ ಅಪಾಯಕಾರಿ ಕೂಡ ಹೌದು. ಹೈಪೋ ಥೈರಾಯ್ಡ್‌ನಿಂದ ಪಚನ ಕ್ರಿಯೆ ಸಂಪೂರ್ಣ ನಿಧಾನವಾಗುವುದರಿಂದ ದೇಹದಲ್ಲಿ ತೂಕ ಹೆಚ್ಚಳವಾಗುತ್ತದೆ. ಇದು ಕೂದಲು ಉದುರುವಿಕೆ, ರಕ್ತದೊತ್ತಡ ಹೆಚ್ಚಳ, ಸಕ್ಕರೆ ಕಾಯಿಲೆ ಇತ್ಯಾದಿ ರೋಗಕ್ಕೆ ಕಾರಣವಾಗಬಹುದು. ಹೀಗಾಗಿ ಥೈರಾಯ್ಡ್‌ನ ಲಕ್ಷಣ ಕಂಡು ಬಂದ ಕೂಡಲೇ ವೈದ್ಯರನ್ನು ಭೇಟಿ ಮಾಡಿ ಚಿಕಿತ್ಸೆ ಪಡೆದುಕೊಳ್ಳಬೇಕು.

ಥೈರಾಯ್ಡ್ ಹೊಂದಿರುವವರು ಆಹಾರ ಸೇವನೆಯಲ್ಲಿ ಹೆಚ್ಚು ಗಮನ ವಹಿಸಬೇಕು. ಥೈರಾಯ್ಡ್ ನಿರ್ವಹಣೆಯಲ್ಲಿ ಆಹಾರ ಕ್ರಮ ನಿರ್ಣಾಯಕವಾಗಿದೆ. ಈ ಆಹಾರ ಕ್ರಮದಿಂದ ಥೈರಾಯ್ಡ್ ಸಮಸ್ಯೆ ಗುಣಪಡಿಸಲು ಸಾಧ್ಯವಾಗುವುದಿಲ್ಲ. ಆದರೆ, ಸಮಸ್ಯೆಯನ್ನು ನಿರ್ವಹಿಸಬಹುದಾಗಿದೆ ಎಂದು ತಜ್ಞರು ಹೇಳಿದ್ದಾರೆ.

ಮೇ.25ರಂದು ವಿಶ್ವ ಥೈರಾಯ್ಡ್ ದಿನವಾಗಿದ್ದು, ಈ ಹಿನ್ನೆಲೆಯಲ್ಲಿ ತಜ್ಞರು ಥೈರಾಯ್ಡ್ ಕುರಿತು ಜನರಲ್ಲಿ ಜಾಗೃತಿ ಮೂಡಿಸುವ ಪ್ರಯತ್ನ ಮಾಡುತ್ತಿದ್ದಾರೆ.

ಥೈರಾಯ್ಡ್ ಸಮಸ್ಯೆ: ಲಕ್ಷಣ ಮತ್ತು ಚಿಕಿತ್ಸೆ (ಕುಶಲವೇ ಕ್ಷೇಮವೇ)

ಭಾರತದಲ್ಲಿ ಶೇ.8ರಷ್ಟು ಕುಟುಂಬಗಳು ಅಯೋಡಿನ್ ರಹಿತ ಉಪ್ಪನ್ನು ಸೇವನೆ ಮಾಡುತ್ತಿದ್ದು, ಅಯೋಡಿನ್ ಕೊರತೆಯ ಹೈಪೋಥೈರಾಯ್ಡಿಸಮ್ ಗೆ ಕಾರಣವಾಗುತ್ತಿದೆ.

ಆಸ್ಟರ್ ಸಿಎಂಐ ಆಸ್ಪತ್ರೆಯ ಅಂತಃಸ್ರಾವಶಾಸ್ತ್ರದ ಸಲಹೆಗಾರ ಡಾ.ಮಹೇಶ್ ಡಿಎಂ ಮಾತನಾಡಿ, ಥೈರಾಯ್ಡ್ ಗ್ರಂಥಿಯು ಕೆಲವು ಪೋಷಕಾಂಶಗಳಾದ ಅಯೋಡಿನ್, ಸೆಲೆನಿಯಮ್ ಮತ್ತು ಸತುವಿನ ಮೇಲೆ ಅವಲಂಬಿತವಾಗಿದೆ. ಇವುಗಳಲ್ಲಿ, ಅಯೋಡಿನ್ ಮತ್ತು ಸೆಲೆನಿಯಮ್ ಥೈರಾಯ್ಡ್ ಕಾಯಿಲೆಗಳಾದ ಗಾಯಿಟರ್ ಮತ್ತು ಹೈಪೋಥೈರಾಯ್ಡಿಸಮ್‌ನಲ್ಲಿ ನೇರ ಪಾತ್ರವನ್ನು ವಹಿಸುತ್ತವೆ, ಆದರೆ, ಹೆಚ್ಚುವರಿ ಅಯೋಡಿನ್ ಥೈರೋಟಾಕ್ಸಿಕೋಸಿಸ್‌ಗೆ ಕಾರಣವಾಗಬಹುದು ಎಂದು ಹೇಳಿದ್ದಾರೆ. ಹೈಪೋಥೈರಾಯ್ಡಿಸಮ್ ನಿಂದ ಬಳಲುತ್ತಿರುವವರಿಗೆ ಆಗಾಗ್ಗೆ ಮಲಬದ್ಧತೆ ಸಮಸ್ಯೆ ಎದುರಾಗುತ್ತದೆ. ಈ ಸಮಸ್ಯ ನಿವಾರಣೆಗೆ ಫೈಬರ್ ಸಮೃದ್ಧವಾಗಿರುವ ಆಹಾರ ಸೇವನೆ ಮಾಡುವಂತ ಸಲಹೆ ನೀಡಲಾಗುತ್ತದೆ, ಸಾಕಷ್ಟು ಹಣ್ಣುಗಳು, ತರಕಾರಿಗಳು ಮತ್ತು ಧಾನ್ಯಗಳು, ಬೆಣ್ಣೆಹಣ್ಣು, ಡ್ರೈಫ್ರೂಟ್ಸ್, ಮೀನು, ಮೊಟ್ಟೆ ಸೇವನೆ ಮಾಡುವಂತೆ ಸಲಹೆ ನೀಡಲಾಗುತ್ತದೆ. ಎಲೆಕೋಸು, ಗಡ್ಡೆ ಕೋಸು ಮತ್ತು ಹೂಕೋಸುಗಳಂತಹ ತರಕಾರಿಗಳ ಸೇವನೆಯನ್ನು ನಿಯಂತ್ರಿಸಬೇಕು.

ಹೈಪೋಥೈರಾಯ್ಡಿಸಮ್ಗೆ ಚಿಕಿತ್ಸೆ ಪಡೆಯುತ್ತಿರುವವರು ಈ ತರಕಾರಿ ಸೇವನೆಯನ್ನು ಸಂಪೂರ್ಣವಾಗಿ ನಿಯಂತ್ರಿಸುವಂತೆ ಸಲಹೆ ನೀಡಲಾಗುತ್ತಿದೆ ಎಂದು ತಿಳಿಸಿದ್ದಾರೆ. ರಾಮಯ್ಯ ಸ್ಮಾರಕ ಆಸ್ಪತ್ರೆಯ ಎಂಡೋಕ್ರೈನಾಲಜಿ ವಿಭಾಗದ ಎಚ್‌ಒಡಿ ಮತ್ತು ಸಲಹೆಗಾರರಾದ ಡಾ ಪ್ರಮೀಳಾ ಕಲ್ರಾ ಅವರು ಮಾತನಾಡಿ, ಗರ್ಭಿಣಿಯರು ಸಮತೋಲಿತ ಆಹಾರ ಸೇವನೆ ಮಾಡಬೇಕು. ಇಲ್ಲದಿದ್ದರೆ, ಮಗುವಿನ ಮೆದುಳಿನ ಆರೋಗ್ಯದ ಮೇಲೆ ಪರಿಣಾಮ ಬೀರುತ್ತದೆ ಎಂದು ಹೇಳಿದ್ದಾರೆ.

# ಜಿಲ್ಲಾ ಕೃಷಿಕ ಸಮಾಜದ ಕಾರ್ಯಕಾರಿ ಸಮಿತಿ ರಚನೆ



ಕೊಪ್ಪಳ : ಜಂಟಿ ಕೃಷಿ ನಿರ್ದೇಶಕರ ಕಛೇರಿಯ ಸಭಾಂಗಣದಲ್ಲಿ ಗುರುವಾರ ಕೊಪ್ಪಳ ಜಿಲ್ಲಾ ಕೃಷಿಕ ಸಮಾಜದ 2025-26 ರಿಂದ 2029-30ನೇ ಸಾಲಿನ ವರೆಗೆ 5 ವರ್ಷದ ಅವಧಿಗೆ ಚುನಾವಣೆ ನಡೆಸಲಾಗಿದ್ದು, ಜಿಲ್ಲಾ ಕೃಷಿಕ ಸಮಾಜದ ಕಾರ್ಯಕಾರಿ ಸಮಿತಿ ರಚನೆಯಾಗಿದೆ.

ಚುನಾವಣೆ ಅಧಿಕಾರಿಯಾಗಿ ಕೊಪ್ಪಳ ಜಂಟಿ ಕೃಷಿ ನಿರ್ದೇಶಕರಾದ ರುದ್ರೇಶಪ್ಪ ಟಿ. ಎಸ್ ಅವರು ಚುನಾವಣೆ ಪ್ರಕ್ರಿಯೆ ಕೈಗೊಂಡರು. ಈ ಚುನಾವಣೆಯಲ್ಲಿ ಜಿಲ್ಲಾ ಅಧ್ಯಕ್ಷರಾಗಿ ಕುಷ್ಟಗಿ ತಾಲ್ಲೂಕಿನ ಗುಮಗೇರ ಗ್ರಾಮದ ಶೇಖರಗೌಡ ವಿರುಪಾಕ್ಷಗೌಡ ಮಾಲಿಪಾಟೀಲ, ಜಿಲ್ಲಾ ಉಪಾಧ್ಯಕ್ಷರಾಗಿ ಕನಕಗಿರಿಯ ಸಂಗಪ್ಪ ತಂದೆ ಹಂಪಣ್ಣ, ಪ್ರಧಾನ ಕಾರ್ಯದರ್ಶಿಯಾಗಿ ಕಾರಟಗಿ ತಾಲ್ಲೂಕಿನ ಬೆನ್ನೂರು ಗ್ರಾಮದ ಎಂ.ಚಂದ್ರಶೇಖರಗೌಡ ತಂದೆ ಅಯ್ಯನಗೌಡ, ಖಜಾಂಚಿಯಾಗಿ ಗಂಗಾವತಿ ತಾಲ್ಲೂಕಿನ ಹೇರೂರು ಗ್ರಾಮದ ಅಮರೇಶಪ್ಪ ತಂದೆ ಶಿವಪ್ಪ ಗೋನಾಳ ಹಾಗೂ ರಾಜ್ಯ ಪ್ರತಿನಿಧಿಯಗಿ ಕುಕನೂರ ತಾಲ್ಲೂಕಿನ ತಳಕಲ್ ಗ್ರಾಮದ ಶಿವಪ್ಪ ಗೂಳರಡ್ಡಿ ಮೂಲಿಮನಿ ಇವರು ಅವಿರೋಧವಾಗಿ ಆಯ್ಕೆಯಾಗಿರುತ್ತಾರೆ ಎಂದು ಕೊಪ್ಪಳ ಜಂಟಿ ಕೃಷಿ ನಿರ್ದೇಶಕರ ಕಾರ್ಯಾಲಯದ ಪ್ರಕಟಣೆ ತಿಳಿಸಿದೆ.

# ಕ್ರೀಡಾಕೂಟ ಉದ್ಘಾಟನೆ



ಗೋಕಾಕ: ಸಾಧಕರ ಸಾಧನೆಗಳಿಂದ ಪ್ರೇರಿತರಾಗಿ ತಾವು ಸಾಧಕರಾಗಿರೆಂದು ಏಕಲವ್ಯ ಪ್ರಶಸ್ತಿ ಪುರಸ್ಕೃತ ರಾಜೇಶ ಶಿಂಧೆ ಹೇಳಿದರು.

ಗುರುವಾರದಂದು ನಗರದ ಮಯೂರ ಆಂಗ್ಲ ಮಾಧ್ಯಮ ಶಾಲೆಯ ವಾರ್ಷಿಕೋತ್ಸವ ನಿಮಿತ್ಯ ಹಮ್ಮಿಕೊಂಡ ಕ್ರೀಡಾಕೂಟವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಸಾಧನೆಗೆ ಕಠೀಣ ಪರಿಶ್ರಮ ಅಗತ್ಯ ಎಂದ ಅವರು, ಈಜುವ ಸ್ಪರ್ಧೆಯಲ್ಲಿ 38 ಕಿ.ಮೀ ಇಂಗ್ಲೀಷ ಚಾನೇಲನಲ್ಲಿ ಈಜಿ ದಾಖಲೆಯೊಂದಿಗೆ ಅಂತರಾಷ್ಟ್ರೀಯ ಪ್ರಶಸ್ತಿಯನ್ನು ತಾವು ಪಡೆದಿದ್ದನ್ನು ನೆನಪಿಸಿದರು. ದೇಶದ ಭವಿಷ್ಯ ವಿದ್ಯಾರ್ಥಿಗಳ ಕೈಯಲ್ಲಿದ್ದು ಗುರುಗಳ ಮಾರ್ಗದರ್ಶನದಲ್ಲಿ ತಾವು ಸಾಧಕರಾಗಿ ದೇಶದ ಕೀರ್ತಿಯನ್ನು ಹೆಚ್ಚಿಸಿರಿ ಎಂದು ಕರೆ ನೀಡಿದರು.

ವೇದಿಕೆಯ ಮೇಲೆ ತಹಶೀಲದಾರ ಡಾ.ಮೋಹನ ಭಸ್ಮೆ, ಆಡಳಿತಾಧಿಕಾರಿ ಎಸ್ ಡಿ ಮುರಗೋಡ, ಪ್ರಾಚಾರ್ಯೆ ಸುಚಿತ್ರಾ ಹತಪಾಕಿ ಇದ್ದರು.



**ಗೋಕಾಕ: ಕರ್ನಾಟಕ ರಾಜ್ಯ ಮೋಟಾರು ಸಾರಿಗೆ ಹಾಗೂ ಇತರೆ ಸಂಬಂಧಿತ ಕಾರ್ಮಿಕರ ಸಾಮಾಜಿಕ ಭದ್ರತೆ ಮತ್ತು ಕ್ಷೇಮಾಭಿವೃದ್ಧಿ ಮಂಡಳಿ, ಕಾರ್ಮಿಕ ಇಲಾಖೆ ಸಹಕಾರದೊಂದಿಗೆ ಭಾರತ ಟ್ರಾನ್ಸಪೋರ್ಟ ಅಸೋಸಿಯೇಷನ ಗ್ರುಪ್ ವತಿಯಿಂದ ಡ್ರೈವರ್ ಹಾಗೂ ಇತರೆ ಕಾರ್ಮಿಕರಿಗೆ ಲೇಬರ್ ಕಾರ್ಡ ಹಾಗೂ ಜೀವ ವಿಮಾ ನೊಂದಣಿ ಅಭಿಯಾನಕ್ಕೆ ಕಾರ್ಮಿಕ ಮುಖಂಡ ಅಂಬಿರಾವ ಪಾಟೀಲ ಚಾಲನೆ ನೀಡಿದರು.**

**ಈ ಸಂದರ್ಭದಲ್ಲಿ ನಗರಸಭೆ ಅಧ್ಯಕ್ಷ ಪ್ರಕಾಶ ಮುರಾರಿ, ಬಸವರಾಜ ಆರೇನ್ನವರ, ಭಾರತ ಟ್ರಾನ್ಸಪೋರ್ಟ ಅಸೋಸಿಯೇಷನ ಸಂಸ್ಥಾಪಕ ಅಧ್ಯಕ್ಷ ಜಯಣ್ಣ, ಜಿಲ್ಲಾಧ್ಯಕ್ಷ ನಿಂಗರಾಜ ಹಾದಿಮನಿ ಸೇರಿದಂತೆ ಅನೇಕರು ಇದ್ದರು.**

# ಮೂಡಲಗಿಯಲ್ಲಿ ಸುಗ್ಗಿ ಸಂಭ್ರಮ



ಮೂಡಲಗಿ : ಈಗಿನ ಜನರಲ್ಲಿ ಹಳ್ಳಿ ಜೀವನದ ಶೈಲಿ ಹಾಗೂ ಅವರ ಜೀವನದ ಬಗ್ಗೆ ತಿಳಿದು ಜೀವನವನ್ನು ನಡೆಸಬೇಕು ಹಳೆಯ ವೈಜ್ಞಾನಿಕ ಪದ್ಧತಿಗಳನ್ನು ನಾವು ಅಳವಡಿಸಿಕೊಳ್ಳಬೇಕು ಹಾಗೂ ಹಿಂದಿನ ಕಾಲದ ಜನರು ದುಡಿಯುತ್ತಿದ್ದರು ಅದರಂತೆ ಅವರು ಸುಖ ಜೀವನವನ್ನು ಹೇಗೆ ಹೊಂದಿದ್ದರು ಎಂದು ಅರಿಯಬೇಕು ಎಂದು ಕಬ್ಬೂರದ ಜಾನಪದ ಕಲಾವಿದ ಎಸ್.ಎಮ್.ವ್ಹಿ.ಎಸ್. ಪ್ರಾಥಮಿಕ ಶಾಲೆ ಮುಖ್ಯೋಪಾಧ್ಯಯ ಎಸ್.ಪಿ.ಹೊಸಕೋಟೆ ಹೇಳಿದರು

ಮೂಡಲಗಿ ಶಿಕ್ಷಣ ಸಂಸ್ಥೆಯ ಶ್ರೀ ಶಿವಬೋಧರಂಗ ಪದವಿ ಪೂರ್ವ ಕಾಲೇಜಿನಲ್ಲಿ "ಸುಗ್ಗಿ ಸಂಭ್ರಮ ವಿನೂತನ ಕಾರ್ಯಕ್ರಮ ಮುಖ್ಯ ಅತಿಥಿಯಾಗಿ ಆಗಮಿಸಿ ಮಾತನಾಡಿದರು

ಆಹಾರ ಪದ್ಧತಿಗಳನ್ನು ನಾವು ಈಗ ಅನುಸರಿಸಿಕೊಂಡರೆ ನಮಗೆ ಯಾವುದೇ ರೋಗಗಳು ಬರೋದಿಲ್ಲ ರಾಶಿ ಮಾಡುವಾಗ, ಬಿಸುವಾಗ, ಜೋಗುಳ ಪದ, ಸೋಬಾನ ಪದ, ಗಿಗಿ ಪದ, ಡೊಳ್ಳಿನ ಪದ, ಲಮಾಣಿ ಪದಗಳ ಬಗ್ಗೆ ಎಷ್ಟು ಸುಂದರವಾಗಿ ಹಾಡುತ್ತಾ ಸಂತೋಷದಿಂದ ಸಮಯವನ್ನು ಅನುಭವಿಸುತ್ತಿದ್ದರು ಎಂದು ಈ ಗ್ರಾಮೀಣ ಬದುಕಿನ ಅನಾವರಣ ಸಂಭ್ರಮದಲ್ಲಿ ತಿಳಿಸಿದರು

ಸಂಸ್ಥೆಯ ಅಧ್ಯಕ್ಷ ಹಾಗೂ ಕಾರ್ಯಕ್ರಮದ ಅಧ್ಯಕ್ಷ ವ್ಹಿ.ಆರ್.ಸೋನವಾಲ್ಕರ್ ಸಾಂಸ್ಕೃತೀಕ ಹಬ್ಬಗಳನ್ನು ನಾವು ಆಚರಿಸಿದರೆ ವಿದ್ಯಾರ್ಥಿಗಳಿಗೆ ಹಳ್ಳಿ ಜೀವನದ ಶೈಲಿ ತಿಳಿಯುತ್ತದೆ, ಮತ್ತು ವಿದ್ಯಾರ್ಥಿಗಳಿಗೆ ಮನರಂಜನೆಯೊಂದಿಗೆ ಇವುಗಳ ಬಗ್ಗೆ ನಾವು ತಿಳಿಸಿದಂತಾಗುತ್ತದೆ ಎಂದು ಹೇಳಿದರು.

ಈ ಕಾರ್ಯಕ್ರಮದಲ್ಲಿ ಸಂಸ್ಥೆಯ ನಿರ್ದೇಶಕ ವ್ಹಿ.ಎ.ಸೋನವಾಲ್ಕರ್, ನಿವೃತ್ತ ಪ್ರಾಚಾರ್ಯ ಎಸ್.ಡಿ.ತಳವಾರ, ಕಾಲೇಜಿನ ಪ್ರಾಚಾರ್ಯ ಎಮ್.ಎಸ್.ಪಾಟೀಲ, ಕಾಲೇಜಿನ ಉಪನ್ಯಾಸಕರಾದ ಎಸ್. ಕೆ.ಹಿರೇಮಠ, ಬಿ.ಜಿ.ಗಡಾದ, ಎಲ್.ಆರ್. ಧರ್ಮಟ್ಟಿ,ಡಾ॥ಆರ್.ಪಿ.ಬಿರಾದಾರ, ಎಸ್. ಎಸ್.ಹಿರೇಮಠ,ಎಮ್.ಜಿ.ಹೆಬ್ಬಳ್ಳಿ,ಆರ್. ಎಚ್.ಯಕ್ಕುಂಡಿ, ಎಸ್.ಪಿ.ಸಣ್ಣಮೇತ್ರಿ, ಆರ್. ಎಸ್.ಹಾದಿಮನಿ, ಎಚ್.ಎಮ್.ಹತ್ತರಕಿ,- ಎನ್.ಪಿ.ಗುಳೇದಗುಡ್ಡ, ಹಾಗೂ ಎಸ್.ವಾಯ್. ಕಾನಪ್ಪಗೋಳ ಉಪಸ್ಥಿತರಿದ್ದರು.

******

# ಮಳೆಗಾಲದಲ್ಲಿ ನೌಕಾನೆಲೆಯಿಂದ ನೆರೆ ಉಂಟಾಗದಂತೆ ಕ್ರಮ ಕೈಗೊಳ್ಳಿ : ಜಿಲ್ಲಾಧಿಕಾರಿ ಕೆ.ಲಕ್ಷ್ಮೀಪ್ರಿಯಾ



ಕಾರವಾರ, : ಮಳೆಗಾಲದ ಸಂದರ್ಭದಲ್ಲಿ ನೌಕಾನೆಲೆ ಪ್ರದೇಶದಿಂದ ಕಾರವಾರದ ಚಂಡಿಯಾ, ಅರ್ಗಾ, ಸೇರಿದಂತೆ ಹಲವು ಪ್ರದೇಶಗಳಲ್ಲಿ ನೆರೆ ಪರಿಸ್ಥಿತಿ ಉಂಟಾಗದಂತೆ ಈಗಿನಿಂದಲೇ ಅಗತ್ಯ ಕ್ರಮಗಳನ್ನು ಕೈಗೊಂಡು, ಮಳೆಗಾಲದಲ್ಲಿ ಈ ಭಾಗದ ಜನ ವಸತಿ ಪ್ರದೇಶಗಳಿಗೆ, ಸಾರ್ವಜನಿಕರಿಗೆ ಮತ್ತು ವಾಹನ ಸಂಚಾರಕ್ಕೆ ಯಾವುದೇ ಅಡಚಣೆಯಾಗದಂತೆ ಸರಾಗವಾಗಿ ನೀರು ಹರಿಯಲು ಅಗತ್ಯ ಕ್ರಮಗಳನ್ನು ಕೈಗೊಳ್ಳುವಂತೆ ನೌಕಾನೆಲೆಯ ಅಧಿಕಾರಿಗಳು ಮತ್ತು ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಕೆ.ಲಕ್ಷ್ಮೀಪ್ರಿಯಾ ಸೂಚನೆ ನೀಡಿದರು.

ಅವರು ಇಂದು ಜಿಲ್ಲಾಧಿಕಾರಿ ಕಛೇರಿ ಸಭಾಂಗಣದಲ್ಲಿ ನಡೆದ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಪ್ರತೀ ವರ್ಷದ ಮಳೆಗಾಲದಲ್ಲಿ ನೌಕಾನಲೆ ಪ್ರದೇಶದಲ್ಲಿ ನೆರೆ ಪರಿಸ್ಥಿತಿ ಉಂಟಾಗುತ್ತಿದ್ದು, ಈ ಸಮಸ್ಯೆಗೆ ಈಗಿನಿಂದಲೇ ಮುಂಜಾಗ್ರತಾ ಕ್ರಮಗಳನ್ನು ಕೈಗೊಂಡು, ಅಗತ್ಯ ಡ್ರಜ್ಜಿಂಗ್, ಪೈಪ್ ಅಳವಡಿಕೆ ಸೇರಿದಂತೆ ಅತ್ಯಗತ್ಯವಾದ ಕ್ರಮಗಳನ್ನು ಕೈಗೊಳ್ಳುವಂತೆ ತಿಳಿಸಿದ ಜಿಲ್ಲಾಧಿಕಾರಿಗಳು, ಈ ಬಗ್ಗೆ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಅಧಿಕಾರಿಗಳು, ಸಣ್ಣ ನೀರಾವರಿ ಇಲಾಖೆಯ ಅಧಿಕಾರಿಗಳು, ಸಂಬಂಧಪಟ್ಟ ತಾ.ಪಂ. ಅಧಿಕಾರಿಗಳು ಜಂಟಿಯಾಗಿ ಸ್ಥಳ ಪರಿಶೀಲನೆ ನಡೆಸಿ ಕಾಮಗಾರಿಗಳನ್ನು ಕೈಗೊಳ್ಳುವಂತೆ ತಿಳಿಸಿದರು.

ನೌಕಾನಲೆಯ ಒಳಗೆ ನಡೆಯುತ್ತಿದ್ದ ಸೇತುವೆ ನಿರ್ಮಾಣ ಕಾಮಗಾರಿ ಮುಕ್ತಾಯಗೊಂಡಿದ್ದು, ಪ್ರಸ್ತುತ ರಾಷ್ಟ್ರೀಯ ಹೆದ್ದಾರಿ ಮೂಲಕ ನೌಕಾನೆಲೆ ಒಳಬರುವ ಮಳೆ ನೀರು ಯಾವುದೇ ಅಡೆ ತಡೆಗಳಿಲ್ಲದೇ ಸರಾಗವಾಗಿ ಹರಿದುಹೋಗುವಂತೆ ಮಾಡಲಾಗಿದೆ ಎಂದು ನೌಕಾನೆಲೆ ಅಧಿಕಾರಿಗಳು ಮಾಹಿತಿ ನೀಡಿದರು. ಮುಂದಿನ ಮಳೆಗಾಲದಲ್ಲಿ ಯಾವುದೇ ರೀತಿಯ ಸಮಸ್ಯೆ ಕಂಡು ಬರದಂತೆ ನೋಡಿಕೊಳ್ಳಿ ಎಂದು ಜಿಲ್ಲಾಧಿಕಾರಿಗಳು ಸೂಚಿಸಿದರು.

ಹಳೆಯ ಕಾಳಿ ಸೇತುವೆಯ ಅವಶೇಷಗಳ ತೆರವು ಕಾರ್ಯವನ್ನು ಮಾರ್ಚ್ 15 ರೊಳಗೆ ಸಂಪೂರ್ಣವಾಗಿ ಮುಕ್ತಾಯಗೊಳಿಸುವಂತೆ ಹೆದ್ದಾರಿ ಪ್ರಾಧಿಕಾರದ ಅಧಿಕಾರಿಗಳಿಗೆ ಸೂಚಿಸಿದ ಜಿಲ್ಲಾಧಿಕಾರಿಗಳು, ರಾಷ್ಟ್ರೀಯ ಹೆದ್ದಾರಿ ಬದಿಯಲ್ಲಿ ಒತ್ತುವರಿ ಮಾಡಿಕೊಂಡು ನಿರ್ಮಿಸಿರುವ ಅತಿಕ್ರಮಣ ಕಟ್ಟಡಗಳನ್ನು ಕಾಲಮಿತಿಯಲ್ಲಿ ತೆರವುಗೊಳಿಸುವಂತೆ ಕುಮಟಾ ಉಪ ವಿಭಾಗಾಧಿಕಾರಿಗಳು ಮತ್ತು ಅಂಕೋಲಾ ತಹಸೀಲ್ದಾರ್ ಸೂಚಿಸಿದರು. ರಾಷ್ಟ್ರೀಯ ಹೆದ್ದಾರಿ ವ್ಯಾಪ್ತಿಯಲ್ಲಿ ಜಿ.ಎಸ್.ಐ ವತಿಯಿಂದ ಗುರುತಿಸಲಾಗಿರುವ ಗುಡ್ಡ ಕುಸಿತ ಪ್ರದೇಶಗಳಲ್ಲಿ ಮಳೆಗಾಲಕ್ಕೂ ಮುನ್ನ ಸುರಕ್ಷತಾ ಕ್ರಮಗಳನ್ನು ಕೈಗೊಂಡು , ಆ ಪ್ರದೇಶದಲ್ಲಿ ಗುಡ್ಡ ಕುಸಿತವಾಗುವುದನ್ನು ತಡೆಯುವಂತೆ ಹೆದ್ದಾರಿ ಪ್ರಾಧಿಕಾರದ ಆಧಿಕಾರಿಗಳಿಗೆ ಕಟ್ಟನಿಟ್ಟಿನ ಸೂಚನೆ ನೀಡಿದರು. ಜಿಲ್ಲೆಯ ಕದ್ರಾ ಮತ್ತು ಗೇರಸೊಪ್ಪ ಜಲಾಶಯಗಳಲ್ಲಿ ಮಳೆಗಾಲದ ಸಂದರ್ಭದಲ್ಲಿ ಕೈಗೊಳ್ಳಬೇಕಾದ ಮುಂಜಾಗ್ರತಾ ಕ್ರಮಗಳ ಕುರಿತಂತೆ ಎಸ್.ಓ.ಪಿ ರಚಿಸಿ ಅದರಂತೆ ಕಾರ್ಯನಿರ್ವಹಿಸುವಂತೆ ತಿಳಿಸಿದ ಜಿಲ್ಲಾಧಿಕಾರಿಗಳು, ಕೈಗಾ ಅಣುಸ್ಥಾವರ ಪ್ರದೇಶದಲ್ಲಿ ವಿಪತ್ತು ಸಂದರ್ಭದಲ್ಲಿ ಕೈಗೊಳ್ಳಬೇಕಾದ ಕ್ರಮಗಳ ಬಗ್ಗೆ ಜಿಲ್ಲೆಯ ಆಪದಮಿತ್ರರಿಗೆ ತರಬೇತಿ ಆಯೋಜಿಸುವಂತೆ ತಿಳಿಸಿದರು. ಜಿಲ್ಲೆಯಲ್ಲಿ ಬೇಸಿಗೆಯಲ್ಲಿ ಗ್ರಾಮೀಣ ಮತ್ತು ನಗರ ಪ್ರದೇಶದಲ್ಲಿ ಕುಡಿಯುವ ನೀರಿನ ಸಮಸ್ಯೆ ಕಂಡು ಬರಬಹುದಾದ ಸ್ಥಳಗಳ ಬಗ್ಗೆ ಸಾಕಷ್ಟು ಮುಂಚಿತವಾಗಿ ಗುರುತಿಸಿ ಅಗತ್ಯ ಕ್ರಮಗಳನ್ನು ಕೈಗೊಳ್ಳುವಂತೆ ಹಾಗೂ ಕಾಡಿನಲ್ಲಿ ಬೀಳುವ ಬೆಂಕಿಯನ್ನು ನಿಯಂತ್ರಿಸುವ ಕುರಿತಂತೆ ಎಸ್.ಓ.ಪಿ. ರಚಿಸಿ, ಅಧಿಕಾರಿಗಳನ್ನು ಒಳಗೊಂಡ ಸಮಿತಿಯನ್ನು ರಚಿಸಿ ಕಾರ್ಯನಿರ್ವಹಿಸುವಂತೆ ತಿಳಿಸಿದರು.

ಸಭೆಯಲ್ಲಿ ಜಿ.ಪಂ. ಮುಖ್ಯ ಕಾರ್ಯನಿರ್ವಹಣಾಧಿಕಾರಿ ಈಶ್ವರ ಕಾಂದೂ, ಅಪರ ಜಿಲ್ಲಾಧಿಕಾರಿ ಸಾಜಿದ್ ಮುಲ್ಲಾ, ಉಪ ಅರಣ್ಯ ಸಂರಕ್ಷಣಾಧಿಕಾರಿ ರವಿಶಂಕರ್, ಉಪ ವಿಭಾಗಾಧಿಕಾರಿಳಾದ ಕನಿಷ್ಕ, ಕಲ್ಯಾಣಿ ಕಾಂಬ್ಳೆ, ನೌಕಾನೆಲೆ ಮತ್ತು ಕೈಗಾ ಅಧಿಕಾರಿಗಳು ಹಾಗೂ ಜಿಲ್ಲಾ ಮಟ್ಟದ ಇಲಾಖಾಧಿಕಾರಿಗಳು ಹಾಜರಿದ್ದರು.

# ತೇರದಾಳ ಕಲ್ಮೇಶ್ವರ ವಿದ್ಯಾವರ್ಧಕ ಸಂಘ ಪಠ್ಯೇತರ ಚಟುವಟಿಕೆಗಳಿಂದ ಸಾಮಾನ್ಯ ಜ್ಞಾನ ಹೆಚ್ಚಳ



ತೇರದಾಳ-ಮಕ್ಕಳಿಗೆ ಕೇವಲ ಪಠ್ಯದಲ್ಲಿನ ಪಾಠಗಳನ್ನು ಹೇಳದೆ ಪಠ್ಯೇತರ ಚಟುವಟಿಕೆಗಳನ್ನು ಹಮ್ಮಿಕೊಳ್ಳುವುದು ಸೂಕ್ತ. ಇಂತಹ ಕಾರ್ಯಕ್ರಮಗಳಿಂದ ಮಕ್ಕಳಲ್ಲಿ ಸಾಮಾನ್ಯ ಜ್ಞಾನ ಹೆಚ್ಚಾಗುತ್ತದೆ ಎಂದು ಬೆಳಗಾವಿ ಶೇಗುಣಸಿಯ ಸದ್ಗುರು ಹನಮಂತಪ್ಪ ಮಹಾರಾಜರು ಹೇಳಿದರು.

ಇಲ್ಲಿನ ಕಲ್ಮೇಶ್ವರ ವಿದ್ಯಾವರ್ಧಕ ಸಂಘದ ವಿನಾಯಕ ಪ್ರಾಥಮಿಕ ಹಾಗೂ ಪ್ರೌಢಶಾಲೆಯಲ್ಲಿ ವಿಜ್ಞಾನ ವಸ್ತು ಪ್ರದರ್ಶನ ಹಾಗೂ ಮಕ್ಕಳ ಸಂತೆ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.

ಮಕ್ಕಳಲ್ಲಿ ಪಾಲಕರು ಆಸಕ್ತಿ ಹೆಚ್ಚಿಸುವ ಕೆಲಸ ಮಾಡಿದರೆ ಶಿಕ್ಷಕರು ಕಲಿಕೆಯ ಹಂಬಲ ಹೆಚ್ಚಾಗುವಂತೆ ನೋಡಿಕೊಳ್ಳಬೇಕೆಂದು ಹೇಳಿದರು. ಸ್ಥಳೀಯ ಹಿರೇಮಠದ ಗಂಗಾಧರ ದೇವರು ಮಾತನಾಡಿ ಶಿಕ್ಷಣ ಬದುಕು ಕಲಿಸುವ ಒಂದು ಸೂತ್ರವಾಗಿದೆ. ಯಾವುದೇ ಕ್ಷೇತ್ರ ಇರಲಿ ಸಾಧಿಸಬೇಕೆಂಬ ಛಲ ಹಾಗೂ ಅದನ್ನು ಪಡೆಯಲು ನಿರಂತರ ಪರಿಶ್ರಮ ಅಗತ್ಯವಾಗಿದೆ ಎಂದು ಹೇಳಿದರು. ಸಂಸ್ಥೆ ಅಧ್ಯಕ್ಷ ಎಂ.ಎಸ್. ಗೌಡಪ್ಪನವರ ಅಧ್ಯಕ್ಷತೆ ವಹಿಸಿದ್ದರು. ಮುಖ್ಯಗುರು ಶಂಕರ ತಿಗಣಿ ಪ್ರಾಸ್ತಾವಿಕವಾಗಿ ಮಾತನಾಡಿದರು.

# ಶಹಪೂರ ಗ್ರಾಮದಲ್ಲಿ 24X7 ಕುಡಿಯುವ ನೀರು ಸರಬರಾಜು: ಘೋಷಣೆ



ಕೊಪ್ಪಳ : ಜಲಜೀವನ್ ಮಿಷನ್ ಯೋಜನೆಯಡಿ ಕೊಪ್ಪಳ ಜಿಲ್ಲೆಯ ಬೇವಿನಹಳ್ಳಿ ಗ್ರಾಮ ಪಂಚಾಯತ್ ವ್ಯಾಪ್ತಿಯ ಶಹಪೂರ ಗ್ರಾಮವನ್ನು 24*7 ಕುಡಿಯುವ ನೀರು ಸರಬರಾಜು ಗ್ರಾಮವೆಂದು ಬುಧವಾರ ಘೋಷಣೆ ಮಾಡಲಾಯಿತು.

ಕೊಪ್ಪಳ ಸಂಸದರಾದ ಕೆ.ರಾಜಶೇಖರ್ ಹಿಟ್ನಾಳ ಅವರು ಕಾರ್ಯಕ್ರಮ ಉದ್ಘಾಟಿಸಿ, ಶಹಾಪುರ ಗ್ರಾಮವು ದಿನದ 24ಗಂಟೆ ನೀರು ಸರಬರಾಜು ವ್ಯವಸ್ಥೆಯನ್ನು ಹೊಂದಿದೆ ಎಂದು ಘೋಷಿಸಿದರು. ಬಳಿಕ ಮಾತನಾಡಿ, ಜಿಲ್ಲೆಯಲ್ಲಿ ಸುಮಾರು 700 ಗ್ರಾಮಗಳಲ್ಲಿ ಜೆ.ಜೆ.ಎಂ. ಕಾಮಗಾರಿ ಅನುಷ್ಠಾನಗೊಳಿಸಲಾಗಿದೆ. ಎಲ್ಲಾ ಕಾಮಗಾರಿಗಳು ಸರಿಯಾದ ಕ್ರಮದಲ್ಲಿ ಅನುಷ್ಠಾನವಾಗುತ್ತಿಲ್ಲ ಎಂಬ ಕೂಗುಗಳು ಕೇಳಿ ಬರುತ್ತಿದ್ದವು. ಈ ಸಮಸ್ಯೆಗಳನ್ನು ಹೋಗಲಾಡಿಸಲು ವಿಶೇಷ ಕ್ರಮ ಕೈಗೊಂಡು ಪ್ರತಿ ಗ್ರಾಮದಲ್ಲಿ ಯೋಜನೆಯನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸಲಾಗುತ್ತಿದೆ ಎಂದರು.

ಜಿಲ್ಲೆಯಲ್ಲಿ ಮೊದಲ ಬಾರಿಗೆ ಕೋಳೂರು ಗ್ರಾಮವನ್ನು 24*7 ನೀರು ಸರಬರಾಜು ಗ್ರಾಮ ಎಂದು ಘೋಷಣೆ ಮಾಡಲಾಗಿದೆ. ಇದರ ಭಾಗವಾಗಿ ಶಹಾಪುರನ್ನು ಎರಡನೆಯ ಗ್ರಾಮವಾಗಿ ಘೋಷಿಸಿರುವುದಕ್ಕೆ ಅತ್ಯಂತ ಸಂತೋಷವಾಗುತ್ತಿದೆ. ಎಲ್ಲಾ ಗ್ರಾಮಗಳಲ್ಲಿ ದಿನದ 24ಗಂಟೆ ನೀರು ಸರಬರಾಜು ಮಾಡಬೇಕಾಗಿದ್ದು, ಸಂಬಂಧಿಸಿದ ಅಧಿಕಾರಿಗಳು ಜೆಜೆಎಂ ಕಾಮಗಾರಿಗಳನ್ನು ಗುಣಮಟ್ಟದ ಜೊತೆಗೆ ತ್ವರಿತವಾಗಿ ಪೂರ್ಣಗೊಳಿಸಲು ಮೊದಲ ಆದ್ಯತೆ ನೀಡಬೇಕು. ಈ ಹಿನ್ನೆಲೆಯಲ್ಲಿ ಪ್ರತಿ ವಾರದಲ್ಲಿ ಒಂದು ಗ್ರಾಮವನ್ನು 24*7 ಗ್ರಾಮ ಎಂದು ಘೋಷಣೆ ಮಾಡಲು ಕ್ರಮ ವಹಿಸಬೇಕು. ನೀರು ಮಿತವಾಗಿ ಬಳಸಬೇಕು ಹಾಗೂ ಈ ವ್ಯವಸ್ಥೆಯನ್ನು ನಿರಂತರವಾಗಿ ನಡೆಸಿಕೊಂಡು ಹೋಗುವಂತೆ ಗ್ರಾಮ ಪಂಚಾಯತ್ ಅಧಿಕಾರಿಗಳಿಗೆ ಹಾಗೂ ಸಿಬ್ಬಂದಿಗಳಿಗೆ ಸಂಸದರು ಸೂಚನೆ ನೀಡಿದರು.


ವಿಧಾನ ಪರಿಷತ್ ಸದಸ್ಯರಾದ ಹೇಮಲತಾ ನಾಯಕ ಅವರು ಮಾತನಾಡಿ, 24*7 ನೀರು ಸರಬರಾಜು ಗ್ರಾಮ ಎಂದು ಘೋಷಣೆ ಮಾಡಲಾದ ಶಹಾಪುರ ಗ್ರಾಮದ ಗ್ರಾಮಸ್ಥರು ನೀರು ಪೋಲಾಗದಂತೆ ನೋಡಿಕೊಳ್ಳಬೇಕು. ಮಾನವ ದೈನಂದಿನ ಜೀವನಕ್ಕೆ ನೀರು ಅವಶ್ಯಕವಾಗಿರುವ ಸಂಪನ್ಮೂಲವಾಗಿದ್ದು, ನೀರನ್ನು ಮಿತವಗಿ ಬಳಕೆ ಮಾಡಿಕೊಳ್ಳಬೇಕು. ಪ್ರತಿ ಮನೆಗೆ ಕಡ್ಡಾಯವಾಗಿ ಶೌಚಾಲಯ ನಿರ್ಮಾಣ ಮಾಡಿಕೊಳ್ಳಬೇಕು. ಗ್ರಾಮದ ಸ್ವಚ್ಚತೆಗೂ ಹೆಚ್ಚಿನ ಗಮನ ನೀಡಬೇಕು ಎಂದರು.

ಜಿ.ಪಂ ಉಪ ಕಾರ್ಯದರ್ಶಿ ಮಲ್ಲಿಕಾರ್ಜುನ ತೊದಲಬಾಗಿ ಅವರು ಮಾತನಾಡಿ, ಗ್ರಾಮದ ನೀರು ಸರಬರಾಜು ಕಾರ್ಯಾಚರಣೆ ಮತ್ತು ನಿರ್ವಹಣೆಯನ್ನು ಸ್ವಸಹಾಯ ಸಂಘಗಳ ಬಳಕೆ ಮಾಡಿಕೊಂಡು ನಿರ್ವಹಿಸಬೇಕು. ನೀರಿನ ಕರ ವಸೂಲತಿಯ ಮೇಲೆ ಶೇ.10ರಷ್ಟು ಕಮಿಷನ್ ನೀಡಬೇಕು ಎಂದು ಸಲಹೆ ನೀಡಿದರು.

ಗ್ರಾಮೀಣ ಕುಡಿಯುವ ನೀರು ಸರಬರಾಜು ಮತ್ತು ನೈರ್ಮಲ್ಯ ವಿಭಾಗದ ಕಾರ್ಯಪಾಲಕ ಅಭಿಯಂತರರಾದ ಮಹೇಶ್ ಶಾಸ್ತ್ರಿ ಅವರು ಮಾತನಾಡಿ, ದಿನದ 24 ಗಂಟೆ ನೀರು ಸರಬರಾಜು ಯೋಜನೆಯಿಂದ ಪ್ರತಿ ಮನೆಗೆ ಮೀಟರ್ ಅಳವಡಿಸಲಾಗಿದ್ದು, ದಿನ ನಿತ್ಯ ಪ್ರತಿ ವ್ಯಕ್ತಿಗೆ 55 ಲೀಟರ್ ಶುದ್ಧ ಕುಡಿಯುವ ನೀರು ಪೂರೈಸಲಾಗುವುದು. ನೀರು ಪೂರೈಕೆ ಕಾರ್ಯಾಚರಣೆ ಮತ್ತು ನಿರ್ವಹಣೆಗೆ ಸ್ವಸಹಾಯ ಸಂಘಗಳ ಬಳಕೆ ಮಾಡಿಕೊಳ್ಳಲಾಗುವುದು. ಸುಸ್ಥಿರ ಗ್ರಾಮ ನೀರು ಸರಬರಾಜು ಮತ್ತು ನೈರ್ಮಲ್ಯ ಸಮಿತಿಗಳಿಗೆ ತರಬೇತಿ ನೀಡಿ ಬಲಪಡಿಸಲಾಗಿದೆ ಹಾಗೂ ಪ್ರತಿ ನಲ್ಲಿಯಿಂದ ಒಂದು ನಿಮಿಷಕ್ಕೆ 10 ಲೀಟರ್ ನೀರು ಪೂರೈಸಲಾಗುತ್ತದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಕೊಪ್ಪಳ ತಾಲೂಕಾ ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿ ದುಂಡಪ್ಪ ತುರಾದಿ, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಉಪವಿಭಾಗದ ಸಹಾಯಕ ಕಾರ್ಯಪಾಲಕ ಅಭಿಯಂತರರಾದ ವಿಲಾಸ್‌ರಾವ್ ಬೋಸ್ಲೆ, ಗ್ರಾಮ ಪಂಚಾಯತ ಅಧ್ಯಕ್ಷರಾದ ತಿಪ್ಪವ್ವ ಶಿವಪ್ಪ ನಾಯಕ, ಉಪಾಧ್ಯಕ್ಷರಾದ ಮುರಳಿಧರ ಬಸಿರಾಳ, ಪಿ.ಡಿ.ಓ ಗೀತಾಕುಮಾರಿ ಧುತ್ತರಗಿ, ಡಿಪಿಎಂ ಶರಣು, ಬೆಂಗಳೂರ ಫೀಡ್ ಬ್ಯಾಕ್ ಫೌಂಡೇಶನ್ ರಾಜ್ಯ ಸಂಯೋಜಕ ಡಾ.ನಂದಕುಮಾರ, ಸಿಬ್ಬಂದಿ ಓಂಕಾರ, ರವಿಚಂದ್ರ ಹಾಗೂ ಶಶಿಕುಮಾರ ಸೇರಿದಂತೆ ಗ್ರಾಮ ಸದಸ್ಯರು, ಜಲಜೀವನ್ ಮಿಷನ್ ತಂಡದವರು, ಶಾಲಾ ಮಕ್ಕಳು, ಗ್ರಾಮಸ್ಥರು ಉಪಸ್ಥಿತರಿದ್ದರು.

*******



**ಓಂ ಶ್ರೀ ಮಂಜುನಾಥಾಯ ನಮಃ *ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ವಾತ್ಸಲ್ಯ ಯೋಜನೆಯ ಅಡಿಯಲ್ಲಿ ನಿರಾಶ್ರಿತ ಮಾಶಾಸನ ಸದಸ್ಯರಾದ ಕಂಕಣವಾಡಿ ವಲಯದ ಚಂದ್ರವ್ವ ಡೋಂಬರ ಅಜ್ಜಿಗೆ ಶೌಚಾಲಯ ವ್ಯವಸ್ಥೆ ಮಾಡಿಕೊಟ್ಟ ಉದ್ಘಾಟನೆ ಸಂಧರ್ಭದಲ್ಲಿ ರಾಯಬಾಗ ತಾಲೂಕಿನ ಮಾನ್ಯ ಯೋಜನಾಧಿಕಾರಿಯಾವರಾದ ಸಚಿನ್ ಕುಮಾರ್ ಬಿ ಸರ್ ಅವರು ಕಾರ್ಯಕ್ರಮ ಉದ್ದೇಶಿಸಿ ವಾತ್ಸಲ್ಯ ಕಾರ್ಯಕ್ರಮ ಬಗ್ಗೆ ಅಮ್ಮನವರ ಆಶಯಗಳ ಬಗ್ಗೆ ಯೋಜನೆ ನಡೆದು ಬಂದ ಹಾದಿಯ ಬಗ್ಗೆ ಸ್ಮರಿಸಿಕೊಳ್ಳುತ್ತಾ ಶುಭಹಾರೈಸಿದರು,ಈ ಸಂಧರ್ಭದಲ್ಲಿ ಪಟ್ಟಣ ಪಂಚಾಯತ್ ಅಧ್ಯಕ್ಷರು ಪ್ರಕಾಶ್ ಹುಕ್ಕೇರಿ, ಚಿಕ್ಕೋಡಿ ಜಿಲ್ಲೆಯ ಭಜರಂಗದಳದ ಸಂಯೋಜಕರು ಮಾಂತೇಶ ಹತ್ತರಕಿ, ಶೌರ್ಯ ಘಟಕದವರು ಮಾನಂದ, ಶ್ರೀದೇವಿ, ನವಜೀವನ ಸಮಿತಿವರು ಅರ್ಜುನ್ ತೊಳೆ, ಶಂಕರ್ ನಯಕ್ವಾಡೆ,ಅಜ್ಜಿಗೆ ಶುಭಹಾರೈಸಿದರು,ವಲಯ ಮೇಲ್ವಿಚಾರಕರು ಗಣೇಶ ಬಾಣಪ್ಪನವರ, ಜ್ಞಾನ ವಿಕಾಸ್ ಸಮನ್ವಯಾಧಿಕಾರಿ ಸುರೇಖಾ ಹೆಬ್ಬಳ್ಳಿ,ಸೇವಾಪ್ರತಿನಿಧಿ ಗೌರಮ್ಮ,ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಗೆ ಧನ್ಯವಾದಗಳು ಹೇಳಿದರು.**

# ಜ.27 ರಂದು ತ್ರೈಮಾಸಿಕ ಕೆಡಿಪಿ ಸಭೆ

ಹಾವೇರಿ: ಕಳೆದ ಜನವರಿ 4 ರಂದು ಜರುಗಿದ ವಿವಿಧ ಅಭಿವೃದ್ಧಿ ಕಾರ್ಯಕ್ರಮಗಳ ಪ್ರಗತಿ ಪರಿಶೀಲನೆ ಕುರಿತು ತ್ರೈಮಾಸಿಕ ಕೆಡಿಪಿ ಸಭೆ ಮುಂದುವರೆದ ಭಾಗವಾಗಿ ಎರಡನೇ ಸಭೆ ಜನವರಿ 27 ರಂದು ಬೆಳಿಗ್ಗೆ 10 ಗಂಟೆಗೆ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಇಲಾಖೆ ಹಾಗೂ ಹಾವೇರಿ ಜಿಲ್ಲಾ ಉಸ್ತುವಾರಿ ಸಚಿವರಾದ ಶಿವಾನಂದ ಪಾಟೀಲ ಅವರ ಅಧ್ಯಕ್ಷತೆಯಲ್ಲಿ ಜರುಗಲಿದೆ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಹಾಗೂ ಕೆಡಿಪಿ ತ್ರೈಮಾಸಿಕ ಸಭೆ ಸದಸ್ಯ ಕಾರ್ಯದರ್ಶಿಗಳು ತಿಳಿಸಿದ್ದಾರೆ.

## ಸಂಕ್ರಾಂತಿ ಹಬ್ಬದ ಪ್ರಯುಕ್ತ 144 ಹೆಚ್ಚುವರಿಗೆ ಸಾರಿಗೆ ಸೌಲಭ್ಯ

ಹಾವೇರಿ: ಸಂಕ್ರಾಂತಿ ಹಬ್ಬದ ಪ್ರಯುಕ್ತ ಸಾರ್ವಜನಿಕರ ಅನುಕೂಲಕ್ಕಾಗಿ ವಾ.ಕ.ರ.ಸಾ.ಸಂಸ್ಥೆಯ ವ್ಯಾಪ್ತಿಯ ಹುಬ್ಬಳ್ಳಿ, ಧಾರವಾಡ, ಗದಗ, ಬೆಳಗಾವಿ, ಉತ್ತರ ಕನ್ನಡ, ಹಾವೇರಿ, ಚಿಕ್ಕೋಡಿ ಮತ್ತು ಬಾಗಲಕೋಟೆ ವಿಭಾಗಗಳಿಂದ ಸುಮಾರು 114 ಹೆಚ್ಚುವರಿ ವಿಶೇಷ ಸಾರಿಗೆಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದೆ.

ದಿನಾಂಕ 10-01-2025 ರಂದು ಶುಕ್ರವಾರ ವಾರಾಂತ್ಯ, ದಿನಾಂಕ 11-01-2025 ರಂದು ಎರಡನೇ ಶನಿವಾರ ಹಾಗೂ ದಿನಾಂಕ 2-01-2025 ರಂದು ರವಿವಾರ ಹಾಗೂ ದಿನಾಂಕ 14-01-2025 ರಂದು ಮಂಗಳವಾರ ಸಂಕ್ರಾಂತಿ ಹಬ್ಬವಿರುವದರಿಂದ ಬೆಂಗಳೂರು ಮತ್ತು ಇತರೇ ಪ್ರಮುಖ ಸ್ಥಳಗಳಿಂದ ಹೆಚ್ಚಿನ ಪ್ರಯಾಣಿಕರು ತಮ್ಮ ತಮ್ಮ ಊರುಗಳಿಗೆ ತೆರಳಲು ಹೆಚ್ಚುವರಿ ಸಾರಿಗೆಗಳನ್ನು ಕಾರ್ಯಾಚರಣೆ ಮಾಡಲಾಗುವುದು.

ಬೆಂಗಳೂರಿನಿಂದ ರಾಜ್ಯ ಮತ್ತು ಅಂತರರಾಜ್ಯದ ವಿವಿಧ ಸ್ಥಳಗಳಿಗೆ ತೆರಳಲು ದಿನಾಂಕ 10-01-2025 , ದಿನಾಂಕ 11-1-2025 ಹಾಗೂ ದಿನಾಂಕ 13-01-2025 ರಂದು ಹೆಚ್ಚುವರಿ ವಿಶೇಷ ಸಾರಿಗೆ ಸೌಲಭ್ಯವನ್ನು ಕಲ್ಪಿಸಲಾಗಿದೆ. ಹಬ್ಬ ಮುಗಿದ ಮೇಲೆ ದಿನಾಂಕ 14-01-2025 ಹಾಗೂ ದಿ.15-01-2025 ರಂದು ಮತ್ತು ನಂತರದ ದಿನಗಳಂದು ಪ್ರಮುಖ ಸ್ಥಳಗಳಿಂದ ಜನದಟ್ಟಣೆಗೆ ಅನುಗುಣವಾಗಿ ಹೆಚ್ಚುವರಿ ಸಾರಿಗೆಗಳನ್ನು ಕಾರ್ಯಾಚರಣೆಗೊಳಿಸಲಾಗುವುದು.

ಈ ವಿಶೇಷ ಸಾರಿಗೆಗಳ ಸದುಪಯೋಗ ಪಡೆದುಕೊಳ್ಳುವಂತೆ ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ಪ್ರಕಟಣೆಯಲ್ಲಿ ತಿಳಿಸಿದೆ.

## ವಿಶೇಷ ಪ್ರೋತ್ಸಾಹಧನ ಸೌಲಭ್ಯಕ್ಕೆ ಅರ್ಜಿ ಸಲ್ಲಿಕೆಗೆ ಅವಧಿ ವಿಸ್ತರಣೆ

ಹಾವೇರಿ: ಬಿ.ಎಡ್ ಕೋರ್ಸ್ ವ್ಯಾಸಂಗ ಮಾಡುತ್ತಿರುವ ಅಲ್ಪಸಂಖ್ಯಾತರ ವಿದ್ಯಾರ್ಥಿಗಳು ವಿಶೇಷ ಪ್ರೋತ್ಸಾಹಧನ ಸೌಲಭ್ಯಕ್ಕೆ ಅರ್ಜಿ ಸಲ್ಲಿಸಲು ಜನವರಿ 20ರವರೆಗೆ ಅವಧಿ ವಿಸ್ತರಿಸಲಾಗಿದೆ.

ವಿದ್ಯಾರ್ಥಿಗಳು ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಬೌದ್ಧ, ಸಿಖ್ಖ್ ಮತ್ತು ಪಾರ್ಸಿ ಸಮುದಾಯಕ್ಕೆ ಸೇರಿಸಬೇಕು. ಅರ್ಹ ಅಲ್ಪಸಂಖ್ಯಾತ ವಿದ್ಯಾರ್ಥಿಗಳು ಸೇವಾಸಿಂಧು ವೆಬ್‌ಸೈಟ್ https://sevasindhu. karnataka.gov.in ಮೂಲಕ ದಿನಾಂಕ 20-01-2025ರೊಳಗಾಗಿ ಅರ್ಜಿ ಸಲ್ಲಿಸಬೇಕು ಎಂದು ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ

# ಉಚಿತ ಪ್ಲಾಸ್ಟಿಕ ಸರ್ಜರಿ ಶಿಬಿರ

ಬೆಳಗಾವಿ : ಅಮೇರಿಕದ ದಿವಂಗತ ಶರದಕುಮಾರ ದೀಕ್ಷಿತ ಅವರ ಸ್ಮರಣಾರ್ಥ ಇದೇ ಜನೇವರಿ 17 ಮತ್ತು 18 ರಂದು ಬಸವನ ಕುಡಚಿಂ-ಯ ಭರತೇಶ ಹೋಮಿಯೋಪೆತಿ ವೈದ್ಯಕೀಯ ಮಹಾವಿದ್ಯಾಲಯದಲ್ಲಿ ಉಚಿತ ಪ್ಲಾಸ್ಟಿಕ ಸರ್ಜರಿ ಶಿಬಿರವನ್ನು ಹಮಿಕೊಳ್ಳಲಾಗಿದೆ.

ಈ ಶಿಬಿರವು ಭರತೇಶ ಶಿಕ್ಷಣ ಸಂಸ್ಥೆಯ ಆಶ್ರಯದಲ್ಲಿ ಹಾಗೂ ಭಾರತೀಯ ಜೈನ ಸಂಘಟನೆಯ ಸಹಯೋದಲ್ಲಿ ನಡೆಯಲಿದ್ದು, ಈ ಶಿಬಿರದಲ್ಲಿ ಅಮೇರಿಕದ ಡಾ. ಲ್ಯಾರಿ ವೈನಸ್ಟೈನ ಖ್ಯಾತ ಪ್ಲಾಸ್ಟಿಕ ಸರ್ಜನ ಅವರು ಶಸ್ತ್ರಚಿಕಿತ್ಸೆ ನಡೆಸಲಿದ್ದಾರೆ.

ಈ ಶಿಬಿರದಲ್ಲಿ ಸಿಳು ತುಟಿ, ಮುಖದ ಮೇಲಿನ ಗುರುತುಗಳು, ಬಾಹ್ಯ ಕಿವಿ ವಿರೂಪತೆ, ನರಗಳ ಮೇಲೆ ಶಸ್ತ್ರಚಿಕಿತ್ಸೆ ನಡೆಸಲಾಗುವುದು.

ಮೊದಲು 400 ನೋಂದಾಯಿತ ರೋಗಿಗಳನ್ನು ಪರೀಕ್ಷಿಸಿ ಅಗತ್ಯ ಶಸ್ತ್ರ ಚಿಕಿತ್ಸೆ ಮಾಡಲಾಗುವುದು.

ಡಾ.ಅಮೇಯ ಜಠಾರ,9886621394, ಡಾ.ಸಾಗರ ಪಾಟೀಲ 8050424354 ಇವರನ್ನು ಸಂಪರ್ಕಿಸಿ ಈ ಶಿಬಿರದಲ್ಲಿ ಹೆಸರು ನೋಂದಾಯಿಸಬಹುದಾಗಿದೆ ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

*******

## ಇಂದು ಕೃಷಿ ಮಹಾವಿಶ್ವವಿದ್ಯಾಲಯದಲ್ಲಿ "ಕೃಷಿ ಮೇಳ"

ವಿಜಯಪುರ : ನಗರದ ಹೊರವಲಯ ಹಿಟ್ನಳ್ಳಿ ಫಾರ್ಮನಲ್ಲಿರುವ ಕೃಷಿ ಮಹಾವಿಶ್ವವಿದ್ಯಾಲಯದಲ್ಲಿ ಜ.11 ರಿಂದ 13ರ ವರೆಗೆ ಕೃಷಿ ಮೇಳವನ್ನು ಹಮ್ಮಿಕೊಳ್ಳಲಾಗಿದೆ. 2024-25ನೇ ಈ ಕೃಷಿ ಮೇಳದ ಘೋಷವಾಕ್ಯ "ಆಹಾರ ಮತ್ತು ಪೌಷ್ಠಿಕ ಭದ್ರತೆಗಾಗಿ ಸುಸ್ಥಿರ ಕೃಷಿ" ಎಂಬುದಾಗಿದೆ.

ರಾಜ್ಯ ಸರ್ಕಾರದ ಕೃಷಿ ಸಚಿವ ಹಾಗೂ ಧಾರವಾಡ ಕೃಷಿ ವಿಶ್ವವಿದ್ಯಾಲಯದ ಸಹ ಕುಲಾಧಿಪತಿ ಎನ್.ಚಲುವರಾಯಸ್ವಾಮಿ ಕಾರ್ಯಕ್ರಮದ ಉದ್ಘಾಟನೆಯನ್ನು ಮಾಡಲಿದ್ದಾರೆ. ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಂ.ಬಿ.ಪಾಟೀಲ ಕೃಷಿ ವಸ್ತು ಪ್ರದರ್ಶನದ ಉದ್ಘಾಟನೆ ಮಾಡಲಿದ್ದಾರೆ. ನಾಗಠಾಣ ಮತಕ್ಷೇತ್ರದ ಶಾಸಕ ವಿಠ್ಠಲ ಧೋಂಡಿಬಾ ಕಟಕಧೋಂಡ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ. ದೆಹಲಿ ವಿಶೇಷ ಪ್ರತಿನಿಧಿ ಪ್ರಕಾಶ ಹುಕ್ಕೇರಿ, ವಿಧಾನಸಭೆ ಶಾಸಕ ಅಪ್ಪಾಜಿ ಸಿ ಎಸ್.ನಾಡಗೌಡ, ಲೋಕಸಭಾ ಸಂಸದ ರಮೇಶ ಜಿಗಜಿಣಗಿ, ರಾಜ್ಯಸಭೆ ಸಂಸದೆ ಸುಧಾ ಮೂರ್ತಿ, ವಿಧಾನಸಭೆ ಶಾಸಕ ಯಶವಂತರಾಯಗೌಡ ಪಾಟೀಲ, ವಿಧಾನಸಭೆ ಶಾಸಕ ಬಸವಗೌಡ ಯತ್ನಾಳ, ಬಸನಗೌಡ ಪಾಟೀಲ, ಅಶೋಕ ಮಲ್ಲಪ್ಪ ಮನಗೂಳಿ, ಜಿ.ಎಸ್.ಪಾಟೀಲ, ವಿಧಾನ ಪರಿಷತ್ ಸದಸ್ಯ ಹಣಮಂತ ನಿರಾಣಿ, ಸುನೀಲಗೌಡ ಪಾಟೀಲ, ಪಿ.ಎಚ್.ಪೂಜಾರಿ, ಕೇಶವ ಪ್ರಸಾದ ಎಸ್, ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

# ಅರ್ಜಿ ಆಹ್ವಾನ

ವಿಜಯಪುರ :ಡೆಹಾರಾಡುನ್‌ನ ರಾಷ್ಟ್ರೀಯ ಇಂಡಿಯನ್ ಮಿಲಿಟರಿ ಕಾಲೇಜ್ ನಲ್ಲಿ 8ನೇ ತರಗತಿ ಪ್ರವೇಶಕ್ಕೆ ಕರ್ನಾಟಕ ಬಾಲಕ ಹಾಗೂ ಬಾಲಕಿಯರಿಂದ ಪ್ರವೇಶ ಪರೀಕ್ಷೆಗೆ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತರು www.rimc.gov.in ನಲ್ಲಿ ಅರ್ಜಿ ನಮೂನೆಯನ್ನು ಪಡೆದು ಆನ್ ಲೈನ್‌ನಲ್ಲೇ ಶುಲ್ಕ ಪಾವತಿ ಮಾಡಬೇಕು. ಭರ್ತಿ ಮಾಡಿದ ನಿಗದಿತ ಅರ್ಜಿ ನಮೂನೆಯ ಎರಡು ಪ್ರತಿಗಳೊಂದಿಗೆ ಜನ್ಮ ಪ್ರಮಾಣ ಪತ್ರ, 5 ಪಾಸ್‌ಪೋರ್ಟ್ ಸೈಜ್ ಪೋಟೋ, ಪರೀಕ್ಷಾ ಪ್ರವೇಶ ಪತ್ರ ನಮೂನೆ, ಶಾಲಾ ಧೃಡೀಕರಣ ಪತ್ರ, ಆಧಾರ್ ಕಾರ್ಡ್ ಪ್ರತಿ, ಮೂಲಸ್ಥಾನ ಧೃಡೀಕರಣ ಪತ್ರಗಳೊಂದಿಗೆ ನಿರ್ದೇಶಕರು ಸೈನಿಕ ಕಲ್ಯಾಣ ಮತ್ತು ಮುನರ್ವಸತಿ ಇಲಾಖೆ, ಫೀಲ್ಡ್ ಮಾರ್ಷಲ್ ಕೆ.ಎಮ್. ಕರ್ಯಪ್ಪ ಭವನ ನಂ.58 ಫೀಲ್ಡ್ ಮಾರ್ಷಲ್ ಕೆ ಎಮ್ ಕಾರ್ಯಪ್ಪ ರಸ್ತೆ, ಬೆಂಗಳೂರು-25 ಗೆ ಸಲ್ಲಿಸಬೇಕು. ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ ಮಾರ್ಚ್ 31 2025 ಆಗಿದೆ.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆಯ ಕಾರ್ಯಾಲಯಕ್ಕೆ ಹಾಗೂ ದೂರವಾಣಿ ಸಂಖ್ಯೆ 080-25589459ಗೆ ಸಂಪರ್ಕಿಸಬಹುದು ಎಂದು ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆಯ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜ.17ಕ್ಕೆ ಮಾಜಿ ಸೈನಿಕರಿಗೆ ಉದ್ಯೋಗ ಮೇಳ

ವಿಜಯಪುರ: ಡೈರೆಕ್ಟರ್ ಜೇನರಲ್ ರಿಸೆಟಲ್ಮೆಂಟ್, ಮಾಜಿ ಸೈನಿಕರ ವೇಲ್ಫರ್ ಇಲಾಖೆ ವತಿಯಿಂದ ಮಾಜಿ ಸೈನಿಕರಿಗಾಗಿ ಗೋವಾದ ವಾಸ್ಕೋದಲ್ಲಿನ ಜಿಎನ್‌ಎ ಮೈದಾನದಲ್ಲಿ ಜ.17ರಂದು "ಉದ್ಯೋಗ ಮೇಳ" ಹಮ್ಮಿಕೊಳ್ಳಲಾಗಿದೆ.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಸೈನಿಕ ಕಲ್ಯಾಣ ಮತು ಪುನರ್ವಸತಿ ಇಲಾಖೆಯ ಉಪ ನಿರ್ದೇಶಕರನ್ನು ಹಾಗೂ ದೂ.ಸಂ: 08352-250913ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

## ರಾಜ್ಯ ಪ್ರಶಸ್ತಿಗೆ ಶಿಕ್ಷಕ ಸಂತೋಷ ಬಂಡೆ ಆಯ್ಕೆ



ಇಂಡಿ: ಬೆಂಗಳೂರಿನ ಶಿಕ್ಷಣ ಜ್ಞಾನ ಮಾಸಪತ್ರಿಕೆಯ 22ನೇ ವಾರ್ಷಿಕೋತ್ಸವದ ನಿಮಿತ್ತ 2024-25 ನೇ ಸಾಲಿನಲ್ಲಿ ವಿವಿಧ ಕ್ಷೇತ್ರಗಳಲ್ಲಿ ಸಾಧನಗೈದ ಸಾಧಕರಿಗೆ ಕೊಡಮಾಡುವ 'ರಾಜ್ಯ ಮಟ್ಟದ ಬಹುಮುಖ ಶಿಕ್ಷಕ ಪ್ರತಿಭೆ ರತ್ನ' ಪ್ರಶಸ್ತಿಗೆ ತಾಲೂಕಿನ ಹಿರೇರೂಗಿ ಗ್ರಾಮದ ಯುಬಿ-ಎಸ್ ಶಾಲೆಯ ಇಂಗ್ಲೀಷ್ ಶಿಕ್ಷಕ ಸಂತೋಷ ಬಂಡೆ ಅವರು ಆಯ್ಕೆಯಾಗಿದ್ದಾರೆ ಎಂದು ಸಂಪಾದಕ ಎಸ್ ವ್ಹಿ ನಾಗರಾಜ್ ತಿಳಿಸಿದ್ದಾರೆ.

ಶಿಕ್ಷಕ ಸಂತೋಷ ಬಂಡೆ ಅವರ ಶೈಕ್ಷಣಿಕ, ಸಾಹಿತ್ಯಿಕ, ಸಾಮಾಜಿಕ, ಸಾಂಸ್ಕೃತಿಕ, ಧಾರ್ಮಿಕ ಹಾಗೂ ಅನೇಕ ವಿಭಾಗಗಳಲ್ಲಿ ಮಾಡಿದ ಸಾಧನೆಯನ್ನು ಪರಿಗಣಿಸಿ ಈ ಪ್ರಶಸ್ತಿಗೆ ಆಯ್ಕೆ ಮಾಡಲಾಗಿದ್ದು, ಕರ್ನಾಟಕ ಉಚ್ಚ ನ್ಯಾಯಾಲಯದ ವಿಶ್ರಾಂತ ನ್ಯಾಯಮೂರ್ತಿ ಅರಳಿ ನಾಗರಾಜ ಸೇ-ರಿದಂತೆ ಅನೇಕ ಗಣ್ಯರು ಬೀಳಗಿಯಲ್ಲಿ ಜರುಗುವ 'ರಾಜ್ಯ ಮಟ್ಟದ ಶೈಕ್ಷಣಿಕ ಸಮಾವೇಶ'ದಲ್ಲಿ ಪ್ರಶಸ್ತಿ ಪ್ರದಾನ ಮಾಡುವರು ಎಂದು ಗೌರವ ಸಂಪಾದಕ ಡಾ. ಎಚ್ ರಾಮಚಂದ್ರಪ್ಪ ತಿಳಿಸಿದ್ದಾರೆ.

# ಅರ್ಜಿ ಆಹ್ವಾನ

ಗದಗ : 2024-25ನೇ ಸಾಲಿನ ಶೇ5% ಯೋಜನೆಯ ಅಂಗವಿಕಲ ವಿಕಲಚೇತನ ಫಲಾನುಭವಿಗಳಿಗೆ ಎಸ್.ಎಫ್.ಸಿ ಮತ್ತು ನಗರಸಭೆ ನಿಧಿ ಅನುದಾನದಡಿ ಲ್ಯಾಪಟಾಪ್ ಖರಿದಿಸಲು ಸಹಾಯಧನಕ್ಕಾಗಿ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿ ಸಲ್ಲಿಸಲು ಕೊನೆಯ ದಿನ ಜನೆವರಿ 27 ಆಗಿದ್ದು ಫಲಾನುಭವಿಗಳು ಅರ್ಜಿಯನ್ನು ಗದಗ ಬೆಟಗೇರಿ ನಗರಸಭೆ ಕಾರ್ಯಾಲಯಕ್ಕೆ ಸಲ್ಲಿಸಬೇಕು. ಈಗಾಗಲೇ ಸೌಲಭ್ಯ ಪಡೆದಂತಹ ಫಲಾನುಭವಿಗಳು ಅರ್ಹರಿರುವುದಿಲ್ಲ. ಹೆಚ್ಚಿನ ಮಾಹಿತಿಗಾಗಿ ಗದಗ ಬೆಟಗೇರಿ ನಗರದ ನಗರಸಭೆ ಕಾರ್ಯಾಲಯವನ್ನು ಸಂಪರ್ಕಿಸಬಹುದಾಗಿದೆ.

## ಎಸ್‌ಎಸ್‌ಎಲ್‌ಸಿ ಫಲಿತಾಂಶದಲ್ಲಿ ಉತ್ತಮ ಅಂಕ ಗಳಿಸುವಲ್ಲಿ ಶಿಕ್ಷಕರ ಪಾತ್ರ ಮುಖ್ಯ : ಸಂಗಮೇಶ ಬಬಲೇಶ್ವರ



ವಿಜಯಪುರ : ಎಸ್‌ಎಸ್-ಎಲ್‌ಸಿ ಫಲಿತಾಂಶದಲ್ಲಿ ಉತ್ತಮ ಅಂಕ ಗಳಿಸುವಲ್ಲಿ ಶಿಕ್ಷಕರ ಪಾತ್ರ ಮುಖ್ಯವಾಗಿರುತ್ತದೆ ಎಂದು ಧಾರವಾಡದ ಕರ್ನಾಟಕ ಬಾಲವಿಕಾಸ ಅಕಾಡೆಮಿಯ ಅಧ್ಯಕ್ಷರಾದ ಸಂಗಮೇಶ ಬಬಲೇಶ್ವರ ಹೇಳಿದರು.

ರಾಜ್ಯ ಬಾಲವಿಕಾಸ ಅಕಾಡೆಮಿ, ಧಾರವಾಡ, ಜಿಲ್ಲಾಪಂಚಾಯತ್ ಹಾಗೂ ಶಾಲಾ ಶಿಕ್ಷಣ ಇಲಾಖೆ, ಕ್ಷೇತ್ರ ಶಿಕ್ಷಣಾಧಿಕಾರಿಗಳ ಸಂಂ-ಮುಕ್ತಾಶ್ರಯದಲ್ಲಿ ನಗರದ ಶಿವಶರಣ ಶ್ರೀ ಹೇಮರಡ್ಡಿ ಮಲ್ಲಮ್ಮ ಮಂಗಲ ಕಾರ್ಯಾಲಯದಲ್ಲಿ ಬುಧವಾರದಂದು ಆಯೋಜಿಸಿದ ಎಸ್.ಎಸ್.ಎಲ್.ಸಿ ಮಾರ್ಗದರ್ಶಿ ಸಾಹಿತ್ಯ ಮುಸ್ತಕ ವಿತರಣಾ ಸಮಾರಂಭ ಹಾಗೂ ಜಿಲ್ಲಾ ಮಟ್ಟದ ಎಸ್.ಎಸ್.ಎಲ್.ಸಿ ಫಲಿತಾಂಶ ಸುಧಾರಣಾ ಕಾರ್ಯಾಗಾರ ಉದ್ಘಾಟಿಸಿ ಮಾತನಾಡಿದ ಅವರು ಬಾಲ ಮಂದಿರದಲ್ಲಿರುವ ಮಕ್ಕಳು ಬೀದಿ ಬದಿಯಲ್ಲಿ ಚಿಂದಿ ಆಯುವ, ಬಡ ಕೂಲಿಕಾರ್ಮಿಕರ ಮಕ್ಕಳು ಇಂತಹ ಮಕ್ಕಳ ಶಿಕ್ಷಣಕ್ಕಾಗಿ ಶಿಕ್ಷಕರು ಶ್ರಮಿಸಬೇಕು. ಈ ನಿಟ್ಟಿನಲ್ಲಿ 4 ಜಿಲ್ಲೆಗಳಲ್ಲಿ ಮಾರ್ಗದರ್ಶಿ ಸಾಹಿತ್ಯ ಮುಸ್ತಕಗಳನ್ನು ವಿತರಿಸಲಾಗುವುದು ಎಂದರು ಅವರು ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ ಜಿಲ್ಲಾಧಿಕಾರಿ ಟಿ.ಭೂಬಾಲನ್ ಮಾತನಾಡಿ ವಿದ್ಯಾರ್ಥಿಗಳು ಉತ್ತಮ ಅಂಕ ಗಳಿಸುವ ನಿಟ್ಟಿನಲ್ಲಿ ಅವ-ರಿಗೆ ಸರಿಯಾದ ಮಾರ್ಗದರ್ಶನ, ಪರಿಪೂರ್ಣ ಜ್ಞಾನ ನೀಡುವ ಉದ್ದೇಶದಿಂದ ರಚಿಸಲಾಗಿರುವ ಮಾರ್ಗದರ್ಶಿ ಸಾಹಿತ್ಯ ಮುಸ್ತಕವನ್ನು ಶಿಕ್ಷಕರು ಬಳಿಸಿಕೊಳ್ಳಬೇಕೆಂದು ತಿಳಿಸಿದರು. ವಿದ್ಯಾಭ್ಯಾಸದ ಮೈಲಿಗಲಾಗಿರುವ ಎಸ್.ಎಸ್. ಎಲ್.ಸಿಯಲ್ಲಿ ಉತ್ತಮ ಪ್ರಗತಿ ಸಾಧಿಸಿದರೆ ಮುಂದಿನ ವಿದ್ಯಾಭ್ಯಾಸದ ಪಯಣ ಸುಗಮವಾಗಿರುತ್ತದೆ.

ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಿಷಿ ಆನಂದ ಮಾತನಾಡಿ ಅಭ್ಯಾಸ ಹಾಗೂ ಪುನರಮನನವು ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಉತ್ತಮ ಅಂಕ ಗಳಿಸಲು ಮುಖ್ಯ ಪಾತ್ರವಾಗಿರುತ್ತದೆ.

ಈ ಸಲ ಎಸ್.ಎಸ್.ಎಲ್.ಸಿ ಉತ್ತಮ ಫಲಿತಾಂಶ ಗಳಿಸಲು ಪೂರ್ವಭಾವಿ ಪರೀಕ್ಷೆಯನ್ನು ಮುಖ್ಯ ಪರೀಕ್ಷೆ ಮಾದರಿಯಲ್ಲಿಯೇ ಮಾಡಬೇಕು. ಕ್ಯಾಮರಾ, ಅಂತರಜಾಲ ವ್ಯವಸ್ಥೆ, ಯುಪಿಎಸ್ ವ್ಯವಸ್ಥೆ ಮಾಡಬೇಕು. ಅನಿಮಿಯಾ ಮುಕ್ತ ವಿಜಯಪುರ ಅಭಿಯಾನದಡಿ ವಿದ್ಯಾರ್ಥಿಗಳಿಗೆ ಈಂಟುಟಿ ಂಬಿಜ, ಕಬ್ಬಿಣಾಂಶಯುಕ್ತ ಟ್ಯಾಬ್ಲೆಟ್‌ಗಳನ್ನು ಕೋಡಬೇಕು. 20 ಅಂಶಗಳ ಕಾರ್ಯಕ್ರಮದ ಅನಿಷ್ಠಾನಕ್ಕಾಗಿ ಶಿಕ್ಷಕರ-ಪೋಷಕರ ಸಭೆ ನಡೆಸಬೇಕು ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ನಗರದ ಬಿಇಓ ಬಸವರಾಜ ತಳವಾರ, ಚಾಣಕ್ಯ ಕ-ರಿಯರ್ ಅಕಾಡೆಮಿ ಅಧ್ಯಕ್ಷ ಎನ್. ಎಂ.ಬಿರಾದಾರ, ಎಕ್ಸಲಂಟ್ ಶಿಕ್ಷಣ ಸಂಸ್ಥೆಯ ಸಂಸ್ಥಾಪಕ ಅಧ್ಯಕ್ಷರಾದ ಬಸವರಾಜ ಕೌಲಗಿ, ಡಿಡಿಪಿಐ ಟಿ. ಎಸ್.ಕೋಲಾರ(ಆಡಳಿತ), ಡಿಡಿಪಿಐ ಉಮಾದೇವಿ ಸೊನ್ನದ, ಬಿಇಓಗಳಾದ ಸುಜಾತಾ ಹುನೂರ, ಪ್ರಮೋದಿನಿ ಬಳೋಲ ಮಟ್ಟಿ, ಶ್ರೀ ಆಲಗೂರ, ಎಂ.ಬಿ.ಯಡ್ರಾಮಿ, ಬಸವರಾಜ ಸಾವಳಗಿ, ಶಿಕ್ಷಣಾಧಿಕಾರಿ ಅಶೋಕ ಲಿಮಕರ, ಎಲ್.ಎಸ್.ಬಿರಾದಾರ ಹಾಗೂ ಇತರರು ಉಪಸ್ಥಿತರಿದ್ದರು.

### ಕುತುಹಲಕ್ಕೆ ಕಾರಣವಾದ ದಿ.ತಾಳಿಕೋಟಿ ಸಹಕಾರಿ ಬ್ಯಾಂಕ್ ನಿರ್ದೇಶಕರ ಚುನಾವಣೆ

## ಹೊಸ ಮುಖಗಳ ನಾಮಪತ್ರ ಸಲ್ಲಿಕೆಯ ಭರಾಟೆ



ತಾಳಿಕೋಟೆ, ಪಟ್ಟಣದ ದಿ.ತಾಳಿಕೋಟಿ ಸಹಕಾರಿ ಬ್ಯಾಂಕ್ ನಿ.ದ 13 ಜನ ನಿರ್ದೇಶಕ ಮಂಡಳಿಯ ಆಯ್ಕೆ ಕುರಿತು ಪ್ರಾರಂಭಗೊಂಡಿರುವ ಚುನಾವಣೆಯಲ್ಲಿ ಈ ಭಾರಿ ಹೊಸಮುಖಗಳ ನಾಮ ಪತ್ರ ಸಲ್ಲಿಕೆಯ ಭರಾಟೆಯು ಜೋರಾಗಿ ನಡೆದಿದ್ದು ಇಂದು ಗುರುವಾರರಂದು ಒಂದೇ ದಿನ ಹೊಸ ಫೇನಲ್ ರಚಿಸುವ ಮೂಲಕ ಆಗಮಿಸಿದ 13 ಜನರು ನಾಮಪತ್ರ ಸಲ್ಲಿಕೆ ಮಾಡಿದ್ದಾರೆ.

13 ಜನ ನಿರ್ದೇಶಕ ಮಂಡಳಿ ಆಯ್ಕೆ ಕುರಿತು ನಡೆಯುತ್ತಿರುವ ಚುನಾವಣೆಯಲ್ಲಿ ಸಾಮಾನ್ಯ ಕ್ಷೇತ್ರದಿಂದ 7 ಜನ, ಪರಿಶೀಷ್ಠ ಜಾತಿ ಮೀಸಲು ಕ್ಷೇತ್ರದಿಂದ 1, ಪರಿಶಿಷ್ಠ ಪಂಗಡ ಮೀಸಲು ಕ್ಷೇತ್ರದಿಂದ 1, ಹಿಂದೂಳಿದ ವರ್ಗ ಪ್ರವರ್ಗ(ಎ) ಮೀಸಲು ಕ್ಷೇತ್ರದಿಂದ 1, ಹಿಂದೂಳಿದ ವರ್ಗ ಪ್ರವರ್ಗ (ಬಿ) 1, ಮಹಿಳಾ ಮೀಸಲು ಕ್ಷೇತ್ರದಿಂದ 2, ಜನರು ಆಯ್ಕೆಗೊಳ್ಳಬೇಕಿದೆ.

ಗುರುವಾರರಂದು ಹೊಸ ಫೇನಲ್ ರಚಿಸಿಕೊಂಡು ಎಪಿಎಂಸಿ ಸಭಾ ಭವನದಿಂದ ನೂರಾರು ಬೆಂಬಲಿಗರೊಂದಿಗೆ ಬ್ಯಾಂಕಿಗೆ ಆಗಮಿಸಿ ನಾಮಪತ್ರ ಸಲ್ಲಿಸಿಕೆಯಲ್ಲಿ ಸಾಮಾನ್ಯ ಕ್ಷೇತ್ರದಿಂದ ಚನಬಸಪ್ಪಗೌಡ ಚೌಧರಿ(ಮುತ್ತು ನೀರಲಗಿ), ಬಸನಗೌಡ ಮಲ್ಲನಗೌಡ ಪಾಟೀಲ, ಮಹಾದೇವಪ್ಪ ಬಸಪ್ಪ ಕುಂಭಾರ, ಪವಡೆಪ್ಪ ಬಸಪ್ಪ ಯಾಳವಾರ, ಮಲ್ಕಾಜಪ್ಪ ಶರಣಪ್ಪ ನಾಗರಾಳ, ಮಯೂರ ಮಲ್ಲನಗೌಡ ಪಾಟೀಲ, ಪ್ರಲ್ಹಾದಸಿಂಗ್ ವಿಠ್ಠಲಸಿಂಗ್ ಹಜೇರಿ, ಹಿಂದೂಳಿದ ವರ್ಗ (ಅ) ಮೀಸಲು ಕ್ಷೇತ್ರದಿಂದ ಘನಶಾಮ ಮಾರುತಿ ಚವ್ಹಾಣ, ಮಹಿಳಾ ಮೀಸಲು ಕ್ಷೇತ್ರದಿಂದ ಶ್ರೀಮತಿ ಸುಮಂಗಲಾ ಈರಪ್ಪ ಕಲಬುರ್ಗಿ, ಶ್ರೀಮತಿ ಸಿದ್ದಮ್ಮ ನಿಂಗಪ್ಪ ಬಂದಾಳ, ಹಿಂದೂಳಿದ ವರ್ಗ(ಬ) ಕ್ಷೇತ್ರದಿಂದ ಅಶೋಕ ಗುರುಸಿದ್ದಪ್ಪ ಬಳಗಾನೂರ, ಪರಿಶಿಷ್ಠ ಜಾತಿ ಮೀಸಲು ಕ್ಷೇತ್ರದಿಂದ ದತ್ತು ಮಂಗಲಪ್ಪ ರಾಠೋಡ, ಪರಶಿಷ್ಠ ಪಂಗಡ ಮೀಸಲು ಕ್ಷೇತ್ರದಿಂದ ಭೀಮಪ್ಪ ಲಕ್ಷಮಪ್ಪ ತಳವಾರ, ಒಳಗೊಂಡು ಪ್ರತ್ಯೇಕವಾಗಿ 3 ಜನರು ಸೇರಿ ಒಟ್ಟು 16 ಜನರು ಬ್ಯಾಂಕಿನ ಸಭಾ ಭವನದಲ್ಲಿ ಚುನಾವಣಾಧಿಕಾರಿ ಆರ್.ಬಿ.ದಮ್ಮೂರಮಠ ಅವರಿಗೆ ನಾಮಪತ್ರ ಸಲ್ಲಿಕೆ ಮಾಡಿದರು.

ಪ್ರತಿಭಾರಿಯು ಹೆಚ್ಚು ನಿರ್ದೇಶಕ ಮಂಡಳಿಯ ಆಯ್ಕೆಯು ಅವಿರೋಧ ಆಯ್ಕೆಯ ಮೂಲಕ ನಡೆಯುತ್ತಾ ಸಾಗಿ ಬಂದಿದ್ದ ದಿ.ತಾಳಿಕೋಟಿ ಸಹಕಾರಿ ಬ್ಯಾಂಕ್ ನಿರ್ದೇಶಕ ಮಂಡಳಿಯ ಚುನಾವಣೆ ಈ ಭಾರಿ ಹೊಸ ಫೇನಲ್‌ಗಳನ್ನು ರಚಿಸಿಕೊಳ್ಳುವದರ ಮೂಲಕ ನೂರಾರು ಸಂಖ್ಯೆಯ ಬೆಂಬಲಿಗರೊಂದಿಗೆ ಆಗಮಿಸಿ ನಾಮ ಪತ್ರ ಸಲ್ಲಿಕೆ ಮಾಡುತ್ತಿರುವದು ಈ ಚುನಾವಣೆಯು ಕುತುಹಲಕ್ಕೆ ಕಾರಣವಾಗಿದೆ.

ಇದೇ ದಿ.11 ರವರೆಗೆ ನಾಮ ಪತ್ರ ಸಲ್ಲಿಕೆಯ ಕೊನೇಯದಿನವಾಗಿದ್ದು ದಿ.12 ರಂದು ಪರಿಶೀಲನೆ ಬಳಿಕೆ ಅಭ್ಯರ್ಥಿಗಳ ಪಟ್ಟಿ ಪ್ರಕಟಗೊಳ್ಳಲಿದೆ. ದಿ. 13 ರಂದು ನಾಮ ಪತ್ರ ಹಿಂತೆಗೆದುಕೊಳ್ಳಲು ಕೊನೆಯ ದಿನವಾಗಿದೆ.

ಹೊಸ ಫೇನಲ್‌ನೊಂದಿಗೆ ನಾಮಪತ್ರ ಸಲ್ಲಿಕೆಗೆ ಆಗಮಿಸಿದ ಬೆಂಬಲಿಗ ಮುಖಂಡರಾದ ಎಂ. ಎಂ.ಪಾಟೀಲ, ಎಚ್.ಎಂ.ನಾಯಕ, ಗೋವಿಂದಸಿಂಗ್ ಗೌಡಗೇರಿ, ತಿಪ್ಪನಗೌಡ ಗುತ್ಯಾಳ, ಬಸನಗೌಡ ಪಾಟೀಲ(ಕೂಚಬಾಳ), ಪ್ರಕಾಶ ಹಜೇರಿ, ಪರಶುರಾಮ ತಂಗಡಗಿ, ಮುತ್ತು ಕಶೆಟ್ಟಿ, ದುಂಡಪ್ಪಗೌಡ ಪಾಟೀಲ, ಗುರಸಂಗ ಕಶೆಟ್ಟಿ, ದಸ್ತಗೀರ ಕೇಂಭಾವಿ, ಅಣ್ಣಾಜಿ ಜಗತಾಪ, ಈರಣ್ಣ ಮೈಲೇಶ್ವರ, ಬಸನಗೌಡ ಹಳ್ಳಿಪಾಟೀಲ, ರಾಘವೇಂದ್ರ ಚವ್ಹಾಣ, ರಮೇಶ ಮೋಹಿತೆ, ಸೋಮು ಗೆಜ್ಜಿ, ಮಲ್ಲು ಯಾಳವಾರ, ಅಪ್ಪು ಆನೇಸೂರ, ಎಂ. ಎಂ.ದೇವಶೆಟ್ಟಿ, ಶಾಂಗೌಡ ಕೇಸರಭಾವಿ, ರಾಜುಸಾಹುಕಾರ ಇಬ್ರಾಹಿಂಪೂರ, ಶಾಂತಗೌಡ ಪಾಟೀಲ, ಮಲ್ಲು ಮದರಕಲ್ಲ, ಪಂಚಯ್ಯ ಹಿರೇಮಠ, ಸಂಗನಗೌಡ ಅಸ್ಕಿ, ಮೊದಲಾದವರು ಉಪಸ್ಥಿತರಿದ್ದರು.

*******

## ಹುಲ್ಲೂರ ಗ್ರಾಪಂ ಅಧ್ಯಕ್ಷೆ ನೈನಾ ಉಪಾಧ್ಯಕ್ಷೆ ನೀಲಮ್ಮ ಅವಿರೋಧವಾಗಿ ಆಯ್ಕೆ



ಮುದ್ದೇಬಿಹಾಳ : ತಾಲ್ಲೂಕಿನ ಹುಲ್ಲೂರ ಗ್ರಾಪಂ ಹಿಂದಿನ ಅಧ್ಯಕ್ಷೆ ಚೆನ್ನಮ್ಮ ಮಾದರ ಉಪಾಧ್ಯಕ್ಷೆ ಸಿದ್ದಮ್ಮ ಓಲೇಕಾರ ರಾಜಿನಾಮೆ ನೀಡಿದ ಹಿನ್ನೆಲೆ ತೆರವುಗೂಂಡ ಸ್ಥಾನಕ್ಕೆ ಶುಕ್ರವಾರ ನಡೆದ ಚುನಾವಣೆಯಲ್ಲಿ ಶ್ರೀಮತಿ ನೈನಾ ಗುಂಡಪ್ಪ ಚವ್ಹಾಣ ನೂತನ ಅಧ್ಯಕ್ಷೆಯಾಗಿ ಹಾಗೂ ಉಪಾಧ್ಯಕ್ಷೆಯಾಗಿ ಶ್ರೀಮತಿ ನೀಲಮ್ಮ ಚಂದಪ್ಪ ಗೌಡರ ಅವಿರೋಧವಾಗಿ ಆಯ್ಕೆಯಾಗಿದ್ದಾರೆ ಎಂದು ಚುನಾವಣಾ ಅಧಿಕಾರಿ ತಾಪಂ ಇಒ ನಿಂಗಪ್ಪ ಮಸಳಿ ಅಧಿಕೃತ ಘೋಷಣೆಯನ್ನು ಮಾಡಿದರು.

ಸಹಾಯಕ ಚುನಾವಣೆ ಸಿಬ್ಬಂದಿ ಎಸ್ ಎಸ್ ಬಂಗಾರಗುಂಡ, ಗ್ರಾಪಂ ಚುನಾವಣೆಯಲ್ಲಿ ಇದ್ದರು.

ಈ ವೇಳೆ ಮಾತನಾಡಿದ ಕಾಂಗ್ರೆಸ್ ಪಕ್ಷದ ಮುಖಂಡ ಪಿಎಲ್ ಡಿ ಬ್ಯಾಂಕ್ ಅಧ್ಯಕ್ಷ ಬಿ ಕೆ ಬಿರಾದಾರ ಮಾತನಾಡಿ ಕಳದೆ 25 ವರ್ಷಗಳಿಂದ ಹುಲ್ಲೂರ ಗ್ರಾಪಂ ಕಾಂಗ್ರೆಸ್ ಪಕ್ಷದ ತೆಕ್ಕೆಯಲ್ಲಿದ್ದು ಕಾಂಗ್ರೆಸ್ ಬೆಂಬಲಿತ ಸದಸ್ಯರು ಅಧ್ಯಕ್ಷ ಉಪಾಧ್ಯಕ್ಷರಾಗಿ ಸೇವೆ ಸಲ್ಲಿಸುತ್ತಿದ್ದಾರೆ ಇವತ್ತು ಸಹ ಅಧಿಕಾರ ವಹಿಸಿಕೊಂಡ ಅಧ್ಯಕ್ಷೆ ಉಪಾಧ್ಯಕ್ಷೆರು ಕಾಂಗ್ರೆಸ್ ಬೆಂಬಲಿತರಾಗಿದ್ದಾರೆ ಎಂದರು.

ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಗುರು ತಾರನಾಳ ಮುಖಂಡ ಸಂತೋಷ ಚವ್ಹಾಣ ಹುಲ್ಲೂರ ಗ್ರಾಪಂ ಗೆ ತನ್ನದೆಯಾದ ಒಳ್ಳೆಯ ಇತಿಹಾಸವನ್ನು ಹೊಂದಿದೆ ಅದನ್ನು ಅಭಿವೃದ್ಧಿ ಮಾಡುವ ಮೂಲಕ ನೂತನ ಅಧ್ಯಕ್ಷ ಉಪಾಧ್ಯಕ್ಷರು ಮುಂದುವರೆಸಬೇಕು ಎಲ್ಲಾ ಸದಸ್ಯರು ಒಂದಾಗಿ ಪಕ್ಷಾತೀತವಾಗಿ ಗ್ರಾಪಂ ವ್ಯಾಪ್ತಿಯಲ್ಲಿ ಬರುವ ಗ್ರಾಮಗಳಲ್ಲಿ ಮೂಲಭೂತ ಸೌಕರ್ಯಗಳನ್ನು ಒದಗಿಸುವ ಮೂಲಕ ಅಭಿವೃದ್ಧಿ ಮಾಡಬೇಕು ಎಂದು ಕಿವಿಮಾತನ್ನು ಹೇಳಿದರು.

ಈ ವೇಳೆ ಹುಲ್ಲೂರ ಪಿಕೆಪಿ-ಎಸ್ ಅಧ್ಯಕ್ಷ ಸುರೇಶ ಹಳೆಮನಿ ಮಾತನಾಡಿದರು.

ಈ ಸಂದರ್ಭದಲ್ಲಿ ಕಾಂಗ್ರೆಸ್ ಪಕ್ಷದ ಯುವ ಮುಖಂಡರಾದ ಸಿಕಂದರ್ ಜಾನ್ವೇಕರ, ಮಹ್ಮದರಫಿಕ್ ಶಿರೋಳ, ಹೆಚ್ ಬಿ ಮೇಟಿ, ಮಹಾದೇವಪ್ಪ ಚನ್ನಿ, ಖೋಬಣ್ಣ ಚವ್ಹಾಣ, ರಾಜು ಚವ್ಹಾಣ, ಹಣಮಂತ ಮೇಟಿ, ಸಂತೋಷ ಚವ್ಹಾಣ, ವಿನೋದ ಓಲೇಕಾರ, ಸದಸ್ಯರಾದ ಹಣಮಂತ ಬಿರಾದಾರ,ದಯಾನಂದ ಹಲಕಾವಟಗಿ, ಶಿವಾನಂದ ಲಮಾಣಿ, ಚನ್ನವ್ವ ಮಾದರ,ಸುರೇಶ ಲಮಾಣಿ,ಜಯಶ್ರೀ ಬಿರಾದಾರ, ಬೀಮಾಬಾಯಿ ರಾಠೋಡ, ಜಮ್ಮುಬಾಯಿ ರಾಠೋಡ, ಶಿರಿಯಪ್ಪ ದಾಸರ,ಸಿದ್ದಮ್ಮ ವಾಲಿಕಾರ,ದಿಲೀಪಕುಮಾರ ನಾಯಕ,ಬೀಮಪ್ಪ ಮಾದರ, ಹುಲ್ಲೂರ ಗ್ರಾಪಂ

ಅಭಿವೃದ್ಧಿ ಅಧಿಕಾರಿ ಎ.ಎಸ್ ಲೋನಾರಮಠ , ಕಾರ್ಯದರ್ಶಿ ಕನೀಸಾಹ್ಮದ್ ಫಾತೀಮಾ, ಸಿಬ್ಬಂದಿಗಳಾದ ಎಲ್ ಡಿ ಮಲ್ಲಾಬಾದಿ, ಶಿವಾನಂದ ಕೋಳೂರ, ಸೇರಿದಂತೆ ಸರ್ವ ಸದಸ್ಯರು ಗಣ್ಯರು, ಗ್ರಾಮಸ್ಥರು ಸೇರಿದಂತೆ ಉಪಸ್ಥಿತ-ರಿದ್ದರು.

## ವಿದ್ಯಾರ್ಥಿನಿ ಕಾವೇರಿ ನೂಲಿನಗೆ ಗೋಲ್ಡ ಮೇಡಲ್



ತಾಳಿಕೋಟೆ, ತಾಲೂಕಿನ ಹಿರೂರ ಗ್ರಾಮದ ಮಾತೋಶ್ರೀ ಕಾಂತಮ್ಮ ಸಂಗನಗೌಡ ಪಾಟೀಲ (ಸಾಸನೂರ) ಮಹಿಳಾ ಶಿಕ್ಷಣ ಮಹಾವಿದ್ಯಾಲಯ (ಬಿ.ಇಡಿ) ಹಿರೂರ 2022-23ನೇ ಸಾಲಿನಲ್ಲಿ ನಡೆದ ಬಿ.ಇಡಿ ಪರೀಕ್ಷೆ ಫಲಿತಾಂಶ ಈಗಾಗಲೇ ಪ್ರಕಟಗೊಂಡಿದ್ದು, ಒಟ್ಟು ಫಲಿತಾಂಶವು ಶೇ. 100 ರಷ್ಟಾಗಿದೆ.

ಪರಿಕ್ಷೆಗೆ ಕುಳಿತ ಎಲ್ಲ ವಿದ್ಯಾರ್ಥಿಗಳು ಡಿಸ್ಟಿಂಕ್ಷನ್‌ನಲ್ಲಿ ಉತ್ತಿರ್ಣರಾಗಿದ್ದು ಕುಮಾರಿ ಕಾವೇರಿ ನೂಲಿನ ಇವರು ಶೇಕಡಾ 92.79 ರಷ್ಟು ಅಂಕಗಳನ್ನು ಗಳಿಸಿ ಕಾಲೇಜಿಗೆ ಪ್ರಥಮ ರ್‍ಯಾಂಕ, ಹಾಗೂ ವಿಶ್ವವಿದ್ಯಾಲಯ ಅಡಿಯಲ್ಲಿ ಬರುವ ಒಟ್ಟು 22 ಶಿಕ್ಷಣ ಮಹಾವಿದ್ಯಾಲಯದಲ್ಲಿ (ಬಿ.ಇಡಿ) ಪ್ರಥ-ಮ ರ್‍ಯಾಂಕ್ ಪಡೆದು ಕರ್ನಾಟಕ ರಾಜ್ಯ ಮಹಿಳಾ ಅಕ್ಕಮಹಾದೇವಿ ವಿಶ್ವವಿದ್ಯನಿಲಯವು ನೀಡುವ ದಿ. 9 ರಂದು ನಡೆದ 16ನೇ ಘಟಿಕೋತ್ಸವದಲ್ಲಿ ಗೊಲ್ಡಮೇಡಲ್ ಪಡೆದಿದ್ದಾರೆ.

ಕುಮಾರಿ ಶೈಲಾ ಡಿ ಪತ್ತಾರ 92.42ರಷ್ಟು ಅಂಕ ಗಳಿಸಿ ಕಾಲೇಜಿಗೆ ದ್ವಿತೀಯ ಸ್ಥಾನ ಹಾಗೂ ವಿಶ್ವವಿದ್ಯಾನಿಲಯಕ್ಕೆ 5ನೇ ರ್‍ಯಾಂಕ ಪಡೆದಿದ್ದಾರೆ.

ಈ ವಿದ್ಯಾರ್ಥಿನಿಯರ ಸಾಧನೆಗೆ ಸಂಸ್ಥೆಯ ಅಧ್ಯಕ್ಷರು ಮಾಜಿ ಶಾಸಕರಾದ ಸೋಮನಗೌಡ ಬ ಪಾಟೀಲ (ಸಾಸನೂರ) ಹಾಗೂ ಕಾರ್ಯದರ್ಶಿಗಳು, ಸದಸ್ಯರು, ಪ್ರಾಚಾರ್ಯರು, ಉಪನ್ಯಾಸಕರು ಹಾಗೂ ಸಿಬ್ಬಂಧಿವರ್ಗದವರು ಅಭಿನಂದಿಸಿದ್ದಾರೆ.

*****

## ಸರ್ಕಾರಿ ಕೆಲಸಕ್ಕೆ ಅಡ್ಡಿ: ಓರ್ವನ ಬಂಧನ



ರಬಕವಿ-ಬನಹಟ್ಟಿ,ಜ : ತಾಲೂಕಿನ ಚಿಮ್ಮಡ ಗ್ರಾಮದ ಬಸ್ ನಿಲ್ದಾಣದಲ್ಲಿ ಕಳೆದ ಜ.8 ಬುಧವಾರದಂದು ಬಸ್ ನಿರ್ವಾಹಕನ ಕಾರ್ಯಕ್ಕೆ ಅಡ್ಡಿಪಡಿಸಿದ ಮೂವರಿಂದ ಹಲ್ಲೆ ನಡೆಸಿದ ಪರಿಣಾಮ ಬನಹಟ್ಟಿ ಪೊಲೀಸರು ಗುರುವಾರ ರಾತ್ರಿ ಓರ್ವನನ್ನು ಬಂಧಿಸಿದ್ದು, ಮತ್ತಿಬ್ಬರ ಬಂಧನಕ್ಕೆ ಜಾಲ ಬೀಸಿದ್ದಾರೆ.

ಪ್ರಕರಣಕ್ಕೆ ಸಂಬಂಧಿಸಿದಂತೆ ಪ್ರಕಾಶ ಮಠಪತಿ ಎಂಬಾತನನ್ನು ಬಂಧಿಸಿದ್ದು, ಇನ್ನಿಬ್ಬರು ಆರೋಪಿಗಳಾದ ವಿರೇಶ ಮಠಪತಿ, ಶ್ರೀಶೈಲ ಮಠಪತಿ ಎಂಬುವರನ್ನು ಶೀಘ್ರ ಬಂಧಿಸಿ ವಿಚಾರಣೆ ನಡೆಸಲಾಗುವದೆಂದು ಪೊಲೀಸ್ ಮೂಲಗಳು ತಿಳಿಸಿದ್ದು, ಈ ಕುರಿತು ಫಿರ್ಯಾಧಿ ಬಸ್ ನಿರ್ವಾಹಕ ಸದಾಶಿವ ಬಂಡಿನವರಿಂದ ಮೂವರು ಆರೋಪಿಗಳ ವಿರುದ್ಧ ಬನಹಟ್ಟಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ನಡೆದಿದ್ದೇನು: ಕಳೆದ ದಿ.8 ರಂದು ಸಂಜೆ 5 ಗಂಟೆ ಸುಮಾರಿಗೆ ದೈನಂದಿನವಾಗಿ ಹೊರಡುತ್ತಿದ್ದ ವಿಜಯಪುರ-ಹುಕ್ಕೇರಿ ಬಸ್ ಬನಹಟ್ಟಿ ಬಸ್ ನಿಲ್ದಾಣದಿಂದ ಹೊರಟಿದೆ. ಭರ್ತಿ ತುಂಬಿದ ಬಸ್ ಚಲಿಸುವ ಸಂದರ್ಭ ವಿದ್ಯಾರ್ಥಿಯೋರ್ವ ಹತ್ತುವಾಗ ನಿರ್ವಾಹಕ ಬಸ್ ನಿಲ್ಲಿಸಿಲ್ಲ.

ಓಡಿ ಬಂದು ಚಲಿಸುವ ಬಸ್ ಹತ್ತಿ, ಬಸ್ ನಿಲ್ಲಿಸಲು ಆಗುವದಿಲ್ಲವೇ? ಎಂದು ಅವಾಚ್ಯ ಶಬ್ದಗಳಿಂದ ನಿಂದಿಸಿದ್ದಾನೆ. ಆ ಕಡೆ ನಿರ್ವಾಹಕನೂ ಮಾತಿಗೆ ಮಾತು ಬೆಳೆದ ನಂತರ ವಿದ್ಯಾರ್ಥಿಯು ಮೊಬೈಲ್ ಮೂಲಕ ಮನೆಯವರನ್ನು ಚಿಮ್ಮಡ ಬಸ್ ನಿಲ್ದಾಣಕ್ಕೆ ಬರುವಂತೆ ತಿಳಿಸಿದ್ದಾನೆ. ಬಸ್ ಚಿಮ್ಮಡ ಬಸ್ ನಿಲ್ದಾಣ-ಕ್ಕೆ ಬರುವದಷ್ಟೇ ತಡ ಮೂವರು ಆರೋಪಿಗಳಿಂದ ನಿರ್ವಾಹಕನನ್ನು ಬಸ್‌ನಿಂದ ಕೆಳಗಿಳಿಸಿ ಹಿಗ್ಗಾ-ಮುಗ್ಗಾ ಥಳಿಸಿ ತೀವ್ರ ಗಾಯಗೊಳಿಸಿದ್ದಾರೆ. ನಂತರ ನಿರ್ವಾಹಕನಿಂದ ಪೊಲೀಸರಿಗೆ ದೂರು ನೀಡಿದ್ದಾನೆ.

## ಕಾಕ್ಲಿಯರ್ ಇಂಪ್ಲಾಂಟ್ ಸರ್ಜರಿ ಯಶಸ್ವಿ



ಬೆಳಗಾವಿ, : ಬೆಳಗಾವಿಯ ವೈದ್ಯಕೀಯ ವಿಜ್ಞಾನ ಸಂಸ್ಥೆಯಲ್ಲಿ ಕಾಕ್ಲಿಯರ್ ಇಂಪ್ಲಾಂಟ್ ಸರ್ಜರಿಯನ್ನು ಯಶಸ್ವಿಯಾಗಿ ಜರುಗಿಸಲಾಯಿತು. ಬಿಮ್ಸ್ ನಿರ್ದೇಶಕರಾದ ಡಾ.ಅಶೋಕ ಶೆಟ್ಟಿ, ವೈದ್ಯಕೀಯರ ಅಧೀಕ್ಷಕರಾದ ಡಾ.ಈ-ರಣ್ಣ ಪಲ್ಲೇದ, ಜಿಲ್ಲಾ ಶಸ್ತ್ರ ಚಿಕಿತ್ಸಕರಾದ ಡಾ.ವಿಠ್ಠಲ ಶಿಂಧೆ ಅವರ ನೇತೃತ್ವದಲ್ಲಿ ಹಿರಿಯ ಕಾಕ್ಲಿಯರ್ ಇಂಪ್ಲಾಂಟ್ ಶಸ್ತ್ರ ಚಿಕಿತ್ಸಕರಾದ ಡಾ. ರಮೇಶ ಕುಲಕೋಡ, ಇ.ಎನ್.ಟಿ. ಶಸ್ತ್ರ ಚಿಕಿತ್ಸೆ ತಜ್ಞರಾದ ಡಾ.ಶೃತಿ.ಎಸ್. ಇ.ಎನ್.ಟಿ. ವಿಭಾಗದ ಮುಖ್ಯಸ್ಥರಾದ ಡಾ.ಸತೀಶ ಬಾಗೇವಡಿ ಅವರ ಮಾರ್ಗದರ್ಶನದಲ್ಲಿ ದಿನಾಂಕ:12-12-2024 ರಂದು ನಾಲ್ಕು ವರ್ಷದ 2 ಮಕ್ಕಳಿಗೆ ಯಶಸ್ವಿಯಾಗಿ ಕಾಕ್ಲಿಯರ್ ಇಂಪ್ಲಾಂಟ್ ಸರ್ಜ-ರಿಯನ್ನು ಯಶಸ್ವಿಯಾಗಿ ನೆರವೇರಿಸಲಾಯಿತು.

ಕಾಕ್ಲಿಯರ್ ಇಂಪ್ಲಾಂಟ್ ಒಂದು ಅತ್ಯಾಧುನಿಕ ಎಲೆಕ್ಟ್ರಾನಿಕ್ ಸಾಧನವಾಗಿದ್ದು ತೀವ್ರವಾದ ಸಂವೇಧನಾಶೀಲ ಶ್ರವಣ ನಷ್ಟ ಹೊಂದಿರುವ ಮಕ್ಕಳಿಗೆ ಅದರಲ್ಲೂ 06 ವರ್ಷದ ಒಳಗಿನ ಚಿಕ್ಕಮಕ್ಕಳಿಗೆ ಶ್ರವಣವನ್ನು ಒದಗಿಸಲು ವಿನ್ಯಾಸಗೊಳಿಸಲಾಗಿದೆ.

ಸಾಂಪ್ರದಾಯಿಕ ಶ್ರವಣ ಸಾಧನಗಳಿಂದ ಹೆಚ್ಚಿನ ಪ್ರಯೋಜನೆ ಪಡೆಯದೆ ಇರುವಂತಹವರಿಗೆ ಕರ್ನಾಟಕ ಸರ್ಕಾರವು 06 ವರ್ಷದ ಒಳಗಿನ ಶ್ರವಣ ದೋಷವುಳ್ಳ ಚಿಕ್ಕಮಕ್ಕಳಿಗೆ ಶಸ್ತ್ರ ಚಿಕಿತ್ಸೆಯನ್ನು ಸಂಪೂರ್ಣ ಉಚಿತಗೊಳಿಸಿದೆ ಎಂದು ಬಿಮ್ಸ್ ವೈದ್ಯಕೀಯ ಅಧೀಕ್ಷಕರು ತಿಳಿಸಿರುತ್ತಾರೆ.

## ಮುಧೋಳ-ಲೋಕಾಪೂರಗೆ ಕೃಷಿ ಉತ್ಪನ್ ಮಾರುಕಟ್ಟೆ : ತಿಮ್ಮಾಪುರ



ಮುಧೋಳ: ರೈತರು ಬೆಳೆದ ಬೆಳೆಗಳಿಗೆ ಯೋಗ್ಯ ಬೆಲೆ ದೊರೆಯಲು ಎಪಿಎಂಸಿ. ಅಭಿವೃದ್ಧಿಗೊಳಿಸಲು ಮಹಾಲಿಂಗಪೂರ ಕೃಷಿ ಉತ್ಪನ್ ಮಾರುಕಟ್ಟೆ ಸಮಿತಿಯ ಈ ಕ್ಷೇತ್ರವನ್ನು ವಿಭಜಿಸಿ ಮುಧೋಳ ಕೃಷಿ ಉತ್ಪನ್ನ ಮಾರುಕಟ್ಟೆ ಹಾಗು ಲೋಕಾಪೂರ ಉಪ ಮಾರುಕಟ್ಟೆ ಪ್ರಾಂಗಣ, ಸರಕಾರದಿಂದ ಘೋಷಿಸಲಾಗಿದೆ. ಎಂದು ಅಬಕಾರಿ ಸಚಿವ ಆರ್.ಬಿ. ತಿಮ್ಮಾಪುರ ಹೇಳಿದರು. ನಗರದ ತಾಪಂ. ಸಭಾ ಭವನದಲ್ಲಿ ಮುಧೋಳ ಕೃಷಿ ಉತ್ಪನ್ನ ಮಾರುಕಟ್ಟೆ ನೂತನ ಸಮೀತಿಯನ್ನು ಸನ್ಮಾನಿಸಿ ಅವರು ಮಾತನಾಡಿದರು, ಎಪಿಎಂಸಿ. ಗಳನ್ನು ಅಭಿವೃದ್ಧಿಗೊಳಿಸಿ ರೈತರಿಗೆ ಸಹಾಯ ಕಲ್ಪಿಸಲಾಗುವದು, ಮುಧೋಳ-ಲೋಕಾಪೂರ ಮಾರುಕಟ್ಟೆ ಬಲವರ್ಧನೆಗಾಗಿ ವಿವಿಧ ನೂತನ ಯೋಜನೆಗಳನ್ನು ಹಾಕಿಕೊಳ್ಳಲಾಗುವದು. ಎಪಿಎಂಸಿ. ಆವರಣದ ರಸ್ತೆಗಳ ಅಭಿವೃದ್ಧಿ, ಸ್ವಚ್ಛತೆಗೆ ಆದ್ಯತೆ ನೀಡಿ ನೂತನ ಕಚೇರಿ, ಸಭಾಭವನ ಶೀಘ್ರದಲ್ಲಿ ನಿರ್ಮಿಸಿಕೊಡಲಾಗುವದು ಎಂದು ಅವರು ಭರವಸೆ ನೀಡಿದರು. ನೂತನ ಅಧ್ಯಕ್ಷ ಸಂಗಪ್ಪ ಇಮ್ಮನ್ನವರ ಮಾತನಾಡಿದರು, ಉಪಾಧ್ಯಕ್ಷ ಬಿ.ಎಂ. ಮೆಟಗುಡ್ಡ, ಬ್ಲಾಕ್ ಕಾಂಗ್ರೇಸ ಅಧ್ಯಕ್ಷ ಅಶೋಕ ಕಿವಡಿ, ರಾಘು ಮೊಕಾಶಿ, ಮಾಂತೇಶ ಮಾಚಕನೂರ, ಉದಯ ಪಡತಾರೆ, ಮುದಕಪ್ಪ ಅಂಬಿ, ದಾನೇಶ ತಡಸಲೂರ, ಶಿವಾನಂದ ಉದಪುಡಿ, ಮಹಾಲಿಂಗ ಹುಂಡೇಕಾರ, ಮಲ್ಲಪ್ಪ ಮಂಟೂರ, ಸರ್ವಸದಸ್ಯರು, ತಾಪಂ.ಈಓ. ಉಮೇಶ ಸಿದ್ನಾಳ, ಎಪಿಎಂಸಿ. ಅಧಿಕಾರಿ ಎ.ಡಿ. ರೆಡ್ಡಿ, ಎಲ್.ಎಂ. ಉದ್ದಪ್ಪನವರ, ಆರ್.ಎಚ್. ರಾಠೋಡ, ವಿ.ಪಿ. ಬಾಡಗಿ ಇತರರಿದ್ದರು.

## ಜ. 27ಕ್ಕೆ ಮಹಾಪೌರರ ಹಾಗೂ ಉಪ ಮಹಾಪೌರರ ಸ್ಥಾನಕ್ಕೆ ಚುನಾವಣೆ

ವಿಜಯಪುರ : ವಿಜಯಪುರ ಮಹಾನಗರ ಪಾಲಿಕೆಯ 22ನೇ ಅವಧಿಗೆ ಮಹಾಪೌರರ ಹಾಗೂ ಉಪ ಮಹಾಪೌರರ ಸ್ಥಾನಗಳಿಗೆ ನಡೆಯುವ ಚುನಾವಣೆಯನ್ನು ಜ.27ರಂದು ನಿಗದಿಪಡಿಸಲಾಗಿದೆ. ಅಂದು ಬೆಳಿಗ್ಗೆ 9 ಗಂಟೆಯಿಂದ 11ಗಂಟೆ ವರೆಗೆ ನಾಮಪತ್ರ ಸ್ವೀಕರಿಸಲಾಗುವುದು. ಮಧ್ಯಾಹ್ನ 1ಗಂಟೆ ಯಿಂದ ಚುನಾವಣೆ ನಡೆದು ಅಂದೇ ಪಲಿತಾಂಶ ಘೋಷಣೆ ಮಾಡಲಾಗುವುದು ಎಂದು ಬೆಳಗಾವಿ ವಿಭಾಗದ ಪ್ರಾದೇಶಿಕ ಆಯುಕ್ತ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

BELAGINA SURYODHYA KANNADA DAILY MORNING Editor, Printer, PUblisher and Owned By GURURAJ IRAPPA KADAM Plot No.2743 NEAR KEB POWER HOUSE RAMTEERTH NAGAR, SHIVAJI NAGAR BELAGAVI-590016
DIST-BELAGAVI,STATE KARNATAKA PRINTED At M/S LAXMI PRINTERS, No. 627,Auto Nagar,Belagavi,Dist- Belagavi Karnataka, RNI No. KARKAN/2019/77640, Volume : 06, Issue : 285, Postal Reg No. PMG/KA/NK/BM/135/22-24 / POST AT Vantamury Colony Post Office